ಸಂಪಾದಕರು :
ಎಂ.ಎಸ್. ವಿಕಾಸ್

ಶುಕ್ರವಾರ, ಮಾರ್ಚ್ 22, 2024
ದಾವಣಗೆರೆ, ಪುಟ : 6 ರೂ : 5
ಸಂಪುಟ : 50 ಸಂಚಿಕೆ : 311 RNI : 27369/75

# ಜನತಾವಾಣಿ

ಮಧ್ಯ ಕರ್ನಾಟಕದ ಆಪ್ತ ಒಡನಾಡಿ

50 1974 2023

janathavani@mac.com
www.janathavani.com
08192 254736 91642 99999




## ಪ್ರಭಾ ಮಲ್ಲಿಕಾರ್ಜುನ್‌ಗೆ ಕಾಂಗ್ರೆಸ್ ಟಿಕೆಟ್



ಬೆಂಗಳೂರು, ಮಾ. 21 – ಲೋಕಸಭಾ ಚುನಾವಣೆಗಾಗಿ ಕಾಂಗ್ರೆಸ್ ಪಕ್ಷ ತನ್ನ ಎರಡನೇ ಪಟ್ಟಿಯಲ್ಲಿ ಕರ್ನಾಟಕದ 17 ಅಭ್ಯರ್ಥಿಗಳ ಹೆಸರುಗಳನ್ನು ಪ್ರಕಟಿಸಿ ದ್ದು, ದಾವಣಗೆರೆ ಕ್ಷೇತ್ರದ ಟಿಕೆಟ್ ಅನ್ನು ಪ್ರಭಾ ಮಲ್ಲಿಕಾರ್ಜುನ್ ಅವರಿಗೆ ನೀಡಲಾಗಿದೆ.

ಕಾಂಗ್ರೆಸ್ ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ ಅವರ ಸೊಸೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಅವರ ಪತ್ನಿಯಾಗಿರುವ ಪ್ರಭಾ ಅವರು ಬಿಜೆಪಿಯ ಗಾಯತ್ರಿ ಸಿದ್ದೇಶ್ವರ ಅವರನ್ನು ಎದುರಿಸಲಿದ್ದಾರೆ.

ಕಾಂಗ್ರೆಸ್ ಪಟ್ಟಿಯಲ್ಲಿ ನಿರೀಕ್ಷೆಯಂತೆಯೇ ಹಿರಿಯ ಮುಖಂಡರು ಹಾಗೂ ಸಚಿವರ ಕುಟುಂಬ ದವರಿಗೆ ಗಣನೀಯ ಸಂಖ್ಯೆಯ ಟಿಕೆಟ್ ನೀಡಲಾಗಿದೆ. ಶಾಮನೂರು ಕುಟುಂಬದಿಂದ ಮೂರನೆಯವರು ಈಗ ಜನಪ್ರತಿನಿಧಿಯಾಗುವ ಅವಕಾಶ ಪಡೆದಿದ್ದಾರೆ.

ಎ.ಐ.ಸಿ.ಸಿ. ಅಧ್ಯಕ್ಷ ಎಂ. ಮಲ್ಲಿಕಾರ್ಜುನ ಖರ್ಗೆ ಅವರ ಅಳಿಯ ರಾಧಾಕೃಷ್ಣ ದೊಡ್ಡಮನಿ ಅವರು ಕಲಬುರಗಿ ಕ್ಷೇತ್ರಕ್ಕೆ ಟಿಕೆಟ್ ಪಡೆದಿದ್ದಾರೆ.

ಸಚಿವರಾದ ಸತೀಶ್ ಜಾರಕಿಹೊಳಿ ಅವರ ಪುತ್ರಿ ಪ್ರಿಯಾಂಕ ಜಾರಕಿಹೊಳಿ ಚಿಕ್ಕೋಡಿಯಿಂದ ಸ್ಪರ್ಧಿಸಲಿದ್ದಾರೆ. ಸಚಿವ ರಾಮಲಿಂಗಾರೆಡ್ಡಿ ಅವರ ಮಗಳು ಸೌಮ್ಯ ರೆಡ್ಡಿ (ಬೆಂಗಳೂರು ದಕ್ಷಿಣ), ಶಿವಾನಂದ ಪಾಟೀಲ್ ಅವರ ಮಗಳು ಸೌಮ್ಯ ಪಾಟೀಲ್ (ಬಾಗಲಕೋಟೆ), ಲಕ್ಷ್ಮಿ ಹೆಬ್ಬಾಳ್ಕರ್ ಅವರ ಪುತ್ರ ಮೃಣಾಲ್ ರವೀಂದ್ರ ಹೆಬ್ಬಾಳ್ಕರ್ (ಬೆಳಗಾವಿ) ಹಾಗೂ ಈಶ್ವರ್ ಖಂಡ್ರೆ ಅವರ ಪುತ್ರ ಸಾಗರ್ (4ನೇ ಪುಟಕ್ಕೆ)

### ಈ ಬಾರಿ ದಾವಣಗೆರೆಯಲ್ಲಿ ಮಹಿಳಾ ವಿಜಯ

ದಾವಣಗೆರೆ, ಮಾ. 21 – ದಾವಣಗೆರೆ ಲೋಕಸಭಾ ಕ್ಷೇತ್ರದಲ್ಲಿ ಮೊದಲ ಬಾರಿಗೆ ಮಹಿಳೆಯೊಬ್ಬರು ಜಯಮಾಲೆ ಧರಿಸುವುದು ಖಚಿತವಾಗಿದೆ. ಬಿಜೆಪಿಯಿಂದ ಹಾಲಿ ಸಂಸದ ಜಿ.ಎಂ. ಸಿದ್ದೇಶ್ವರ ಅವರ ಪತ್ನಿ ಗಾಯತ್ರಿ ಸಿದ್ದೇಶ್ವರ ಕಣಕ್ಕಿಳಿದಿದ್ದಾರೆ. ಕಾಂಗ್ರೆಸ್‌ನಿಂದ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಅವರ ಪತ್ನಿ ಪ್ರಭಾ ಮಲ್ಲಿಕಾರ್ಜುನ್ ಸ್ಪರ್ಧಿಸಲಿದ್ದಾರೆ.

**ಕಾಂಗ್ರೆಸ್, ಬಿಜೆಪಿ ಎರಡರಿಂದಲೂ ಮಹಿಳಾ ಅಭ್ಯರ್ಥಿಗಳು**

ದಾವಣಗೆರೆ ಕ್ಷೇತ್ರದಲ್ಲಿ ಇದುವರೆಗೂ ಮಹಿಳೆಯೊಬ್ಬರು ಆಯ್ಕೆಯಾಗಲು ಸಾಧ್ಯವಾಗಿರಲಿಲ್ಲ. ಈ ಬಾರಿ ಬಿಜೆಪಿ (4ನೇ ಪುಟಕ್ಕೆ)

## ದೆಹಲಿ ಮುಖ್ಯಮಂತ್ರಿ ಕೇಜ್ರಿವಾಲ್ ಬಂಧನ



**ಅಬಕಾರಿ ನೀತಿಯ ಅಕ್ರಮ ಹಣ ಪ್ರಕರಣ**

ನವದೆಹಲಿ, ಮಾ. 21 – ಅಬಕಾರಿ ನೀತಿಯ ಅಕ್ರಮ ಹಣ ಪ್ರಕರಣಕ್ಕೆ ಸಂಬಂಧಿಸಿದಂತೆ ದೆಹಲಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಅವರನ್ನು ಜಾರಿ ನಿರ್ದೇಶನಾಲಯ ಇಂದು ಬಂಧಿಸಿದೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ತಮ್ಮ ವಿರುದ್ಧ ಬಲವಂತದ ಕ್ರಮ ತೆಗೆದುಕೊಳ್ಳದಂತೆ ಕೇಜ್ರಿವಾಲ್ ದಾಖಲಿಸಿದ್ದ ಅರ್ಜಿಯನ್ನು ದೆಹಲಿ ಹೈಕೋರ್ಟ್ ತಳ್ಳಿ ಹಾಕಿತ್ತು. ನಂತರ ಜಾರಿ ನಿರ್ದೇಶನಾಲಯ ಮುಖ್ಯಮಂತ್ರಿಯನ್ನು ಬಂಧಿಸಿದೆ.

ಹೈಕೋರ್ಟ್ ಆದೇಶದ ನಂತರ ಜಾರಿ ನಿರ್ದೇಶನಾಲಯದ ತಂಡ ಮುಖ್ಯಮಂತ್ರಿಗಳ ಅಧಿಕೃತ ನಿವಾಸಕ್ಕೆ ತೆರಳಿತು. ಮುಖ್ಯಮಂತ್ರಿ ನಿವಾಸಕ್ಕೆ ತಂಡ ತೆರಳಿದ ಎರಡು ಗಂಟೆ ನಂತರ ಕೇಜ್ರಿವಾಲ್ ಬಂಧಿಸಲಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಶುಕ್ರವಾರ ಕೇಜ್ರಿವಾಲ್‌ರನ್ನು ನ್ಯಾಯಾ ತಮ್ಮ ವಿರುದ್ಧ ಕಳಿಸಲಾಗುತ್ತಿರುವ ಸಮನ್ಸ್‌ಗಳು ಅಕ್ರಮ ಎಂದು ಕೇಜ್ರಿವಾಲ್ ವಾದಿಸಿದ್ದರು.

ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಬಂಧನದ ಕ್ರಮ ತೆಗೆದುಕೊಳ್ಳುತ್ತಿರುವ ವೇಳೆ, ಮುಖ್ಯಮಂತ್ರಿ ನಿವಾಸದ ಹೊರಗೆ ದೆಹಲಿ ಪೊಲೀಸ್ ಹಾಗೂ (2ನೇ ಪುಟಕ್ಕೆ)

### ಹಾಲಿ ಮುಖ್ಯಮಂತ್ರಿ ಬಂಧನ ದೇಶದಲ್ಲೇ ಮೊದಲ ಪ್ರಕರಣ

ನವದೆಹಲಿ, ಮಾ. 21 – ದೆಹಲಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಅವರನ್ನು ಜಾರಿ ನಿರ್ದೇಶನಾಲಯ ಅಕ್ರಮ ಹಣ ಪ್ರಕರಣದಲ್ಲಿ ಬಂಧಿಸಿದೆ. ಮುಖ್ಯಮಂತ್ರಿಯಾಗಿರುವಾಗಲೇ ಬಂಧನಕ್ಕೊಳಗಾದ ದೇಶದ ಮೊದಲ ಪ್ರಕರಣ ಇದಾಗಿದೆ.

ಜಾರಿ ನಿರ್ದೇಶನಾಲಯ ಹಲವು ಬಾರಿ ಸಮನ್ಸ್ ಕಳಿಸಿದರೂ ಕೇಜ್ರಿವಾಲ್ ವಿಚಾರಣೆಗೆ ಹಾಜರಾಗಿರಲಿಲ್ಲ. ಗುರುವಾರದಂದು ಬಲವಂತದ ಕ್ರಮದಿಂದ ರಕ್ಷಣೆ ಕೋರಿ ಕೇಜ್ರಿವಾಲ್ ದಾಖಲಿಸಿದ್ದ ಅರ್ಜಿಯನ್ನು ದೆಹಲಿ ಹೈಕೋರ್ಟ್ ತಳ್ಳಿ ಹಾಕಿತ್ತು. ಇದರಿಂದಾಗಿ ಕೇಜ್ರಿವಾಲ್ ಬಂಧನ ಬಹುತೇಕ ಖಚಿತವಾಗಿತ್ತು.

ಆದರೆ, ಕೇಜ್ರಿವಾಲ್ ತಮ್ಮ ಹುದ್ದೆಗೆ ರಾಜೀನಾಮೆ ನೀಡಿರಲಿಲ್ಲ. ಅಲ್ಲದೇ, ಜೈಲಿನಲ್ಲಿದ್ದುಕೊಂಡೇ (2ನೇ ಪುಟಕ್ಕೆ)

## ಅಭ್ಯರ್ಥಿ ಬದಲಿಸದಿದ್ದರೆ ಅಚ್ಚರಿ ಅಭ್ಯರ್ಥಿ ಕಣಕ್ಕೆ



**ಬಂಡಾಯ ಬಣದ ಬಿಜೆಪಿ ಮುಖಂಡರ ಎಚ್ಚರಿಕೆ**

ದಾವಣಗೆರೆ, ಮಾ. 21- ಪಕ್ಷದ ವರಿಷ್ಠರು ದಾವಣಗೆರೆ ಲೋಕಸಭಾ ಕ್ಷೇತ್ರದ ಅಭ್ಯರ್ಥಿಯನ್ನು ಬದಲಿಸದೇ ಹೋದಲ್ಲಿ ಅಚ್ಚರಿಯ ಅಭ್ಯರ್ಥಿಯನ್ನು ಕಣಕ್ಕಿಳಿಸುವುದಾಗಿ ಬಿಜೆಪಿಯ ಬಂಡಾಯ ಬಣದ ಮುಖಂಡರು ಹೇಳಿದ್ದಾರೆ.

ನಗರದ ವಿದ್ಯಾನಗರದಲ್ಲಿರುವ ಬಿಜೆಪಿ ಮುಖಂಡ ಲೋಕಿಕೆರೆ ನಾಗರಾಜ್ ಅವರ ನಿವಾಸದಲ್ಲಿ ಗುರುವಾರ ಸಂಜೆ ಮಾಜಿ ಸಚಿವ ಎಸ್.ಎ. ರವೀಂದ್ರನಾಥ್ ಅಧ್ಯಕ್ಷತೆಯಲ್ಲಿ ಮತ್ತೆ ಸಭೆ ನಡೆಸಿದ ಮುಖಂಡರು, ನಂತರ ಮಾಧ್ಯಮದವರೊಂದಿಗೆ ಮಾತನಾಡಿದರು.

ಮಾಜಿ ಸಚಿವ ಜಿ. ಕರುಣಾಕರ ರೆಡ್ಡಿ ಮಾತನಾಡಿ, ದೇಶದಲ್ಲಿ ಮತ್ತೆ ಬಿಜೆಪಿ ಅಧಿಕಾರಕ್ಕೆ ಬರಬೇಕು. ನರೇಂದ್ರ ಮೋದಿ ಪ್ರಧಾನಿಯಾಗಬೇಕು ಎಂಬುದು ನಮ್ಮೆಲ್ಲರ ಒತ್ತಾಸೆಯಾಗಿದೆ. ಈ ವಿಚಾರದಲ್ಲಿ ಯಾವುದೇ ಭಿನ್ನಾಭಿಪ್ರಾಯವಿಲ್ಲ. ಆದರೆ ದಾವಣಗೆರೆ ಲೋಕಸಭಾ ಕ್ಷೇತ್ರದ ಅಭ್ಯರ್ಥಿಯನ್ನು ಬದಲಾಯಿಸಬೇಕು ಎಂಬುದು ನಮ್ಮ ಹಾಗೂ ಕ್ಷೇತ್ರದ (2ನೇ ಪುಟಕ್ಕೆ)

## ಮೇ 8ರ ಪಿಎಸ್ಐ ಲಿಖಿತ ಪರೀಕ್ಷೆ ಮುಂದೂಡಿಕೆ

ಬೆಂಗಳೂರು, ಮಾ. 21 - ರಾಜ್ಯದಲ್ಲಿ ಲೋಕಸಭಾ ಚುನಾವಣೆ ದಿನಾಂಕಗಳ ಘೋಷಣೆ ಹಿನ್ನೆಲೆಯಲ್ಲಿ ಮೇ 8ರಂದು ನಡೆಸಲು ನಿಗದಿಯಾಗಿದ್ದ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ (ಪಿಎಸ್ಐ) ಹುದ್ದೆಗಳ ಲಿಖಿತ ಪರೀಕ್ಷೆಗಳನ್ನು ಮುಂದೂಡಲಾಗಿದೆ.

ಈ ಸಂಬಂಧ ಇಂದಿಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಪ್ರಕಟಣೆ ನೀಡಿದೆ. ಪಿಎಸ್ಐ ಪರೀಕ್ಷೆಗಳ ಪರಿಷ್ಕೃತ ದಿನಾಂಕವನ್ನು ಚುನಾವಣೆ ಮುಗಿದ ನಂತರ ತಿಳಿಸಲಾಗುವುದು ಎಂದು ಪ್ರಾಧಿಕಾರದ ಕಾರ್ಯ ನಿರ್ವಾಹಕ ನಿರ್ದೇಶಕಿ ಎಸ್.ರಮ್ಯಾ ತಿಳಿಸಿದ್ದಾರೆ.

## ಶೋಭಾ ಕರಂದ್ಲಾಜೆ ವಿರುದ್ಧ ಪ್ರಕರಣ ದಾಖಲು



ಬೆಂಗಳೂರು, ಮಾ. 21 – ತಮಿಳುನಾಡಿನ ಜನರ ಕುರಿತು ಕೇಂದ್ರ ಸಚಿವ ಹಾಗೂ ಬಿಜೆಪಿ ನಾಯಕಿ ಶೋಭಾ ಕರಂದ್ಲಾಜೆ ಆಡಿರುವ (4ನೇ ಪುಟಕ್ಕೆ)

## ಜನಾಭಿಪ್ರಾಯ ಸಂಗ್ರಹಣೆ ನಂತರ ಮುಂದಿನ ನಡೆ

### ಕಾರ್ಯಕರ್ತರ ಸಭೆಯಲ್ಲಿ ಜಿ.ಬಿ. ವಿನಯ್‌ಕುಮಾರ್



ದಾವಣಗೆರೆ, ಮಾ. 21- ಶೀಘ್ರದಲ್ಲಿಯೇ ಲೋಕಸಭಾ ವ್ಯಾಪ್ತಿಯಲ್ಲಿ ಪ್ರತಿ ನಿತ್ಯ ಇಪ್ಪತ್ತು ಹಳ್ಳಿಗಳಿಗೆ ಭೇಟಿ ನೀಡಿ, ಅಲ್ಲಿನ ಜನಾಭಿಪ್ರಾಯ ಸಂಗ್ರಹಣೆ ಮಾಡಿ, ಇನ್ನು ಹದಿನೈದು ದಿನಗಳಲ್ಲಿ ರಾಜಕೀಯದ ಮುಂದಿನ ನಡೆಯ ಬಗ್ಗೆ ನಿರ್ಧಾರ ಕೈಗೊಳ್ಳುವುದಾಗಿ ಭಾರತೀಯ ರಾಷ್ಟ್ರೀಯ ಯುವ ಕಾಂಗ್ರೆಸ್ ಔಟ್‌ರೀಚ್ ವಿಭಾಗದ ಕರ್ನಾಟಕ ಉಪಾಧ್ಯಕ್ಷ ಜಿ.ಬಿ. ವಿನಯ್ ಕುಮಾರ್ ತಿಳಿಸಿದರು.

ನಗರದ ತಮ್ಮ ಜನಸಂಪರ್ಕ ಕಚೇರಿಯಲ್ಲಿ ಇಂದು ಏರ್ಪಾಡಾಗಿದ್ದ ಕಾಂಗ್ರೆಸ್ ಕಾರ್ಯಕರ್ತರು, ಅಭಿಮಾನಿಗಳ ಸಭೆಯಲ್ಲಿ ಅವರು ಮಾತನಾಡಿದರು.

ಕಾಂಗ್ರೆಸ್ ಪಕ್ಷದ ಪ್ರಬಲ ಅಕಾಂಕ್ಷಿಯಾಗಿದ್ದ ಎಐಸಿಸಿಇಸಿ ಸಭೆಯಲ್ಲಿ ನನ್ನ ಹೆಸರು ಮುಂಚೂಣಿಯಲ್ಲಿತ್ತು. ಕೊನೆಗಳಿಗೆಯಲ್ಲಿ ಟಿಕೆಟ್ ಕೈ ತಪ್ಪಿದ್ದು ಬೇಸರ ಮೂಡಿಸಿದೆ. ಆದರೂ ನಾನು ಅಳುವ ವ್ಯಕ್ತಿಯಂತೂ ಅಲ್ಲ. ಸಾಮಾಜಿಕ ನ್ಯಾಯಕ್ಕೆ ಅನ್ಯಾಯವಾಗಿದೆ ಎಂದರು. ಗ್ರಾಮಗಳನ್ನು ಸುತ್ತಿದ ಬಳಿಕ ಬಂಡಾಯವೋ, ಪಕ್ಷೇತರ ಅಭ್ಯರ್ಥಿಯಾಗಬೇಕೆಂಬ ಬಗ್ಗೆ ಜನರ ಅಭಿಪ್ರಾಯದ ಮೇರೆಗೆ ನಿರ್ಧಾರ ಕೈಗೊಳ್ಳಲಾಗುವುದು. ನನಗೆ ಅವಕಾಶ ಸಿಕ್ಕರೆ ಮಾದರಿ ಸಂಸದನಾಗಿ ಕೆಲಸ ಮಾಡಿ (2ನೇ ಪುಟಕ್ಕೆ)




|| ಶ್ರೀ ಹೊನ್ನಮ್ಮದೇವಿ ಪ್ರಸನ್ನ ||

## ಕೈಲಾಸ ಶಿವಗಣಾರಾಧನಾ ಆಹ್ವಾನ



ದಾವಣಗೆರೆ ಜಿಲ್ಲೆ, ಹರಿಹರ ನಗರ ವಾಸಿ
**ಅಮರಾವತಿ ಬಾಳೆಮರದ ಎ.ಬಿ.ಎಂ. ಮಲ್ಲೇಶಪ್ಪನವರು ಮತ್ತು ಮಕ್ಕಳು**
ಇವರು ಮಾಡುವ ವಿಜ್ಞಾಪನೆಗಳು.
14.03.2024ನೇ ಗುರುವಾರ ಮಧ್ಯಾಹ್ನ 03.10ಕ್ಕೆ ನನ್ನ ಧರ್ಮಪತ್ನಿ
**ಶ್ರೀಮತಿ ವಿಶಾಲಾಕ್ಷಮ್ಮ (ನೀಲಮ್ಮ)**
ಇವರು ಲಿಂಗೈಕ್ಯರಾಗಿರುತ್ತಾರೆ. ಇವರ
**'ಕೈಲಾಸ ಶಿವಗಣಾರಾಧನೆ'ಯನ್ನು**
ದಿನಾಂಕ : 22.03.2024ರ ಶುಕ್ರವಾರ ಬೆಳಿಗ್ಗೆ : 10.00ಕ್ಕೆ ಹರಿಹರದ ವಿದ್ಯಾನಗದಲ್ಲಿರುವ ಮೃತರ ಸ್ವಗೃಹದಲ್ಲಿ ನೆರವೇರಿಸಲು ಗುರು-ಹಿರಿಯರು ನಿಶ್ಚಯಿಸಿರುವುದರಿಂದ ತಾವುಗಳು ಆಗಮಿಸಿ, ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿ.

ಇಂತಿ ದುಃಖತಪ್ತರು :

**ಬಾಳೆಮರದ ಎ.ಬಿ.ಎಂ. ಮಲ್ಲೇಶಪ್ಪ ಮತ್ತು ಮಕ್ಕಳು, ಸೊಸೆಯಂದಿರು, ಮೊಮ್ಮಕ್ಕಳು**
**ಮಂಜುನಾಥ್ ಬಿ.ಎಂ., ಗಾಯತ್ರಿ ಬಿ.ಎಂ., ವಿಶ್ವನಾಥ್ ಬಿ.ಎಂ.**
**ವಿಜಯಕುಮಾರ್ ಬಿ.ಎಂ.**, ನಗರಸಭೆ ಸದಸ್ಯರು, ಹರಿಹರ.
**ಬಾಳೆಮರದ ವಂಶಸ್ಥರು, ಅಮರಾವತಿ ಗ್ರಾಮಸ್ಥರು ಹಾಗೂ ಬಂಧು-ಮಿತ್ರರು.**

ವಿ.ಸೂ. : ಇದನ್ನೇ ವೈಯಕ್ತಿಕ ಆಹ್ವಾನವೆಂದು ಭಾವಿಸಿ ಆಗಮಿಸಬೇಕಾಗಿ ವಿನಂತಿ.

# ಕಾಂಗ್ರೆಸ್ ಸೋಲಿಗೆ ನೆಪ ಹುಡುಕುತ್ತಿದೆ

**ಬಿಜೆಪಿ**

ನವದೆಹಲಿ, ಮಾ. 21 – ಆದಾಯ ತೆರಿಗೆ ಇಲಾಖೆಯು ತೆರಿಗೆಗೆ ಸಂಬಂಧಿಸಿದಂತೆ ತೆಗೆದುಕೊಂಡ ಕ್ರಮವನ್ನು ಪ್ರಜಾಪ್ರಭುತ್ವದ ವಿರುದ್ಧದ ಕ್ರಮ ಎಂದು ಕಾಂಗ್ರೆಸ್ ಹೇಳಿರುವುದನ್ನು ಬಿಜೆಪಿ ತರಾಟೆಗೆ ತೆಗೆದುಕೊಂಡಿದೆ.

ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಸೋಲು ಖಚಿತವಾಗಿದೆ, ಈ ಸೋಲಿಗೆ ನೆಪಗಳನ್ನು ಹುಡುಕಲಾಗುತ್ತಿದೆ. ಕಾಂಗ್ರೆಸ್ ಪಕ್ಷ ಬೇಜವಾಬ್ದಾರಿ ಹೇಳಿಕೆ ನೀಡುತ್ತಿದೆ ಎಂದು ಬಿಜೆಪಿ ನಾಯಕ ರವಿ ಶಂಕರ್ ಪ್ರಸಾದ್ ಆರೋಪಿಸಿದ್ದಾರೆ.

ಬ್ಯಾಂಕ್ ಖಾತೆಗಳನ್ನು ತಡೆದ ಕ್ರಮಕ್ಕಾಗಿ ನ್ಯಾಯಾಲಯ ಹಾಗೂ ಚುನಾವಣಾ ಆಯೋಗಗಳಂತಹ ಸಂಸ್ಥೆಗಳನ್ನು ಪ್ರಶ್ನಿಸಿದ್ದಕ್ಕಾಗಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಕ್ಷಮೆ ಯಾಚಿಸಬೇಕು ಎಂದೂ ಅವರು ಒತ್ತಾಯಿಸಿದ್ದಾರೆ.

ಭಾರತಲ್ಲಿ ಈಗ ಪ್ರಜಾಪ್ರಭುತ್ವ ಇಲ್ಲ. ಭಾರತ ವಿಶ್ವದ ಅತಿ ದೊಡ್ಡ ಪ್ರಜಾಪ್ರಭುತ್ವ ಎಂದು ಹೇಳುವುದು ಸಂಪೂರ್ಣ ಸುಳ್ಳು. ಪ್ರಧಾನ ಮಂತ್ರಿ ನರೇಂದ್ರ ಮೋದಿ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಷಾ ಅವರು ಕಾಂಗ್ರೆಸ್ ಪಕ್ಷದ ಖಾತೆಗಳ ತಡೆಗೆ ಅಪರಾಧಿಕ ಕ್ರಮ ತೆಗೆದುಕೊಂಡಿದ್ದಾರೆ ಎಂದು ರಾಹುಲ್ ಗಾಂಧಿ ಹೇಳಿದ್ದರು.

ಈ ಹೇಳಿಕೆಯನ್ನು ತರಾಟೆಗೆ ತೆಗೆದುಕೊಂಡಿರುವ ಪ್ರಸಾದ್, ಕಾಂಗ್ರೆಸ್ ನಾಯಕರಾದ ರಾಹುಲ್ ಗಾಧಿ ಹಾಗೂ ಸೋನಿಯಾ ಗಾಂಂಧಿ ಅವರು ಭಾರತದ ಪ್ರಜಾಪ್ರಭುತ್ವವನ್ನು ಅವಮಾನಿಸಬಾರದು. ಭಾರತ ಹಾಗೂ ಅದರ ಪ್ರಜಾಪ್ರಭುತ್ವ ನಿಮಗಿಂತ ಉನ್ನತವಾಗಿವೆ ಎಂದಿದ್ದಾರೆ. ಕಾಂಗ್ರೆಸ್ ಪಕ್ಷ ಸಮಯಕ್ಕೆ ಸರಿಯಾಗಿ ಆದಾಯ ತೆರಿಗೆ ರಿಟರ್ನ್ ದಾಖಲಿಸಿಲ್ಲ ಹಾಗೂ ಇತರೆ ಪ್ರಕ್ರಿಯೆಗಳನ್ನು ಪಾಲಿಸಿಲ್ಲ. ಇದರಿಂದಾಗಿ ಆ ಪಕ್ಷದ ಖಾತೆಗಳನ್ನು ತಡೆಯಲಾಗಿದೆ. ಕಾಂಗ್ರೆಸ್ ಮನವಿಯನ್ನು ದೆಹಲಿ ಹೈಕೋರ್ಟ್ ಸಹ ಇತ್ತೀಚೆಗೆ ತಳ್ಳಿ ಹಾಕಿ ತರಾಟೆಗೆ ತೆಗೆದುಕೊಂಡಿತ್ತು ಎಂದೂ ಪ್ರಸಾದ್ ಹೇಳಿದ್ದಾರೆ.

# ಅಬಕಾರಿ ಅಕ್ರಮ ತಡೆಗಟ್ಟಲು ತಂಡಗಳ ರಚನೆ

ದಾವಣಗೆರೆ, ಮಾ. 21- ಲೋಕಸಭಾ ಚುನಾವಣೆಯನ್ನು ಶಾಂತಿಯುತ, ಪಾರದರ್ಶಕ ಮತ್ತು ನಿಷ್ಪಕ್ಷಪಾತವಾಗಿ ನಡೆಸಲು ಅಕ್ರಮ ಕಳ್ಳ ಭಟ್ಟಿ ತಯಾರಿಕೆ, ನಕಲಿ ಮದ್ಯ, ಸರಾಯಿ, ಅಕ್ರಮ ಮದ್ಯ ಹಂಚಿಕೆ, ಮದ್ಯ, ಮಾದಕ ವಸ್ತುಗಳ ಸರಬರಾಜು ತಡೆಗಟ್ಟಲು ಜಿಲ್ಲೆಯಾದ್ಯಂತ ಕಟ್ಟುನಿಟ್ಟಿನ ಎಚ್ಚರ ವಹಿಸಲು ಅಬಕಾರಿ ಇಲಾಖೆ ಅಧಿಕಾರಿಗಳ ತಂಡ ರಚಿಸಲಾಗಿದೆ.

ನಕಲಿ ಮದ್ಯ, ಅಕ್ರಮ ಮದ್ಯ ಹಂಚಿಕೆ, ಮಾದಕ ವಸ್ತುಗಳ ಸರಬರಾಜು ಸೇರಿದಂತೆ ಇತರೆ ಅಕ್ರಮಗಳು ಕಂಡುಬಂದಲ್ಲಿ ಟೋಲ್ ಫ್ರೀ ಸಂಖ್ಯೆ 18004250379 ಗೆ ಕರೆ ಮಾಡಬಹುದಾಗಿದೆ.

ಉಳಿದಂತೆ ಅಬಕಾರಿ ಉಪ ಆಯುಕ್ತರ ಕಚೇರಿ ದೂರವಾಣಿ 08192-235316, 9449597061, 9449597063. ದಾವಣಗೆರೆ ಉಪವಿಭಾಗ ಉಪ ಅಧೀಕ್ಷಕರಿಗೆ 08192-225042, 9449597064, 9449597065, ಹೊನ್ನಾಳಿ ಉಪವಿಭಾಗದ ಉಪಾಧೀಕ್ಷಕರಿಗೆ 08188-295202, 9449597066, 9449597067, ಅಬಕಾರಿ ನಿರೀಕ್ಷಕರು ದಾವಣಗೆರೆ ವಲಯ-1 ಕ್ಕೆ 08192-224177, ವಲಯ-2 08192-221150, ಹರಿಹರ 08192-242166, ಚನ್ನಗಿರಿ 08189-295445, ಹೊನ್ನಾಳಿ ವಲಯ ಅಬಕಾರಿ ನಿರೀಕ್ಷಕರಿಗೆ 08188-295315 ಗೆ ಕರೆ ಮಾಡಿ ಮಾಹಿತಿ ನೀಡಬಹುದಾಗಿದೆ.

# ಜಿಗಳಿಯಲ್ಲಿ ನಾಳೆ ರಂಗನಾಥ ಸ್ವಾಮಿ ತೇರು : ಇಂದು ಕಂಕಣಧಾರಣೆ



ಮಲೇಬೆನ್ನೂರು ಸಮೀಪದ ಜಿಗಳಿ ಗ್ರಾಮದ ಆರಾಧ್ಯ ದೈವ ಶ್ರೀ ರಂಗನಾಥ ಸ್ವಾಮಿ ರಥೋತ್ಸವವು ನಾಳೆ ಶನಿವಾರ ಜರುಗಲಿದೆ.

ರಥೋತ್ಸವದ ಅಂಗವಾಗಿ ಇಂದು ರಾತ್ರಿ 8.30ಕ್ಕೆ ರಥಕ್ಕೆ ಕಂಕಣಧಾರಣೆ ಮಾಡಲಾಗುವುದು. ನಾಳೆ ಶನಿವಾರ ಬೆಳಿಗ್ಗೆ 8 ಕ್ಕೆ ಗಜ ಉತ್ಸವ, ಸಂಜೆ 4 ಗಂಟೆಯಿಂದ ಶಸ್ತ್ರ ಸೇವೆ ಸೇರಿದಂತೆ ಇತರೆ ಸೇವಾ ಕಾರ್ಯಕ್ರಮಗಳ ನಡೆಯಲಿದ್ದು, ಇದೇ ದಿನ ತಡರಾತ್ರಿ (ಭಾನುವಾರ ಬೆಳಗಿನ ಜಾವ) ಶ್ರೀ ರಂಗನಾಥ ಸ್ವಾಮಿಯ ರಥೋತ್ಸವವು ಶ್ರೀ ಬೀರಲಿಂಗೇಶ್ವರ ಮತ್ತು ಜಿ.ಬೇವಿನಹಳ್ಳಿ ಹಾಗೂ ಯಲವಟ್ಟಿ ಗ್ರಾಮಗಳ ಶ್ರೀ ಆಂಜನೇಯ ಸ್ವಾಮಿ ದೇವರುಗಳ ಜೊತೆಗೂಡಿ ಸಕಲ ವಾದ್ಯಗಳೊಂದಿಗೆ ವಿಜೃಂಭಣೆಯಿಂದ ಜರುಗಲಿದೆ.

ದಿನಾಂಕ 24ರ ಭಾನುವಾರ ಬೆಳಗ್ಗೆ 10.30 ರಿಂದ ದೇವಸ್ಥಾನದಲ್ಲಿ ಜವಳ, ಮುದ್ರೆ ಹಾಗೂ ಅನ್ನಸಂತರ್ಪಣೆ ಏರ್ಪಡಿಸಲಾಗಿದೆ. ಸಂಜೆ ಓಕುಳಿ ನಂತರ ಕಂಕಣ ವಿಸರ್ಜನೆ ನಡೆಯಲಿದೆ. ದಿನಾಂಕ 25ರ ಸೋಮವಾರ ಬೆಳಿಗ್ಗೆ ವಿವಿಧ ಕಾರ್ಯಕ್ರಮಗಳ ನಂತರ ಸಂಜೆ 7.30 ರಿಂದ ಶ್ರೀ ರಂಗನಾಥಸ್ವಾಮಿ, ಶ್ರೀ ಬೀರಲಿಂಗೇಶ್ವರ ಸ್ವಾಮಿ ಮತ್ತು ಜಿ.ಬೇವಿನಹಳ್ಳಿಯ ಶ್ರೀ ಆಂಜನೇಯ ಸ್ವಾಮಿ ದೇವರುಗಳ ಸಮ್ಮುಖದಲ್ಲಿ ಭೂತಗಳ ಸೇವೆ ನಡೆಯಲಿದ್ದು, ನಂತರ ರಾಜಬೀದಿಗಳಲ್ಲಿ ದೇವರುಗಳ ಉತ್ಸವ ಜರುಗಲಿದೆ.

ದಿನಾಂಕ 26ರ ಮಂಗಳವಾರ ಶ್ರೀ ಚೌಡೇಶ್ವರಿ ದೇವಿ ಹಬ್ಬ ನಡೆಯಲಿದೆ ಎಂದು ಗ್ರಾಮದ ಗೌಡ್ರ ಬಸವರಾಜಪ್ಪ ತಿಳಿಸಿದ್ದಾರೆ.

## ಜೈಲಿನಿಂದಲೇ ಕೇಜ್ರಿವಾಲ್ ಆಡಳಿತ : ಸಚಿವೆ

ನವದೆಹಲಿ, ಮಾ. 21 – ಜಾರಿ ನಿರ್ದೇಶನಾಲಯದ ಪ್ರಕರಣದಲ್ಲಿ ಬಂಧಿತರಾಗಿರುವ ದೆಹಲಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಅವರು, ಜೈಲಿನಿಂದಲೇ ಸರ್ಕಾರ ನಡೆಸಲಿದ್ದಾರೆ ಎಂದು ಸಚಿವೆ ಹಾಗೂ ಆಮ್ ಆದ್ಮಿ ಪಾರ್ಟಿ ನಾಯಕಿ ಆತಿಶಿ ಮರ್ಲೀನ ಸಿಂಗ್ ತಿಳಿಸಿದ್ದಾರೆ. ಕೇಜ್ರಿವಾಲ್ ಅವರು ದೆಹಲಿ ಮುಖ್ಯಮಂತ್ರಿಯಾಗಿ ಮುಂದುವರೆಯಲಿದ್ದಾರೆ. ಅಗತ್ಯವಾದಲ್ಲಿ ಅವರು ಜೈಲಿನಿಂದಲೇ ಸರ್ಕಾರ ನಡೆಸಲಿದ್ದಾರೆ. ಜೈಲಿನಿಂದಲೇ ಸರ್ಕಾರ ನಡೆಸಬಾರದು ಎಂಬ ಯಾವುದೇ ನಿಯಮವಿಲ್ಲ ಎಂದವರು ಹೇಳಿದ್ದಾರೆ.

# ಕುಡಿಯುವ ನೀರಿಗಾಗಿ ಆಗ್ರಹಿಸಿ ಖಾಲಿ ಕೊಡ ಪ್ರದರ್ಶಿಸಿ ಪ್ರತಿಭಟನೆ



ಹರಿಹರ

ಹರಿಹರ, ಮಾ. 21 - ನಗರದ ಸಾರ್ವಜನಿಕರಿಗೆ ಸಮರ್ಪಕವಾಗಿ ಕುಡಿಯುವ ನೀರು ಸರಬರಾಜು ಮಾಡುವಲ್ಲಿ ನಗರಸಭೆ ಅಧಿಕಾರಿಗಳು ಹಾಗೂ ಜಿಲ್ಲಾ ಆಡಳಿತ ನಿರ್ಲಕ್ಷ್ಯ ತೋರಿದ್ದಾರೆ ಎಂದು ಆಗ್ರಹಿಸಿ ನಗರ ಸಭೆಯ ಸದಸ್ಯ ದಾದಾ ಖಲಂದರ್ ಖಾಲಿ ಕೊಡಗಳನ್ನು ನಗರಸಭೆ ಮುಂಭಾಗದಲ್ಲಿ ಪ್ರದರ್ಶಿಸುವುದರ ಮೂಲಕ ಪ್ರತಿಭಟನೆ ನಡೆಸಿದರು.

ಈ ವೇಳೆ ಮಾತನಾಡಿದ ಅವರು, ನಗರದಲ್ಲಿ ಕಳೆದ 4-5 ದಿನಗಳಿಂದ ಜನತೆಗೆ ನೀರು ಸರಬರಾಜು ಮಾಡದೇ ಇರುವುದರಿಂದ ಜನರು ನೀರಿನ ಬವಣೆಯಿಂದ ತತ್ತರಿಸಿ ಹೋಗಿದ್ದಾರೆ ಎಂದು ಹೇಳಿದರು.

ಪೌರಾಯುಕ್ತ ಐಗೂರು ಬಸವರಾಜ್ ಮಾತನಾಡಿ, ಶಾಸಕ ಬಿ.ಪಿ. ಹರೀಶ್ ಸಮ್ಮುಖದಲ್ಲಿ ನಿನ್ನೆ ಜಿಲ್ಲಾಧಿಕಾರಿಗಳಿಗೆ ವಾರ್ಡಿಗೊಂದು ಟ್ಯಾಂಕರ್ ಮತ್ತು ವಾರ್ಡಿಗೊಂದು ಹೊಸದಾಗಿ ಬೋರ್‌ವೆಲ್ ಕೊರೆಸುವುದಕ್ಕೆ ಮನವಿ ಮಾಡಿಕೊಂಡ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳು ಮನವಿಗೆ ಸ್ಪಂದಿಸುವ ಮೂಲಕ ಶೀಘ್ರದಲ್ಲಿ 5 ಬಾಡಿಗೆಗೆ ನೀರಿನ ಟ್ಯಾಂಕರ್ ಪಡೆದು ನೀರು ಸರಬರಾಜು ಮಾಡುವಂತೆ ಸೂಚನೆ ನೀಡಿದ್ದಾರೆ.

ಜಿಲ್ಲಾಧಿಕಾರಿಗಳ ಆದೇಶದನ್ವಯ ತಕ್ಷಣವೇ ಐದು ನೀರಿನ ಟ್ಯಾಂಕರ್ ಬಾಡಿಗೆ ಪಡೆದು ಸಮರ್ಪಕವಾಗಿ ನೀರು ಕೊಡುವ ಕೆಲಸವನ್ನು ಮಾಡಲಾಗುತ್ತದೆ. ಇದರ ಜೊತೆಗೆ ಈಗಾಗಲೇ ಜನತೆಗೆ ನೀರಿನ ಸಮಸ್ಯೆ ಬರದಂತೆ 260 ಬೋರ್‌ವೆಲ್ ಮೂಲಕ ಮತ್ತು 14 ಶುದ್ದ ಕುಡಿಯವ ನೀರಿನ ಶುದ್ದೀಕರಣ ಮೂಲಕ ನೀರು ಸರಬರಾಜು ಮಾಡಲಾಗಿದೆ ಎಂದು ಪೌರಾಯುಕ್ತರು ಹೇಳಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡ ದಾದಾಪೀರ್ ಭಾನುವಳ್ಳಿ, ನಗರಸಭೆ ನಾಮನಿರ್ದೇಶನ ಸದಸ್ಯರು, ನಗರಸಭೆ ಎಇಇ ತಿಪ್ಪೇಸ್ವಾಮಿ, ವಿವಿಧ ಬಡಾವಣೆ ನಿವಾಸಿಗಳು, ಇತರರು ಹಾಜರಿದ್ದರು.

# ದೆಹಲಿ ಮುಖ್ಯಮಂತ್ರಿ ಕೇಜ್ರಿವಾಲ್ ಬಂಧನ

**(1ನೇ ಪುಟದಿಂದ)** ಕ್ಷಿಪ್ರ ಕಾರ್ಯಾಚರಣೆ ಪಡೆ ಮತ್ತು ಸಿ.ಆರ್.ಪಿ. ಎಫ್. ತಂಡಗಳನ್ನು ನಿಯೋಜಿಸಲಾಗಿತ್ತು.

ಆಮ್ ಆದ್ಮಿ ಪಾರ್ಟಿಯ ದೊಡ್ಡ ಸಂಖ್ಯೆಯ ಕಾರ್ಯಕರ್ತರು ಹಾಗೂ ಮುಖಂಡರು ಮುಖ್ಯಮಂತ್ರಿ ನಿವಾಸದ ಬಳಿ ಸೇರಿ ಕೇಜ್ರಿವಾಲ್ ಪರ ಘೋಷಣೆ ಕೂಗುತ್ತಿದ್ದರು.

ಜಾರಿ ನಿರ್ದೇಶನಾಲಯದ ಪ್ರಕರಣಕ್ಕೆ ಸಂಬಂಧಿಸಿದಂತೆ ಹೈಕೋರ್ಟ್ ಪರಿಹಾರ ನೀಡಲು ನಿರಾಕರಿಸಿದ ನಂತರ, ಕೇಜ್ರಿವಾಲ್ ಸುಪ್ರೀಂ ಕೋರ್ಟ್ ಮೊರೆ ಹೋಗಿದ್ದರು. ಗುರುವಾರ ರಾತ್ರಿಯೇ ವಿಚಾರಣೆ ನಡೆಸಲು ಮನವಿ ಮಾಡಿಕೊಳ್ಳಲಾಗುವುದು ಎಂದು ಆಮ್ ಆದ್ಮಿ ಪಾರ್ಟಿ ನಾಯಕಿ ಹಾಗೂ ದೆಹಲಿ ಸಚಿವೆ ಆತಿಶಿ ಮರ್ಲೀನ ಸಿಂಗ್ ಹೇಳಿದ್ದಾರೆ.

ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ ಕಳೆದ ವಾರ ಭಾರತ ರಾಷ್ಟ್ರ ಸಮಿತಿ ಪಕ್ಷದ ನಾಯಕಿ ಕೆ. ಕವಿತಾರನ್ನು ಬಂಧಿಸಿತ್ತು.

ದೆಹಲಿ ಸರ್ಕಾರ 2021-22ರಲ್ಲಿ ರೂಪಿಸಿದ ಅಬಕಾರಿ ನೀತಿಯಲ್ಲಿ ಅಕ್ರಮ ನಡೆದಿದೆ ಎಂದು ಆರೋಪಿಸಲಾಗಿತ್ತು. ನಂತರ ಆ ನೀತಿಯನ್ನು ರದ್ದುಗೊಳಿಸಲಾಗಿತ್ತು. ಈ ನೀತಿಯಲ್ಲಿ ಅಕ್ರಮ ಹಣ ವಹಿವಾಟು ನಡೆದ ಬಗ್ಗೆ ಜಾರಿ ನಿರ್ದೇಶನಾಲಯ ತನಿಖೆ ನಡೆಸುತ್ತಿದೆ. ಇದೇ ಪ್ರಕರಣದಲ್ಲಿ ಆಮ್ ಆದ್ಮಿ ಪಾರ್ಟಿ ನಾಯಕರಾದ ಮನೀಶ್ ಸಿಸೋಡಿಯ ಹಾಗೂ ಸಂಜಯ್ ಸಿಂಗ್ ಅವರು ನ್ಯಾಯಾಂಗ ಕಸ್ಟಡಿಯಲ್ಲಿದ್ದಾರೆ.

## ದೇಶದಲ್ಲೇ ಮೊದಲ ಪ್ರಕರಣ

**(1ನೇ ಪುಟದಿಂದ)** ಅವರು ಆಡಳಿತ ನಡೆಸಲಿದ್ದಾರೆ ಎಂದು ದೆಹಲಿ ಸಚಿವೆ ಆತಿಶಿ ಮರ್ಲೀನ ಸಿಂಗ್ ಹೇಳಿದ್ದಾರೆ.

ಈ ನಡುವೆ, ಬಂಧನವನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್‌ನಲ್ಲಿ ಕೇಜ್ರಿವಾಲ್ ಅರ್ಜಿ ದಾಖಲಿಸಿದ್ದರು. ಗುರುವಾರ ರಾತ್ರಿಯೇ ವಿಚಾರಣೆ ನಡೆಸಬೇಕು ಎಂದು ಮನವಿ ಮಾಡಿಕೊಂಡಿದ್ದರು. ಆದರೆ, ಸುಪ್ರೀಂ ಕೋರ್ಟ್ ರಾತ್ರಿ ವಿಚಾರಣೆಗಾಗಿ ಯಾವುದೇ ವಿಶೇಷ ಪೀಠ ರೂಪಿಸಿಲ್ಲ. ಶುಕ್ರವಾರ ಈ ಬಗ್ಗೆ ವಿಚಾರಣೆ ನಡೆಯಲಿದೆ ಎಂದು ಮೂಲಗಳು ತಿಳಿಸಿವೆ.

ಜಾರಿ ನಿರ್ದೇಶನಾಲಯ ದಾಖಲಿಸಿರುವ ಆರೋಪ ಪಟ್ಟಿಗಳಲ್ಲಿ ಹಲವು ಬಾರಿ ಕೇಜ್ರಿವಾಲ್ ಹೆಸರು ಉಲ್ಲೇಖಿಸಲಾಗಿದೆ. ಅಬಕಾರಿ ನೀತಿ ರೂಪಿಸುವುದಕ್ಕೆ ಸಂಬಂಧಿಸಿದಂತೆ ಆರೋಪಿಗಳು ಕೇಜ್ರಿವಾಲ್ ಸಂಪರ್ಕದಲ್ಲಿದ್ದರು. ಆಮ್ ಆದ್ಮಿ ಪಾರ್ಟಿಗೆ ಕಿಕ್‌ಬ್ಯಾಕ್ ನೀಡುವ ಮೂಲಕ ಅಬಕಾರಿ ನೀತಿಯ ಲಾಭ ಪಡೆಯಲಾಗಿತ್ತು ಎಂದು ಜಾರಿ ನಿರ್ದೇಶನಾಲಯ ಆರೋಪಿಸಿದೆ.

ಕೇಜ್ರಿವಾಲ್ ವಿರುದ್ಧ ದೆಹಲಿ ಜಲ ಮಂಡಳಿಯ ಅವ್ಯವಹಾರ ಕುರಿತ ಆರೋಪಗಳೂ ಇವೆ. ಈ ಪ್ರಕರಣದಲ್ಲೂ ಜಾರಿ ನಿರ್ದೇಶನಾಲಯ ತನಿಖೆ ನಡೆಸುತ್ತಿದೆ.

# ಜನಾಭಿಪ್ರಾಯ ಸಂಗ್ರಹಣೆ ನಂತರ ಮುಂದಿನ ನಡೆ

**(1ನೇ ಪುಟದಿಂದ)** ತೋರಿಸುತ್ತೇನೆ ಎಂದು ಹೇಳಿದರು. ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸುವಂತೆ ಲೋಕಸಭಾ ವ್ಯಾಪ್ತಿಯ ಕಾರ್ಯಕರ್ತರು, ಅಭಿಮಾನಿಗಳಿಂದ ಒತ್ತಡ ಬರುತ್ತಿದೆ. ಆದರೂ ಯೋಚಿಸಿ ಮುಂದಿನ ಹೆಜ್ಜೆ ಇಡುವುದಾಗಿ ಹೇಳಿದ ಅವರು, ಈಗಾಗಲೇ ಪಾದಯಾತ್ರೆ ಮೂಲಕ ಹಾಗೂ ವಾಹನಗಳ ಮೂಲಕ ಲೋಕಸಭಾ ವ್ಯಾಪ್ತಿಯ ಬಹುತೇಕ ಹಳ್ಳಿಗಳನ್ನು ಸುತ್ತಿ ಬಂದಿದ್ದೇನೆ. ಉತ್ತಮ ಪ್ರತಿಕ್ರಿಯೆ ಕೂಡ ನನಗೆ ದೊರೆತಿದೆ ಎಂದು ತಿಳಿಸಿದರು.

ಏಪ್ರಿಲ್ 12 ರವರೆಗೂ ನಾಮಪತ್ರ ಸಲ್ಲಿಸಲು ಅವಕಾಶವಿದ್ದು, ವಿನಯ್ ಕುಮಾರ್ ಅವರೇ ಏಕೆ ಬೇಕು ಎಂಬ ಜನರ ಆಶಯವನ್ನು ವರಿಷ್ಠರಿಗೆ ಮನದಟ್ಟು ಮಾಡುತ್ತೇನೆ. ಸಾಮಾಜಿಕ ನ್ಯಾಯದಡಿಯಲ್ಲಿ ನನ್ನ ಹೋರಾಟವನ್ನು ಮುಂದುವರೆಸುತ್ತೇನೆ. ಎಂದಿನಂತೆ ಕ್ಷೇತ್ರದ ಜನರ ಆಶೋತ್ತರಗಳಿಗೆ ಸ್ಪಂದಿಸುವ ಮೂಲಕ ಜನಸೇವಕನಾಗಿ ಕೆಲಸ ಮಾಡುತ್ತೇನೆ ಎಂದರು. ನನಗೇ ಟಿಕೆಟ್ ನೀಡಿದ್ದಿದ್ದರೆ ಎರಡು ಲಕ್ಷ ಮತಗಳ ಅಂತರದಿಂದ ಗೆಲುವು ಸಾಧಿಸುವ ವಿಶ್ವಾಸ ನನ್ನದಾಗಿತ್ತು. ಒಂದು ಲೋಕಸಭಾ ಸದಸ್ಯ ಸ್ಥಾನವನ್ನು ವಂಚಿಸಲಾಗಿದೆ ಎಂದು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.



ಯಾವುದ ರಾಜಕೀಯದ ಹಿನ್ನೆಲೆಯಿಲ್ಲದ ಸಾಮಾನ್ಯ ಕುಟುಂಬದಿಂದ ಬಂದ ನನಗೆ ಅಲ್ಪ ಕಾಲದಲ್ಲಿ ದಾವಣಗೆರೆ ಜಿಲ್ಲೆಯ ಜನತೆ ಅಪಾರ ಪ್ರೀತಿ-ವಿಶ್ವಾಸ ತೋರಿ ನನ್ನನ್ನು ಆಶೀರ್ವದಿಸಿದ್ದಾರೆ. ಅವರ ಅಭಿಮಾನಕ್ಕೆ ಚಿರಋಣಿಯಾಗಿದ್ದೇನೆ. ಜಾತ್ಯತೀತವಾಗಿ ಎಲ್ಲರ ವಿಶ್ವಾಸಗಳಿಸಿದ್ದೇನೆ ಎಂದು ಹೇಳಿದರು.

ದಾವಣಗೆರೆ ಜಿಲ್ಲೆಯಲ್ಲಿ ಸಾಮಾಜಿಕ ನ್ಯಾಯ ಸತ್ತು ಹೋಗಿತ್ತು. ಅದಕ್ಕೆ ಮರುಜೀವ ಕೊಡಲು ಮುಂದಾಗಿದ್ದೆ. ಜನಸಾಮಾನ್ಯರ ಕನಸನ್ನು ನನಸು ಮಾಡಲು ಮತ್ತು ಶೈಕ್ಷಣಿಕವಾಗಿ ಮತ್ತಷ್ಟು ಅಭಿವೃದ್ಧಿ ಪಥದತ್ತ ಕೊಂಡೊಯ್ಯುವ ಗುರಿ ಹೊಂದಿದ್ದೆ. ಕೇವಲ ಅರ್ಧ ಗಂಟೆಯ ಅವಧಿಯಲ್ಲಿ ಮುಂಚೂಣಿಯಲ್ಲಿ ಕೇಳಿ ಬರುತ್ತಿದ್ದ ನನ್ನ ಹೆಸರನ್ನು ಕೈಬಿಡಲಾಯಿತು. ಮೌಂಟ್ ಎವರೆಸ್ಟ್ ಪರ್ವತ ಏರಿ ಇನ್ನೇನು ಬಾವುಟ ನೆಡಬೇಕು ಎನ್ನುವಷ್ಟರಲ್ಲಿ ಅಲ್ಲಿಂದ ಜಾಡಿಸಿ ಒದ್ದಂತೆ ಬಾಸವಾಯಿತು ಎಂದು ಬೇಸರ ವ್ಯಕ್ತಪಡಿಸಿದರು.

## ಮಿಟ್ಲಕಟ್ಟೆ ನೀಲಮ್ಮ ನಿಧನ



ದಾವಣಗೆರೆ ನಗರದ ಹಳೇ ಕುಂದುವಾಡ ನಿವಾಸಿ ಮಿಟ್ಲಕಟ್ಟೆ ಮನೆತನದ ದಿವಂಗತ ಮಲ್ಲಪ್ಪನವರ ಧರ್ಮಪತ್ನಿ ನೀಲಮ್ಮ (80) ಅವರು ದಿನಾಂಕ 21-3-2024ರ ಗುರುವಾರ ರಾತ್ರಿ ನಿಧನರಾದರು. ಓರ್ವ ಪುತ್ರ ಸೇರಿದಂತೆ ಅಪಾರ ಬಂಧು ಬಳಗ ಹೊಂದಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ 22-3-2024ರ ಶುಕ್ರವಾರ ಬೆಳಿಗ್ಗೆ 11ಗಂಟೆಗೆ ಹಳೇ ಕುಂದುವಾಡದ ರುದ್ರಭೂಮಿಯಲ್ಲಿ ನಡೆಯಲಿದೆ.

# ವಿಕಸಿತ ಭಾರತ ವಾಟ್ಸ್‌ಆಪ್ ಮೆಸೇಜ್ ತಡೆಯಲು ನಿರ್ದೇಶನ

ನವದೆಹಲಿ, ಮಾ. 21 – ವಿಕಸಿತ ಭಾರತ ಸಂಪರ್ಕ ಅಭಿಯಾನದಡಿ ಸರ್ಕಾರದ ಸಾಧನೆಗಳನ್ನು ತಿಳಿಸುವ ವಾಟ್ಸ್‌ಆಪ್ ಮೆಸೇಜ್‌ಗಳನ್ನು ತಕ್ಷಣವೇ ನಿಲ್ಲಿಸುವಂತೆ ಕೇಂದ್ರ ಸರ್ಕಾರಕ್ಕೆ ಚುನಾವಣಾ ಆಯೋಗ ನಿರ್ದೇಶನ ನೀಡಿದೆ. ಕೇಂದ್ರ ಎಲೆಕ್ಟ್ರಾನಿಕ್ಸ್ ಹಾಗೂ ಮಾಹಿತಿ ಸಚಿವಾಲಯದ ಕಾರ್ಯದರ್ಶಿಗೆ ಈ ಬಗ್ಗೆ ನಿರ್ದೇಶನ ನೀಡಲಾಗಿದೆ. ವಿಕಸಿತ ಭಾರತ ಸಂದೇಶದ ಬಗ್ಗೆ ದೂರು ದಾಖಲಾದ ನಂತರ ಈ ಕ್ರಮ ತೆಗೆದುಕೊಳ್ಳಲಾಗಿದೆ.

# ಹರಿಹರದ ಬಳಿ ಅಪರಿಚಿತನ ಶವ ಪತ್ತೆ

ದಾವಣಗೆರೆ, ಮಾ.21- ಹರಿಹರ ಮತ್ತು ಕುಮಾರಪಟ್ಟಣ ರೈಲು ನಿಲ್ದಾಣದ ಮಧ್ಯೆ ಅಪರಿಚಿತ ಗಂಡಸಿನ ಶವ ಪತ್ತೆಯಾಗಿದೆ. ಮೃತನು, ಸುಮಾರು 55ರಿಂದ 60 ವಯಸ್ಸಿನವನಾಗಿದ್ದು, ಗೋಧಿ ಮೈ ಬಣ್ಣ, ಎಡಗೈ ಮೇಲೆ ನವಿಲು ಕೂತ ಷಣ್ಮುಖ ದೇವರ ಹಚ್ಚೆ ಮತ್ತು ಬಲಗೈ ಮೇಲೆ ಗಣಪತಿ ದೇವರ ಹಚ್ಚೆ, ನೇರಳೆ ಬಣ್ಣದ ತುಂಬು ತೋಳಿನ ರೆಡಿಮೇಡ್ ಅಂಗಿ, ಸಿಮೆಂಟ್ ಬಣ್ಣದ ರೆಡಿಮೇಡ್ ಪ್ಯಾಂಟ್ ಧರಿಸಿರುತ್ತಾನೆ. ಸಂಬಂಧಪಟ್ಟವರು ದಾವಣಗೆರೆ ರೈಲ್ವೆ ಪೊಲೀಸ್ ಠಾಣೆ (ದೂರವಾಣಿ 08192 - 259643 ಅಥವಾ 9480802123) ಯನ್ನು ಸಂಪರ್ಕಿಸಬಹುದು.

# ಬದಲಿಸದಿದ್ದರೆ ಅಚ್ಚರಿ ಅಭ್ಯರ್ಥಿ ಕಣಕ್ಕೆ

**(1ನೇ ಪುಟದಿಂದ)** ಮತದಾರರ ಒತ್ತಾಯವಾಗಿದೆ. ರಾಜಕೀಯದಲ್ಲಿ ಯಾವುದೇ ಕ್ಷಣದಲ್ಲಿ ಏನಾದರೂ ಆಗಬಹುದು ಆದ್ದರಿಂದ ವರಿಷ್ಠರು ಅಭ್ಯರ್ಥಿಯನ್ನು ಬದಲಿಸುವ ನಿರೀಕ್ಷೆಯೂ ಇದೆ ಎಂದರು.

ಒಂದು ವೇಳೆ ಅಭ್ಯರ್ಥಿಯನ್ನು ಬದಲಿಸದಿದ್ದರೆ ಮುಂದಿನ ವಾರ ಎಲ್ಲಾ ಮಠಾಧೀಶರನ್ನು ಭೇಟಿ ಮಾಡಿ, ಅವರ ಆಶೀರ್ವಾದ ಪಡೆದು, ಅಚ್ಚರಿಯ ಅಭ್ಯರ್ಥಿಯನ್ನು ಕಣಕ್ಕಳಿಸಿ ಗೆಲ್ಲಿಸುತ್ತೇವೆ ಎಂದು ಕರುಣಾಕರ ರೆಡ್ಡಿ ಹೇಳಿದರು.

ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ಮಾತನಾಡಿ, ಹಲವು ಸಭೆಗಳ ನಂತರ ಇದೀಗ ಅಂತಿಮ ನಿರ್ಧಾರಕ್ಕೆ ಬಂದಿದ್ದೇವೆ. ಹೋಳಿ ಹಬ್ಬದ ನಂತರ ಜಿಲ್ಲೆಯ ಮಠಾಧೀಶರನ್ನು ಭೇಟಿ ಮಾಡಿ ಆಶೀರ್ವಾದ ಪಡೆದು, ಅಭ್ಯರ್ಥಿ ಕಣಕ್ಕಳಿಸುತ್ತೇವೆ.

ದಾವಣಗೆರೆ ಮತದಾರರು ಆಶೀರ್ವಾದ ಮಾಡುತ್ತಾರೆ ಎಂಬ ವಿಶ್ವಾಸವಿದೆ. ನಮ್ಮ ಅಭ್ಯರ್ಥಿ ಗೆಲ್ಲಿಸಿ, ನರೇಂದ್ರ ಮೋದಿ ಅವರ ಕೈ ಬಲಪಡಿಸುತ್ತೇವೆ. ನಡೆ ಮುಂದೆ ನಡೆ ಮುಂದೆ ನುಗ್ಗಿ ನಡೆ ಮುಂದೆ ಎಂಬ ಘೋಷಣೆಯಂತೆ ಮುನ್ನಡೆಯುತ್ತೇವೆ ಎಂದರು.

ದಾವಣಗೆಲೆ ಲೋಕಸಭಾ ವ್ಯಾಪ್ತಿಯಲ್ಲಿ ಬಿಜೆಪಿ ಉಳಿಯಬೇಕು. ನೊಂದ ಕಾರ್ಯಕರ್ತರಿಗೆ ನ್ಯಾಯ ಕೊಡಬೇಕು. ಪಕ್ಷದ ಸಂಘಟನೆ ಮತ್ತಷ್ಟು ಗಟ್ಟಿಯಾಗಬೇಕು ಎಂಬ ತೀರ್ಮಾನ ನಮ್ಮದು. ಈ ಹಿನ್ನೆಲೆಯಲ್ಲಿ ಪ್ರತಿ ವಿಧಾನಸಭಾ ಕ್ಷೇತ್ರವಾರು ಪ್ರವಾಸ ಮಾಡುತ್ತೇವೆ ಎಂದರು.

ವಿಧಾನ ಪರಿಷತ್ ಮಾಜಿ ಮುಖ್ಯ ಸಚೇತಕ ಡಾ.ಎ.ಹೆಚ್. ಶಿವಯೋಗಿಸ್ವಾಮಿ, ಮಾಜಿ ಶಾಸಕ ಬಸವರಾಜ ನಾಯ್ಕ, ಮುಖಂಡರುಗಳಾದ ಮಾಡಾಳ್ ಮಲ್ಲಿಕಾರ್ಜುನ್, ಬಿ.ಜಿ. ಅಜಯ್ ಕುಮಾರ್, ಲೋಕಿಕೆರೆ ನಾಗರಾಜ್, ಕೆ.ಎಂ. ಸುರೇಶ್, ಡಾ. ರವಿಕುಮಾರ್, ಕಲ್ಲೇಶ್ ಇತರರು ಈ ಸಂದರ್ಭದಲ್ಲಿದ್ದರು.

## ಅಭ್ಯರ್ಥಿ ಯಾರೆಂದು ಈಗಲೇ ಹೇಳುವುದಿಲ್ಲ: ರವೀಂದ್ರನಾಥ್

ಅರ್ಜಿ ಹಾಕುವ ಕೊನೆ ದಿನದವರೆಗೂ ಸಮಯವಿದೆ. ಅಲ್ಲಿಯವರೆಗೂ ಕಾಯುತ್ತೇವೆ ನಂತರ ಅರ್ಜಿ ಸಲ್ಲಿಸುತ್ತೇವೆ. ನಾವು 11 ಜನ ಸಮಿತಿಯಲ್ಲಿದ್ದೇವೆ. ಅದರಲ್ಲಿ ಒಬ್ಬರು ಅಭ್ಯರ್ಥಿಯಾಗಲಿದ್ದಾರೆ. ಆದರೆ ಈಗಲೇ ಯಾರೆಂದು ಹೇಳುವುದಿಲ್ಲ ಎಂದು ಮಾಜಿ ಸಚಿವ ಎಸ್.ಎ. ರವೀಂದ್ರನಾಥ್ ಹೇಳಿದ್ದಾರೆ.

ಸಮಸ್ಯೆ ಸರಿಪಡಿಸುವ ಕುರಿತು ವರಿಷ್ಠರು ಕೇವಲ ಫೋನ್‌ನಲ್ಲಿ ಮಾತನಾಡುತ್ತಿದ್ದಾರೆ. ನೇರವಾಗಿ ಮಾತನಾಡಲಿ ಎಂದರು. ನಮ್ಮದು ಬಂಡಾಯವಲ್ಲ ಎಂದ ರವೀಂದ್ರನಾಥ್, ಅಭ್ಯರ್ಥಿ ಬದಲಿಸದಿದ್ದರೆ ಬಿಜೆಪಿಯವರೇ ಅರ್ಜಿ ಸಲ್ಲಿಸಿ ಕಣಕ್ಕಿಳಿಯಲಿದ್ದಾರೆ. ಅವರನ್ನು ಗೆಲ್ಲಿಸುತ್ತೇವೆ ಎಂದರು.

# ಹರಪನಹಳ್ಳಿ : ಎಸ್ಸೆಸ್ಸೆಲ್ಸಿ ಪರೀಕ್ಷೆಗೆ ಮೂಲಭೂತ ಸೌಕರ್ಯ ಕಲ್ಪಿಸಲು ಕ್ರಮ



ಹರಪನಹಳ್ಳಿ, ಮಾ. 21 - ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಗೆ ತಾಲ್ಲೂಕಿನಲ್ಲಿ ಎಲ್ಲಾ ರೀತಿಯ ಸಿದ್ಧತೆ ಕೈಗೊಳ್ಳಲಾಗಿದೆ ಎಂದು ಬಳ್ಳಾರಿ ಮತ್ತು ವಿಜಯನಗರ ಜಿಲ್ಲಾ ಶಿಕ್ಷಣ ಮತ್ತು ತರಬೇತಿ (ಅಭಿವೃದ್ಧಿ) ಸಂಸ್ಥೆಯ ಉಪ ನಿರ್ದೇಶಕಿ ಹನುಮಕ್ಕ ತಿಳಿಸಿದರು. ಗುರುವಾರ ತಾಲ್ಲೂಕಿನ ವಿವಿಧ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲಿಸಿ ನಂತರ ಸುದ್ದಿಗಾರರೊಂದಿಗೆ ಮತನಾಡಿದ ಅವರು. ತಾಲ್ಲೂಕಿನಲ್ಲಿ ಒಟ್ಟು 13 ಪರೀಕ್ಷಾ ಕೇಂದ್ರಗಳಿದ್ದು, ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಸಿಸಿ ಕ್ಯಾಮೆರಾ, ಶುದ್ದ ಕುಡಿಯುವ ನೀರು, ಶೌಚಾಲಯ ಸೇರಿದಂತೆ ಆಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಯು. ಬಸವರಾಜಪ್ಪ, ತಾಲ್ಲೂಕು ದೈಹಿಕ ಶಿಕ್ಷಣಾಧಿಕಾರಿ ಕೆ. ಷಣ್ಮುಖಪ್ಪ ಬಿಆರ್‌ಸಿ ಹೊನ್ನೆತೆಪ್ಪ, ಶಿಕ್ಷಣ ಸಂಯೋಜಕಿ ಲಕ್ಷ್ಮಿ ರಂಗಣ್ಣನವರ್ ಸೇರಿದಂತೆ ಇತರರು ಇದ್ದರು.

## ಜಗಳೂರು ತಾ.ನಲ್ಲಿ ಇಂದು ವಿದ್ಯುತ್ ಇಲ್ಲ

ಬಿದರಕೆರೆ ವಿ.ವಿ.ಕೇಂದ್ರದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಗ್ರಾಮಗಳ ಎನ್.ಜೆ.ವೈ ಮತ್ತು ಐ.ಪಿ ಸೆಟ್ ಮಾರ್ಗಗಳಲ್ಲಿ ಇಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ರವರೆಗೆ ವಿದ್ಯುತ್ ಸರಬರಾಜು ಇರುವುದಿಲ್ಲ.

## ಸವಿನೆನಪು



**ಶ್ರೀಮತಿ ಶಕುಂತಲ ಬಿ.ಜೆ.**

ಜನನ : 10.09.1958 ನಿಧನ : 22.03.2012

ನೀವು ನಮ್ಮನ್ನಗಲಿ ಇಂದಿಗೆ ಹದಿಮೂರು ವರ್ಷಗಳಾದವು. ಸದಾ ನಿಮ್ಮ ಸ್ಮರಣೆಯಲ್ಲಿ, ನೀವು ಹಾಕಿಕೊಟ್ಟ ಮಾರ್ಗದರ್ಶನದಲ್ಲಿ ಮುನ್ನಡೆಯುತ್ತಿದ್ದೇವೆ.

**ಎನ್. ಅಜ್ಜಪ್ಪ ಮತ್ತು ಮಕ್ಕಳು ಹಾಗೂ ಮೊಮ್ಮಕ್ಕಳು, ಮಠದ ಸಿರಿಗೆರೆ.**

ಶ್ರೀ ವಿಘ್ನೇಶ್ ಆಟೋ ಡಯಾಗ್ನೋಸಿಸ್
ಶ್ರೀ ವಿಘ್ನೇಶ್ ಆಟೋ ಏಜೆನ್ಸೀಸ್, ಪಿ.ಬಿ. ರಸ್ತೆ, ದಾವಣಗೆರೆ.
ಶ್ರೀ ವಿಘ್ನೇಶ್ ಆಟೋ ಏಜೆನ್ಸೀಸ್, ಚಿತ್ರದುರ್ಗ.
V 3 ಏಜೆನ್ಸೀಸ್, ದಾವಣಗೆರೆ.

## ಪುಣ್ಯಸ್ಮರಣೆ



ಸಂಘವಿ ಷಾ ಬಾಬುಲಾಲ್‌ಜಿ ಕಸ್ತೂರ್‌ಚಂದ್‌ಜಿ
ಜನನ : 20.03.1908 ನಿಧನ : 20.03.1978
(ಮಾಲೀಕರು : ಮೋತಿ ಚಿತ್ರಮಂದಿರ, ದಾವಣಗೆರೆ)

ನಮ್ಮ ಪೂಜ್ಯ ತಂದೆಯವರಾದ
**ಸಂಘವಿ ಷಾ ಬಾಬೂಲಾಲ್‌ಜಿ ಕಸ್ತೂರ್‌ಚಂದ್‌ಜಿಯವರು**
ನಮ್ಮನ್ನಗಲಿ ಇಂದಿಗೆ **46** ವರ್ಷಗಳಾದವು.
ಹಾಗೂ ನಮ್ಮ ಪೂಜ್ಯ ತಾಯಿಯವರಾದ
**ಶ್ರೀಮತಿ ಲಕ್ಷ್ಮೀಬಾಯಿ**
ಕೋಂ. ಸಂಘವಿ ಷಾ ಬಾಬೂಲಾಲ್‌ಜಿಯವರು
ನಮ್ಮನ್ನಗಲಿ ಇಂದಿಗೆ **28** ವರ್ಷಗಳಾದವು.
ಇವರ ಶ್ರಮ ಹಾಗೂ ಸತ್ಯವಾದ ಸಾತ್ವಿಕ ಜೀವನ ಹಾಗೂ ಧ್ಯೇಯಗಳು ಸದಾ ನಮಗೆ ದಾರಿದೀಪವಾಗಲೆಂದು ಹಾಗೂ ಅವರ ಆತ್ಮಕ್ಕೆ ಭಗವಂತನು ಚಿರಶಾಂತಿಯನ್ನು ನೀಡಲೆಂದು ಬೇಡುವ.



ಶ್ರೀಮತಿ ಲಕ್ಷ್ಮೀಬಾಯಿ ಕೋಂ. ಸಂಘವಿ ಷಾ ಬಾಬೂಲಾಲ್‌ಜಿ
ಜನನ : 1915, ನಿಧನ : 22.03.1996

**ಮಕ್ಕಳು, ಮೊಮ್ಮಕ್ಕಳು, ಸೊಸೆಯಂದಿರು, ಮರಿಮೊಮ್ಮಕ್ಕಳು ಹಾಗೂ ಬಂಧು-ಮಿತ್ರರು.**

ಷಾ।। ಅಶೋಕ್‌ಕುಮಾರ್ ಬಾಬೂಲಾಲ್‌ಜಿ
#623/2, 7ನೇ ಮೇನ್, ಪಿ.ಜೆ. ಬಡಾವಣೆ ದಾವಣಗೆರೆ.-577 002.

AB JEWELLERS
Since 1978


ಷಾ।। ಅಶೋಕ್‌ಕುಮಾರ್ ಬಿ. ಜೈನ್
ಮಾಜಿ ಕನ್ಸಿಲಿಯೇಟರ್, ಫ್ಯಾಮಿಲಿ ಕೋರ್ಟ್, ದಾವಣಗೆರೆ.
ಮೊ : 94491-72977

ಫೋನ್ : 232894 (ಅಂಗಡಿ), 253125 (ಮನೆ)

ಶ್ರೀ ವರ್ಧಮಾನ್ ಪ್ಲೇವುಡ್, ಪಿ.ಬಿ. ರಸ್ತೆ, ದಾವಣಗೆರೆ-2
ವಲ್ಲಭ್ ಟೆಕ್ಸ್‌ಟೈಲ್ಸ್, ಕಾಯಿಪೇಟೆ, ದಾವಣಗೆರೆ-1
ಷಾ ಕುಮಾರ ಪಾಲ್ ಬಿ.ಜೈನ್, ಎಂಸಿಸಿ 'ಎ' ಬ್ಲಾಕ್, ದಾವಣಗೆರೆ-2

॥ ಶ್ರೀ ಸೋಮೇಶ್ವರ ಪ್ರಸನ್ನ ॥

## ವೈಕುಂಠ ಸಮಾರಾಧನೆ ಆಹ್ವಾನ



ದಾವಣಗೆರೆ ವಾಸಿ
**ಶ್ರೀ ಕೃಷ್ಣ ನಾರಾಯಣ ಜನ್ನು**
ಇವರು ಮಾಡುವ ವಿಜ್ಞಾಪನೆಗಳು.
ದಿನಾಂಕ : 10.03.2024ನೇ ಭಾನುವಾರ ಬೆಳಿಗ್ಗೆ 7.00 ಗಂಟೆಗೆ
ನನ್ನ ಪೂಜ್ಯ ಪತ್ನಿಯವರಾದ
**ಶ್ರೀಮತಿ ಸುಮನ ಕೃಷ್ಣ ಜನ್ನು**
ಇವರು ವೈಕುಂಠ ವಾಸಿಗಳಾದ ಪ್ರಯುಕ್ತ ಮೃತರ ಆತ್ಮಶಾಂತಿಗಾಗಿ

**'ವೈಕುಂಠ ಸಮಾರಾಧನೆ'ಯನ್ನು**

ದಿನಾಂಕ : 23.03.2024ನೇ ಶನಿವಾರದಂದು ಶ್ರೀ ಕೃಷ್ಣಕಲಾ ಮಂದಿರ, ಎಂಸಿಸಿ ಎ ಬ್ಲಾಕ್, ದಾವಣಗೆರೆಯಲ್ಲಿ ನೆರವೇರಿಸಲು ಗುರುಹಿರಿಯರು ನಿಶ್ಚಯಿಸಿರುವುದರಿಂದ ತಾವುಗಳು ಸಕಾಲಕ್ಕೆ ಆಗಮಿಸಿ, ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿ.

ಇಂತಿ ದುಃಖತಪ್ತರು :

**ಪತಿ, ಪುತ್ರರು, ಪುತ್ರಿ, ಅಳಿಯ, ಸೊಸೆ, ಮೊಮ್ಮಗಳು ಹಾಗೂ ಬಂಧು-ಮಿತ್ರರು.**

# ಹಣಕಾಸಿನಲ್ಲಿ ಕಾಂಗ್ರೆಸ್ ದುರ್ಬಲ ಮಾಡಲು ಮೋದಿ ಯತ್ನ : ಸೋನಿಯಾ



ನವದೆಹಲಿ, ಮಾ. 21 – ಕಾಂಗ್ರೆಸ್ ಪಕ್ಷ ಹಣಕಾಸು ವಿಷಯದಲ್ಲಿ ದುರ್ಬಲವಾಗುವಂತೆ ಮಾಡಲು ಪ್ರಧಾನ ಮಂತ್ರಿ ನರೇಂದ್ರ ಮೋದಿ ಪ್ರಯತ್ನ ನಡೆಸುತ್ತಿದ್ದಾರೆ ಎಂದು ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ಆರೋಪಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿರುವ ಅವರು, ಲೋಕಸಭಾ ಚುನಾವಣೆಯಲ್ಲಿ ಸಮಾನ ಅವಕಾಶ ಕಲ್ಪಿಸುವ ಸಲುವಾಗಿ ಕಾಂಗ್ರೆಸ್ ಪಕ್ಷದ ಬ್ಯಾಂಕ್ ಖಾತೆಗಳ ನಿರ್ವಹಣೆಗೆ ಅವಕಾಶ ನೀಡಬೇಕು ಎಂದು ಆಗ್ರಹಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಸಹ ಉಪಸ್ಥಿತರಿದ್ದರು.

ಕಾಂಗ್ರೆಸ್ ಪಕ್ಷದ ಎಲ್ಲಾ ಬ್ಯಾಂಕ್ ಖಾತೆಗಳನ್ನು ಸ್ಥಗಿತಗೊಳಿಸಿರುವುದು ಕಾಂಗ್ರೆಸ್ ಪಕ್ಷವಷ್ಟೇ ಅಲ್ಲದೇ ಭಾರತದ ಪ್ರಜಾಪ್ರಭುತ್ವದ ಮೇಲೆ ಪರಿಣಾಮ ಬೀರಿದೆ ಎಂದು ಸೋನಿಯಾ ಗಾಂಧಿ ಆರೋಪಿಸಿದ್ದಾರೆ.

ನಾವು ಚುನಾವಣಾ ಅಭಿಯಾನದ ಕೆಲಸ ನಿರ್ವಹಿಸಲು ಸಾಧ್ಯವಾಗುತ್ತಿಲ್ಲ. ಚುನಾವಣೆ ಎದುರಿಸುವ ನಮ್ಮ ಸಾಮರ್ಥ್ಯಕ್ಕೆ ಧಕ್ಕೆಯಾಗಿದೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಹೇಳಿದರು.

ಚುನಾವಣೆಯಲ್ಲಿ ಸಮಾನ ಅವಕಾಶ ನೀಡುವ ಸಲುವಾಗಿ ಬ್ಯಾಂಕ್ ಖಾತೆಗಳ ಮೇಲೆ ವಿಧಿಸಲಾಗಿರುವ ತಡೆಯನ್ನು ತೆರವುಗೊಳಿಸಬೇಕು ಎಂದು ಖರ್ಗೆ ಆಗ್ರಹಿಸಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ಎಐಸಿಸಿ ಖಜಾಂಚಿ ಅಜಯ್ ಮಾಕೆನ್, ಜನಸಾಮಾನ್ಯರು ನೀಡಿದ ದೇಣಿಗೆಯನ್ನು ಬಿಜೆಪಿ ಲೂಟಿ ಮಾಡಿದೆ. ಬಲವಂತವಾಗಿ ಈ ಖಾತೆಗಳಿಂದ 115.32 ಕೋಟಿ ರೂಗಳನ್ನು ಪಡೆಯಲಾಗಿದೆ ಎಂದು ಆರೋಪಿಸಿದರು.

ಕಾಂಗ್ರೆಸ್ ಪಕ್ಷ ಆದಾಯ ತೆರಿಗೆ ಪಾವತಿಸಬೇಕಿದೆ ಎಂದು ಆದಾಯ ತೆರಿಗೆ ಇಲಾಖೆಯು ಅದರ ಖಾತೆಗಳನ್ನು ತಡೆದಿತ್ತು. ಈ ವಿಷಯದಲ್ಲಿ ಮಧ್ಯ ಪ್ರವೇಶಿಸುವಂತೆ ಕಾಂಗ್ರೆಸ್ ದಾಖಲಿಸಿದ್ದ ಮನವಿಯನ್ನು ಆದಾಯ ತೆರಿಗೆ ಇಲಾಖೆಯ ಮೇಲ್ಮನವಿಗಳ ಟ್ರಿಬ್ಯೂನಲ್ ತಳ್ಳಿ ಹಾಕಿತ್ತು.

# ಎ.ಐ.ನಿಂದ ಈಗ ನಕಲಿ ಕೋರ್ಟ್ ಪ್ರಕರಣಗಳ ಸಮಸ್ಯೆ

ಕೃತಕ ಬುದ್ಧಿವಂತಿಕೆ (ಎ.ಐ.) ಮೂಲಕ ರೂಪಿಸಲಾದ ಡೀಪ್‌ಫೇಕ್, ತಾರೆಯರ ಅಶ್ಲೀಲ ಚಿತ್ರಗಳನ್ನೆಲ್ಲವನ್ನೂ ನಾವು ನೋಡಿದ್ದೇವೆ. ಎ.ಐ. ಈಗ ಸಂಗೀತ, ಚಾಲಕ ರಹಿತ ರೇಸ್ ಕಾರ್ ವಲಯದಲ್ಲೂ ಕಾರ್ಯನಿರ್ವಹಿಸಿದೆ. ಇದರ ಜೊತೆಗೆ ವೇಗವಾಗಿ ತಪ್ಪು ಮಾಹಿತಿಯನ್ನೂ ರವಾನಿಸಿದೆ.

ಹೀಗಾಗಿ ಎ.ಐ. ಕಾನೂನು ವ್ಯವಸ್ಥೆಯ ಮೇಲೆ ಪರಿಣಾಮ ಬೀರುವುದರಲ್ಲಿ ಯಾವುದೇ ಅಚ್ಚರಿ ಇಲ್ಲ.

ವಕೀಲರು ತಮ್ಮ ಕಕ್ಷಿದಾರರ ಪರವಾಗಿ ಸಲ್ಲಿಸುವ ಮಾಹಿತಿ ಆಧರಿಸಿ ನ್ಯಾಯಾಲಯಗಳು ಕಾನೂನು ರೀತ್ಯ ಕ್ರಮ ತೆಗೆದುಕೊಳ್ಳುತ್ತೇವೆ ಎಂಬುದು ಎಲ್ಲರಿಗೂ ತಿಳಿದಿದೆ. ಹೀಗಾಗಿ ಕೃತಕ ಬುದ್ಧಿವಂತಿಕೆ ಮೂಲಕ ರೂಪಿಸಲಾದ ನಕಲಿ ಕಾನೂನುಗಳು ನ್ಯಾಯಾಲಯ ದಲ್ಲಿ ಬಳಕೆಯಾಗುವ ಕಳವಳ ಈಗ ಹೆಚ್ಚಾಗಿದೆ.

ಇದು ಕಾನೂನು ಹಾಗೂ ನೈತಿಕತೆಯ ಸಮಸ್ಯೆಗಳನ್ನು ತರುವ ಜೊತೆಗೆ, ಜಾಗತಿಕವಾಗಿ ಕಾನೂನು ವ್ಯವಸ್ಥೆಗಳ ಮೇಲಿನ ನಂಬಿಕೆಗೇ ಬೆದರಿಕೆ ತರುವ ಸಾಧ್ಯತೆ ಇದೆ ಎಂದು ಸಿಡ್ನಿಯ ಯು.ಎನ್.ಎಸ್.ಡಬ್ಲ್ಯೂ. ಕಾನೂನು ಉಪನ್ಯಾಸಕ ಮೈಖೆಲ್ ಲೆಗ್ ಹಾಗೂ ಹಿರಿಯ ಸಂಶೋಧಕ ವಿಕಿ ಮೆಕ್‌ನಮಾರಾ ಅಭಿಪ್ರಾಯ ಪಟ್ಟಿದ್ದಾರೆ.

**ನಕಲಿ ಕಾನೂನು ಬಂದಿದ್ದು ಹೇಗೆ?**

ಜನರೇಟಿವ್ ಎ.ಐ. ಮಾಹಿತಿ ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಸಮಾಜಕ್ಕಷ್ಟೇ ಅಲ್ಲದೇ, ಕಾನೂನು ವಿಷಯದಲ್ಲೂ ಇದು ಮಾಹಿತಿ ರೂಪಿಸುತ್ತದೆ. ಆದರೆ, ಅದನ್ನು ಹೊಣೆಗಾರಿಕೆಯಿಂದ ಬಳಸಿಕೊಳ್ಳಬೇಕಿದೆ ಹಾಗೂ ಬಳಕೆಯಲ್ಲಿ ಅಪಾಯವೂ ಇದೆ.

ವಕೀಲರು ತಮ್ಮ ವೃತ್ತಿಪರ ಜ್ಞಾನ ಹಾಗೂ



ಎಐ ಚಿತ್ರ...

ಅನುಭವವನ್ನು ಎಚ್ಚರಿಕೆಯಿಂದ ಬಳಸಲು ತರಬೇತಿ ನೀಡಲಾಗಿರುತ್ತದೆ. ಸಾಮಾನ್ಯವಾಗಿ ಅವರು ಈ ವಿಷಯದಲ್ಲಿ ಅಪಾಯ ತಂದುಕೊಳ್ಳಲು ಮುಂದಾಗುವುದಿಲ್ಲ. ಆದರೂ, ಕೆಲ ವಕೀಲರು ಗೊತ್ತಿದ್ದೋ ಅಥವಾ ಗೊತ್ತಿರದೆಯೋ ಕೃತಕ ಬುದ್ಧಿವಂತಿಕೆಯನ್ನು ಕಾನೂನು ವಿಷಯಕ್ಕೆ ಬಳಸಿದ್ದು ಕಂಡು ಬಂದಿದೆ.

ಬೃಹತ್ ಮಾಹಿತಿ ಆಧರಿಸಿ ಎ.ಐ. ಮಾದರಿಗಳನ್ನು ರೂಪಿಸಲಾಗುತ್ತದೆ. ಇವುಗಳನ್ನು ಬಳಸಿದಾಗ ಹೊಸ ಮಾಹಿತಿ, ವಿಡಿಯೋ ಇಲ್ಲವೇ ಆಡಿಯೋ ಪಡೆದುಕೊಳ್ಳಬಹುದು.

ಎ.ಐ. ಮೂಲಕ ದೊರೆತ ಮಾಹಿತಿ ನಂಬಿಕಾರ್ಹ ಎಂದು ಅನ್ನಿಸಬಹುದು. ಆದರೆ, ಇದರಲ್ಲಿ ಸಾಕಷ್ಟು ಲೋಪಗಳು ನುಸುಳಿರುತ್ತವೆ. ಎ.ಐ. ಕಾರ್ಯ ನಿರ್ವಹಿಸುವ ವಿಧಾನವೇ ಇದಕ್ಕೆ ಕಾರಣ. ಎ.ಐ. ಮಾಹಿತಿ ರೂಪಿಸುವಾಗ ಏನಾದರೂ ಕೊರತೆ ಕಂಡು ಬಂದರೆ, ಕಪೋಲ ಕಲ್ಪನೆ ಮೂಲಕ ಸಮಸ್ಯೆ ಬಗೆಹರಿಸಿಕೊಳ್ಳುತ್ತದೆ. ಹೀಗಾಗಿ ಎ.ಐ. ನೀಡುವ ಮಾಹಿತಿ ಕೆಲವೊಮ್ಮೆ ಭ್ರಮಾತ್ಮಕವಾಗಿರುತ್ತದೆ.

ಜನರೇಟಿವ್ ಎ.ಐ. ಭ್ರಮಾತ್ಮಕ ಮಾಹಿತಿ ರೂಪಿಸುವುದರಲ್ಲಿ ತೊಂದರೆಯೇನೂ ಇಲ್ಲ. ಇದನ್ನು ಸೃಜನಶೀಲತೆಯ ಉದಾಹರಣೆ ಎಂದೂ ಪರಿಗಣಿಸಲಾಗುತ್ತದೆ.

ಆದರೆ, ಎ.ಐ. ಭ್ರಮಾತ್ಮಕವಾಗಿ ಇಲ್ಲವೇ ಕೃತ್ರಿಮವಾಗಿ ರೂಪಿಸಿದ ಮಾಹಿತಿಯನ್ನು ಅಸಲಿ ಎಂದು ಭಾವಿಸಿ ಕಾನೂನು ಪ್ರಕ್ರಿಯೆಯಲ್ಲಿ ಬಳಸಿದಾಗ ದೊಡ್ಡ ಸಮಸ್ಯೆ ಉಂಟಾಗುತ್ತದೆ. ಇದು ವಕೀಲರ ಹಾಗೂ ಕಾನೂನು ಸೇವೆಗಳ ಮೇಲಿನ ಒತ್ತಡ ಹೆಚ್ಚಿಸುತ್ತದೆ.

ಕಾನೂನು ಕುರಿತು ಸಂಶೋಧನೆ ಮಾಡುವ ಬದಲು, ಎ.ಐ. ಬಳಕೆಯ ಅಡ್ಡದಾರಿ ಹಿಡಿಯುವುದು ಸಮಸ್ಯೆಗೆ ಕಾರಣವಾಗುತ್ತದೆ. ಇದು ಕಾನೂನು ವೃತ್ತಿಪರತೆಯ ಮೇಲೆ ಪರಿಣಾಮ ಬೀರುತ್ತದೆ.

ಈ ರೀತಿಯ ಸಮಸ್ಯೆ ಈಗಾಗಲೇ ಹಲವು ದೇಶಗಳಲ್ಲಿ ಕಂಡು ಬಂದಿದೆ.

2023ರಲ್ಲಿ ಅಮೆರಿಕದಲ್ಲಿ ಮಾಟಾ ವರ್ಸಸ್ ಅವಿಯಾಂಕಾ ಪ್ರಕರಣವು ಈಗ ಜನರೇಟಿವ್ ಎ.ಐ. ನಕಲಿ ಪ್ರಕರಣ ಎಂದೇ ಹೆಸರಾಗಿದೆ. ಈ ಪ್ರಕರಣದಲ್ಲಿ ವಕೀಲರು ನ್ಯೂಯಾರ್ಕ್ ನ್ಯಾಯಾಲಯದ ಪ್ರಕರಣದ ಉಲ್ಲೇಖ ಎಂದು ಹೇಳಿ ಎ.ಐ. ಮೂಲಕ ಪಡೆದ ಮಾಹಿತಿಯನ್ನು ಸಲ್ಲಿಸಿದ್ದರು.

ಚಾಟ್‌ಜಿಪಿಟಿ ಎ.ಐ. ಭ್ರಮಾತ್ಮಕ ಮಾಹಿತಿಯನ್ನೂ ನೀಡುತ್ತದೆ ಎಂಬುದು ವಕೀಲರಿಗೆ ಗೊತ್ತಿರಲಿಲ್ಲ. ಎ.ಐ. ನಡೆಯದೇ ಇರುವ ಪ್ರಕರಣವನ್ನು ಕಲ್ಪಿಸಿಕೊಂಡು ವರದಿ ರೂಪಿಸಿತ್ತು. ಇದರ ಪರಿಣಾಮ ತೀವ್ರವಾಗಿತ್ತು. ಈ ಲೋಪ ಬೆಳಕಿಗೆ ಬಂದ ನಂತರ ಪ್ರಕರಣವನ್ನು ನ್ಯಾಯಾಲಯ ತಳ್ಳಿ ಹಾಕಿತ್ತು. ವಕೀಲರಿಗೆ ಹಾಗೂ ಅವರ ಉದ್ಯಮಕ್ಕೆ ದಂಡ ಸಹ ವಿಧಿಸಲಾಗಿತ್ತು.

ಈ ಪ್ರಕರಣ ಸಾಕಷ್ಟು ಪ್ರಚಾರ ಪಡೆದುಕೊಂಡಿತ್ತು. ಆದರೂ, ನಕಲಿ ಪ್ರಕರಣಗಳು ಬೆಳಕಿಗೆ ಬರುತ್ತಲೇ ಇರುತ್ತವೆ. ಅಮೆರಿಕದ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಪರ ಈ ಹಿಂದೆ ಕಾರ್ಯನಿರ್ವಹಿಸಿದ್ದ ವಕೀಲರು ಗೂಗಲ್‌ನ ಬಾರ್ಡ್ ಬಳಸಿದ್ದರು. ಕಾಲ್ಪನಿಕ ಪ್ರಕರಣವನ್ನೇ ಅವರು ನಿಜ ಎಂದು ಭಾವಿಸಿದ್ದರು. ಕೆನಡಾ ಹಾಗೂ ಬ್ರಿಟನ್‌ಗಳಲ್ಲೂ ನಕಲಿ ಪ್ರಕರಣಗಳು ಬೆಳಕಿಗೆ ಬಂದಿವೆ.

ಈ ಪ್ರವೃತ್ತಿ ಇದೇ ರೀತಿ ಮುಂದುವರೆದರೆ, ಕಾನೂನು ವ್ಯವಸ್ಥೆಯ ಮೇಲೆ ಜನರಿಗೆ ನಂಬಿಕೆ ಉಳಿಯುತ್ತದೆಯೇ? ಎಂಬ ಪ್ರಶ್ನೆ ಉದ್ಭವಿಸಿದೆ. ಜನರೇಟಿವ್ ಎ.ಐ. ಅನ್ನು ವಕೀಲರು ಬಳಸುತ್ತಾ ಹೋದರೆ ನ್ಯಾಯಾಲಯಗಳನ್ನು ತಪ್ಪು ದಾರಿಗೆ ಎಳೆದಂತಾಗುತ್ತದೆ. ಇದರಿಂದ ಕಕ್ಷಿದಾರರ ಹಿತಕ್ಕೂ ಹಾನಿಯಾಗುತ್ತದೆ.

ಈ ವಿಷಯ ಈಗಾಗಲೇ ವಿಶ್ವಾದ್ಯಂತ ಗಮನ ಸೆಳೆಯುತ್ತಿದೆ. ಕಾನೂನು ನಿಯಂತ್ರಕರು ಹಾಗೂ ನ್ಯಾಯಾಲಯಗಳು ಬೇರೆ ಬೇರೆ ರೀತಿಯ ಕ್ರಮ ತೆಗೆದುಕೊಳ್ಳುತ್ತಿವೆ.

ಅಮೆರಿಕದ ಹಲವಾರು ರಾಜ್ಯಗಳು ಹಾಗೂ ನ್ಯಾಯಾಲಯಗಳು ಜನರೇಟಿವ್ ಎ.ಐ. ಬಳಕೆಯ ಕುರಿತು ಮಾರ್ಗಸೂಚಿ ಹಾಗೂ ಆದೇಶಗಳನ್ನು ಹೊರಡಿಸಿವೆ. ಜವಾಬ್ದಾರಿಯುತವಾಗಿ ಬಳಸಬೇಕು ಎಂದು ಹೇಳುವುದರಿಂದ ಹಿಡಿದು ನಿಷೇಧದವರೆಗೆ ಹಲವು ಆದೇಶ ಹೊರಡಿಸಲಾಗಿದೆ.

ಬ್ರಿಟನ್ ಹಾಗೂ ಬ್ರಿಟಿಷ್ ಕೊಲಂಬಿಯಾದ ಕಾನೂನು ಸಂಘ ಹಾಗೂ ನ್ಯೂಜಿಲ್ಯಾಂಡ್‌ನ ನ್ಯಾಯಾಲಯಗಳೂ ಮಾರ್ಗಸೂಚಿ ಪ್ರಕಟಿಸಿವೆ.

ಆಸ್ಟ್ರೇಲಿಯಾದ ಎನ್.ಎಸ್.ಡಬ್ಲ್ಯೂ. ವಕೀಲರ ಒಕ್ಕೂಟ ಎ.ಐ. ಮಾರ್ಗಸೂಚಿ ಪ್ರಕಟಿಸಿದೆ. ಕಾನೂನು ವಲಯ ಎ.ಐ. ಸಾಮರ್ಥ್ಯ ಹಾಗೂ ದೌರ್ಬಲ್ಯಗಳ ಬಗ್ಗೆ ತಿಳಿಯುವ ಕಾಲ ಇದಾಗಿದೆ.

# ಐ.ಎನ್.ಡಿ.ಐ. ಗೆದ್ದರೆ ಮೇಕೆದಾಟಿಗೆ ಅವಕಾಶ ಇಲ್ಲ ಎಂದ ಡಿಎಂಕೆ

ಬೆಂಗಳೂರು, ಮಾ. 21 - ಮೇಕೆದಾಟು ಯೋಜನೆಯನ್ನು ಯಾವುದೇ ಕಾರಣಕ್ಕೂ ಜಾರಿ ಮಾಡಲು ಬಿಡುವುದಿಲ್ಲ ಎಂದು ಐ.ಎನ್.ಡಿ.ಐ.ಎ. ಒಕ್ಕೂಟದ ಮಿತ್ರಪಕ್ಷ ಡಿಎಂಕೆ ತನ್ನ ಚುನಾವಣಾ ಪ್ರಣಾಳಿಕೆಯಲ್ಲಿ ಘೋಷಣೆ ಮಾಡಿದ್ದು ರಾಜ್ಯ ಕಾಂಗ್ರೆಸ್ ನಾಯಕರು ಇದಕ್ಕೆ ಏನು ಉತ್ತರ ಕೊಡುತ್ತಾರೆ? ಎಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಇಂದಿಲ್ಲಿ ಪ್ರಶ್ನಿಸಿದ್ದಾರೆ.

**ಕಾಂಗ್ರೆಸ್‌ಗೆ ಅಶೋಕ್ ತರಾಟೆ**

ಈ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಉದ್ದೇಶಿಸಿ ಟ್ವೀಟ್ ಮಾಡಿರುವ ಅವರು, ತಮಿಳುನಾಡಿನ ಆಡಳಿತಾರೂಢ ಡಿಎಂಕೆ ತನ್ನ ಪ್ರಣಾಳಿಕೆಯಲ್ಲಿ, ಕೇಂದ್ರದಲ್ಲಿ ಐ.ಎನ್.ಡಿ.ಐ.ಎ. ಅಧಿಕಾರಕ್ಕೆ ಬಂದರೆ ಮೇಕೆದಾಟು ಯೋಜನೆಯನ್ನು ತಡೆಹಿಡಿಯುವುದಾಗಿ ಹೇಳಿಕೊಂಡಿದೆ. ಈಗ ಕರ್ನಾಟಕ ಕಾಂಗ್ರೆಸ್ ನಾಯಕರು ತಮ್ಮ ಶಾಸಕರನ್ನು ಚೆನ್ನೈಗೆ ಕರೆದುಕೊಂಡು ಹೋಗಿ 'ನಮ್ಮ ನೀರು, ನಮ್ಮ ಹಕ್ಕು' ಪ್ರತಿಭಟನೆ ಮಾಡುತ್ತೀರಾ? ಎಂದಿದ್ದಾರೆ.

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರನ್ನು ಮೆಚ್ಚಿಸಲು ಕನ್ನಡಿಗರ ಹಿತಾಸಕ್ತಿ ಬಲಿಕೊಟ್ಟು ರಾಜಿ ಮಾಡಿಕೊಳ್ಳುತ್ತೀರಾ? ಎಂದು ಕೇಳಿದ್ದಾರೆ.

ಬೆಂಗಳೂರಿಗೆ ನೀರು ತರುತ್ತೇವೆ ಎಂದು ಮೇಕೆದಾಟು ಪಾದಯಾತ್ರೆ ಮಾಡಿ ಕನ್ನಡಿಗರ ಮೂಗಿಗೆ ತುಪ್ಪ ಸವರಿ ಅಧಿಕಾರಕ್ಕೇರಿದ ಕಾಂಗ್ರೆಸ್, ಈಗ ಕನ್ನಡಿಗರ ಬೆನ್ನಿಗೆ ಚೂರಿ ಹಾಕುತ್ತಿದೆ ಎಂದು ಅಶೋಕ್ ಟೀಕಿಸಿದ್ದಾರೆ.

## ಮೇಕೆದಾಟು ನಿರ್ಮಾಣದ ಜವಾಬ್ದಾರಿ ತೆಗೆದುಕೊಂಡಿದ್ದೇವೆ : ಡಿಕೆಶಿ

ಬೆಂಗಳೂರು, ಮಾ. 21 – ಮೇಕೆದಾಟು ಅಣೆಕಟ್ಟೆ ನಿರ್ಮಾಣಕ್ಕೆ ಬದ್ಧವಾಗಿರುವುದಾಗಿ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

ಐ.ಎನ್.ಡಿ.ಐ.ಎ. ಅಧಿಕಾರಕ್ಕೆ ಬಂದರೆ ಮೇಕೆದಾಟು ಅಣೆಕಟ್ಟೆ ನಿರ್ಮಾಣಕ್ಕೆ ಅವಕಾಶ ನೀಡುವುದಿಲ್ಲ ಎಂದು ಡಿಎಂಕೆ ತನ್ನ ಪ್ರಣಾಳಿಕೆಯಲ್ಲಿ ಹೇಳಿರುವುದನ್ನು ತಳ್ಳಿ ಹಾಕಿರುವ ಶಿವಕುಮಾರ್, ಅದು ಅವರ ಪಕ್ಷದ ರಾಜಕೀಯ ಬಯಕೆ ಅಷ್ಟೇ ಎಂದಿದ್ದಾರೆ.

ಮೇಕೆದಾಟು ನಿರ್ಮಾಣದ ಜವಾಬ್ದಾರಿಯನ್ನು ನಾನು ಹಾಗೂ ಜಲ ಸಂಪನ್ಮೂಲ ಇಲಾಖೆ ತೆಗೆದುಕೊಂಡಿದ್ದೇವೆ ಎಂದೂ ಅವರು ಹೇಳಿದರು.

ಕಾವೇರಿ ನೀರು ನಿರ್ವಹಣಾ ಸಮಿತಿಗೂ ಸಮಸ್ಯೆಯ ಅರಿವಿದೆ. ಅವರೂ ನಮಗೆ ನ್ಯಾಯ ಕೊಡಬೇಕು. ನ್ಯಾಯಾಲಯದಲ್ಲೂ ನಮಗೆ ನ್ಯಾಯ ಸಿಗಲಿದೆ ಎಂದವರು ಹೇಳಿದರು.

# ನೂತನ ಚುನಾವಣಾ ಆಯುಕ್ತರ ನೇಮಕ ತಡೆಗೆ ಸುಪ್ರೀಂ ನಕಾರ

ನವದೆಹಲಿ, ಮಾ. 21 – ನೂತನ ಚುನಾವಣಾ ಆಯುಕ್ತರ ನೇಮಕಕ್ಕೆ ತಡೆಯಾಜ್ಞೆ ನೀಡಬೇಕು ಎಂಬ ಮನವಿಗಳನ್ನು ತಳ್ಳಿ ಹಾಕಿರುವ ಸುಪ್ರೀಂ ಕೋರ್ಟ್, ಲೋಕಸಭಾ ಚುನಾವಣೆ ಸನಿಹದಲ್ಲಿರು ವಾಗಲೇ ಈ ರೀತಿಯ ಆದೇಶ ಹೊರಡಿ ಸುವುದು ಅರಾಜಕತೆ ಹಾಗೂ ಅನಿಶ್ಚಿತತೆಗೆ ಕಾರಣವಾಗಲಿದೆ ಎಂದು ಹೇಳಿದೆ. ಇತ್ತೀಚೆಗೆ ಜ್ಞಾನೇಶ್ ಕುಮಾರ್ ಹಾಗೂ ಸುಖಬೀರ್ ಸಿಂಗ್ ಸಂಧು ಅವರನ್ನು ಚುನಾವಣಾ ಆಯುಕ್ತರನ್ನಾಗಿ ನೇಮಿಸಲಾಗಿತ್ತು.

ಚುನಾವಣಾ ಆಯೋಗವು ಕಾರ್ಯಾಂಗದ ಕೈ ಕೆಳಗೆ ಬರುವುದಿಲ್ಲ ಎಂದು ಹೇಳಿರುವ ಸುಪ್ರೀಂ ಕೋರ್ಟ್, ಚುನಾವಣಾ ಆಯುಕ್ತರ ನೇಮಕ ಸಂಬಂಧದ ಕಾಯ್ದೆಯ ಕಾರ್ಯ ನಿರ್ವಹಣೆಗೆ ಮಧ್ಯಂತರ ತಡೆಯಾಜ್ಞೆ ನೀಡಲು ನಿರಾಕರಿಸಿದೆ.

ಈ ಹಂತದಲ್ಲಿ ಕಾಯ್ದೆಗೆ ತಡೆ ನೀಡಲಾಗದು. ಅಥವಾ ಅದನ್ನು ಅಮಾನತ್ತಿನಲ್ಲಿರಿಸಲು ಸಾಧ್ಯವಾಗದು. ಇದರಿಂದ ಅನಿಶ್ಚಿತತೆ ಹಾಗೂ ಅರಾಜಕತೆ ಉಂಟಾಗುತ್ತದೆ ಎಂದು ನ್ಯಾಯಮೂರ್ತಿಗಳಾದ ಸಂಜೀವ್ ಖನ್ನ ಹಾಗೂ ದೀಪಂಕರ್ ದತ್ತ ಅವರನ್ನು ಒಳಗೊಂಡ ಪೀಠ ಹೇಳಿದೆ.

2023ರ ಮುಖ್ಯ ಚುನಾವಣಾ ಆಯುಕ್ತ ಹಾಗೂ ಇತರೆ ಚುನಾವಣಾ ಆಯುಕ್ತರ ನೇಮಕ ಕುರಿತ ಕಾಯ್ದೆಯ ಸಿಂಧುತ್ವವನ್ನು ಪರಿಶೀಲಿಸಲಾಗುವುದು ಎಂದು ಹೇಳಿರುವ ನ್ಯಾಯಾಲಯ, ಕೇಂದ್ರ ಸರ್ಕಾರ ಆರು ವಾರಗಳಲ್ಲಿ ಪ್ರತಿಕ್ರಿಯೆ ಸಲ್ಲಿಸಬೇಕೆಂದು ತಿಳಿಸಿದೆ. ಮುಂದಿನ ವಿಚಾರಣೆಯನ್ನು ಆಗಸ್ಟ್ 5ಕ್ಕೆ ನಿಗದಿ ಪಡಿಸಲಾಗಿದೆ.

ಚುನಾವಣೆ ಸನಿಹದಲ್ಲಿರುವಾಗಲೇ ಆಯುಕ್ತರ ನೇಮಕ ಮಾಡಲಾಗಿದೆ. ನಾವು ತೆಗೆದುಕೊಳ್ಳುವ ಕ್ರಮದಿಂದ ಆಗುವ ಪರಿಣಾಮಗಳ ಬಗ್ಗೆ ಯೋಚಿಸಬೇಕಾಗುತ್ತದೆ. ಅಲ್ಲದೇ, ನೂತನ ಚುನಾವಣಾ ಆಯುಕ್ತರ ವಿರುದ್ಧ ಯಾವುದೇ ಆರೋಪಗಳಿಲ್ಲ ಎಂದು ಪೀಠ ಹೇಳಿದೆ.

ಆದರೆ, ಆಯುಕ್ತರ ನೇಮಕ ಪ್ರಕ್ರಿಯೆ ಪಾರದರ್ಶಕವಾಗಿಲ್ಲ ಎಂಬುದರ ಬಗ್ಗೆ ಪೀಠ ಅಸಮಾಧಾನ ವ್ಯಕ್ತಪಡಿಸಿದೆ.

ಕಾಂಗ್ರೆಸ್ ನಾಯಕಿ ಜಯಾ ಠಾಕೂರ್, ಹಾಗೂ ಸರ್ಕಾರೇತರ ಸಂಘಟನೆಯಾದ ಅಸೋಸಿಯೇಷನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ಸ್ ಸೇರಿದಂತೆ ಹಲವರು ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ದಾಖಲಿಸಿ, ಆಯುಕ್ತರ ನೇಮಕಕ್ಕೆ ತಡೆ ಕೋರಿದ್ದರು.

ಕೇಂದ್ರ ಸರ್ಕಾರ ರೂಪಿಸಿದ ಕಾಯ್ದೆಯಲ್ಲಿ ಆಯುಕ್ತರ ಆಯ್ಕೆ ಸಮಿತಿಯಿಂದ ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿಗಳನ್ನು ಹೊರಗಿಡಲಾಗಿತ್ತು. ಅವರ ಜಾಗದಲ್ಲಿ ಪ್ರಧಾನ ಮಂತ್ರಿಯಿಂದ ನೇಮಕಗೊಂಡ ಸಚಿವರನ್ನು ನೇಮಿಸಲಾಗಿತ್ತು.

# ಅಭ್ಯರ್ಥಿ ಘೋಷಣೆಗೆ ಮುಂಚೆ ಕಾಂಗ್ರೆಸ್‌ನಿಂದ ಗೆಲುವಿನ ಪಾಠ

ಬೆಂಗಳೂರು, ಮಾ. 21 - ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಲು ಈ ಬಾರಿ ಹೆಚ್ಚಾಗಿ ಪ್ರಜ್ಞಾವಂತ ಮತ್ತು ಮಹಿಳೆಯರಿಗೆ ಅವಕಾಶ ಮಾಡಲಾಗಿದೆ ಎಂದು ಕಾಂಗ್ರೆಸ್ ಮುಖಂಡರು ತಿಳಿಸಿದ್ದಾರೆ.

**ಸಚಿವರು, ಮುಖಂಡರ ಸಂಬಂಧಿಗಳಿಗೆ ಟಿಕೆಟ್ ನೀಡಿದ್ದಾರೆ ಎಂಬ ಮಾತುಗಳು ನಮಗೆ ಬೇಕಾಗಿಲ್ಲ, ಗೆಲುವಿನ ಗುರಿ ಇಟ್ಟುಕೊಂಡು ನಿಮ್ಮನ್ನು ಆಯ್ಕೆ ಮಾಡಿದ್ದೇವೆ. ನೀವು ಇರುವ ಕಡೆಗೆ 'ಬಿ' ಫಾರಂ ಕಳುಹಿಸಿಕೊಡುತ್ತೇವೆ, ನೀವು, ಕೇಂದ್ರಗಳನ್ನು ಬಿಟ್ಟು ಹೊರಬರಬೇಡಿ ಎಂದು ಮುಖಂಡರು ಅಭ್ಯರ್ಥಿಗಳಿಗೆ ಕಿವಿಮಾತು ಹೇಳಿದ್ದಾರೆ.**

ಎಐಸಿಸಿಯಿಂದ ಅಭ್ಯರ್ಥಿಗಳ ಪಟ್ಟಿ ಅಧಿಕೃತ ಘೋಷಣೆಗೆ ಮುನ್ನವೇ 24 ಕ್ಷೇತ್ರಗಳ ಅಭ್ಯರ್ಥಿಗಳು, ಸಚಿವರಿಗೆ ಚುನಾವಣೆ ಗೆಲುವಿನ ಪಾಠ ಹೇಳಿಕೊಡಲಾಗಿದೆ.

ಸಭೆ ಉದ್ದೇಶಿಸಿ ಮಾತನಾಡಿದ ರಾಜ್ಯ ಉಸ್ತುವಾರಿ ಹೊಣೆ ಹೊತ್ತ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್, ಚುನಾವಣಾ ತಂತ್ರಗಾರಿಕೆಯನ್ನು ಬಿಡಿಸಿಟ್ಟು, ಈ ಮಾನದಂಡಗಳ ಆಧಾರದ ಮೇಲೆ ಚುನಾವಣೆ ಎದುರಿಸಿ ಎಂದಿದ್ದಾರೆ.

ಕಳೆದ ನಾಲ್ಕು ದಶಕಗಳ ರಾಜಕೀಯ ಇತಿಹಾಸದಲ್ಲೇ ಅತಿ ಹೆಚ್ಚು ಯುವ, ಮಹಿಳಾ, ವಿದ್ಯಾವಂತರಿಗೆ ಟಿಕೆಟ್ ನೀಡಿದ್ದೇವೆ. ಗೆಲ್ಲುವ ಭರವಸೆಯಿಂದ ನಮ್ಮನ್ನು ಟಿಕೆಟ್ ಕೇಳಿದ್ದೀರಿ. ನೀವು ಕೇಳಿದ ನಂತರ, ನಾವು ಸಮೀಕ್ಷಾ ವರದಿಗಳನ್ನು ಮುಂದಿಟ್ಟುಕೊಂಡು ನಿಮ್ಮನ್ನು ಆಯ್ಕೆ ಮಾಡಿದ್ದೇವೆ. ಲೋಕಸಭಾ ಚುನಾವಣೆಯಲ್ಲಿ ಗೆಲುವೇ ಮುಖ್ಯ.

20 ರಿಂದ 26 ಸ್ಥಾನ ಗೆಲ್ಲಲೇ ಬೇಕು. ಈ ಹಿನ್ನೆಲೆಯಲ್ಲಿ ನಾವು ಯಾವ ಒತ್ತಡಕ್ಕೂ ಮಣಿಯದೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಿದ್ದೇವೆ.

ಕೇಂದ್ರದಲ್ಲಿ ಆಡಳಿತದಲ್ಲಿರುವ ಬಿಜೆಪಿ, ಕರ್ನಾಟಕದಲ್ಲೂ ಹೆಚ್ಚು ಸ್ಥಾನ ಗಳಿಸಲು ಎಂಥೆಂತಹ ತಂತ್ರಗಾರಿಕೆ ನಡೆಸಬಹುದೆಂಬ ಮಾಹಿತಿಯನ್ನು ಅಭ್ಯರ್ಥಿಗಳ ಮುಂದಿಟ್ಟು, ನೀವು ಅದಕ್ಕೆ ಹೇಗೆ ರಾಜಕೀಯ ಮಾಡಬೇಕೆಂದು ಪಾಠ ಹೇಳಿಕೊಟ್ಟಿದ್ದಾರೆ.

ಕ್ಷೇತ್ರದ ಮುಖಂಡರು ಹಾಗೂ ಕಾರ್ಯಕರ್ತರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಿ, ಯಾರನ್ನೂ ದೂರ ತಳ್ಳಬೇಡಿ, ಇದಲ್ಲದೆ, ಅನ್ಯ ಪಕ್ಷಗಳ ಕಾರ್ಯಕರ್ತರ ಹಾಗೂ ಮುಖಂಡರ ವಿಶ್ವಾಸ ಪಡೆದು ನಿಮ್ಮತ್ತ ಸೆಳೆಯಿರಿ. ನಿಮ್ಮ ಏನೇ ಸಮಸ್ಯೆಗಳಿದ್ದರೂ ಪ್ರತಿ ಕ್ಷೇತ್ರಕ್ಕೂ ನೇಮಕಗೊಳ್ಳುವ ಚುನಾವಣಾ ಉಸ್ತುವಾರಿ ಅವರ ಬಳಿ ಸಮಸ್ಯೆ ಬಗೆಹರಿಸಿಕೊಳ್ಳಿ.

ಸಚಿವರುಗಳಿಗೇ ಕ್ಷೇತ್ರಗಳ ಮೇಲುಸ್ತುವಾರಿ ವಹಿಸಲಾಗುವುದು, ಅವರುಗಳ ಜೊತೆ ಕ್ಷೇತ್ರದ ಪಕ್ಷದ ಶಾಸಕರು ಮತ್ತು ಕಳೆದ ಚುನಾವಣೆಯಲ್ಲಿ ಸೋತ ಅಭ್ಯರ್ಥಿಗಳಿರುತ್ತಾರೆ.

ಪ್ರಚಾರದಲ್ಲಿ ಗ್ಯಾರಂಟಿ ಯೋಜನೆಗಳಿಗೆ ಆದ್ಯತೆ ನೀಡಿ, ಅಲ್ಲದೆ, ತಂತ್ರಗಾರಿಕೆಯೇ ನಿಮ್ಮ ಎದುರಾಳಿಗಳಿಗೆ ಪ್ರತಿ ಅಸ್ತ್ರವಾಗಬೇಕು ಎಂದು ಹೇಳಿದ್ದಾರೆ.

ಎಲ್ಲಾ 28 ಕ್ಷೇತ್ರಗಳಲ್ಲೂ ನಾವು ಮುಖಂಡರುಗಳು ಪ್ರವಾಸ ಕೈಗೊಳ್ಳುತ್ತೇವೆ, ಚುನಾವಣೆಯ ಚೌಕಟ್ಟಿನಲ್ಲೇ ಸಭೆಗಳನ್ನು ಯಶಸ್ವಿಗೊಳಿಸಿ ಸಭೆಯಲ್ಲಿ ತಿಳಿಸಿದ್ದಾರೆ.

# ಕುಂಬಳೂರಿನಲ್ಲಿ 27ರಂದು ಹನುಮಂತ ದೇವರ ರಥೋತ್ಸವ



ಮಲೇಬೆನ್ನೂರು ಸಮೀಪದ ಕುಂಬಳೂರು ಗ್ರಾಮದ ಶ್ರೀ ಹನುಮಂತ ದೇವರ ರಥೋತ್ಸವವು ಇದೇ ದಿನಾಂಕ 27ರ ಬುಧವಾರ ಜರುಗಲಿದೆ.

ಇಂದು ರಾತ್ರಿ 3.30 ಕ್ಕೆ ಕಂಕಣಧಾರಣೆ, ನಾಳೆ ಶನಿವಾರ ರಾತ್ರಿ 9.30 ಕ್ಕೆ ಗಿಣಿ ಉತ್ಸವ, ದಿನಾಂಕ 24ರ ಭಾನುವಾರ ರಾತ್ರಿ 9.30 ಕ್ಕೆ ಚಿಗರಿ ಉತ್ಸವ, ದಿನಾಂಕ 25ರ ಸೋಮವಾರ ರಾತ್ರಿ 9.30ಕ್ಕೆ ಕುದುರೆ ಉತ್ಸವದ ನಂತರ ರಾತ್ರಿ 12ಕ್ಕೆ ಮಹಾರಥಕ್ಕೆ ಕಳಸ ಸ್ಥಾಪನೆ ಮಾಡಲಾಗುವುದು.

ದಿನಾಂಕ 26ರ ಮಂಗಳವಾರ ಬೆಳಿಗ್ಗೆ 8.30ಕ್ಕೆ ಆನೆ ಉತ್ಸವ, ಮಧ್ಯಾಹ್ನ 12ಕ್ಕೆ ಹರಿಸೇವೆ. ಭಕ್ತಾದಿಗಳಿಂದ ಹರಕೆ, ಬಾಯಿಬೀಗ, ಕಿವಿ ಚುಚ್ಚುವುದು, ಜವಳ, ದಿಂಡು ಉರುಳು ಸೇವೆ ಸೇರಿದಂತೆ ವಿವಿಧ ಹರಕೆಗಳು ನಡೆಯಲಿದ್ದು, ಮಧ್ಯಾಹ್ನ 1 ಗಂಟೆಗೆ ಸ್ವಾಮಿಯ ಬ್ರಹ್ಮರಥೋತ್ಸವ ಜರುಗಲಿದೆ.

ದಿನಾಂಕ 27 ಬುಧವಾರ ಬೆಳಗಿನ ಜಾವ 5 ಗಂಟೆಗೆ ಸ್ವಾಮಿಯ 'ಮಹಾರಥೋತ್ಸವವು' ಶ್ರೀ ಬಸವೇಶ್ವರ, ಶ್ರೀ ಬೀರಲಿಂಗೇಶ್ವರ ದೇವರಗಳೊಡಗೂಡಿ ನಡೆಯಲಿದೆ. ಬೆಳಿಗ್ಗೆ 10ಕ್ಕೆ ಶ್ರೀ ಸ್ವಾಮಿಯ ಬೇಟೆ ಆಡಿ ಬರುವುದಕ್ಕೆ ಹೋಗುವುದು, ನಂತರ 11.30ರವರೆಗೆ ಸಾಮೂಹಿಕ ವಿವಾಹಗಳನ್ನು ಏರ್ಪಡಿಸಲಾಗಿದ್ದು, ಅನ್ನ ಸಂತರ್ಪಣೆ ನಡೆಯಲಿದೆ.

ಸಂಜೆ 4 ಗಂಟೆಗೆ ಮುಳ್ಳು ತುಳಿಯುವುದು, ಶ್ರೀ ಸ್ವಾಮಿಯು ಕುದುರೆ ವಾಹನದ ಮೇಲೆ ಕುಣಿಯುವುದು, ಇರುತ್ತದೆ. ರಾತ್ರಿ 9 ಕ್ಕೆ ಕಂಕಣ ಬಿಚ್ಚುವುದು, ನಂತರ ಓಕಳಿ, ಭೂತಗಳ ಮಣೇವು ಸೇವೆಯೊಂದಿಗೆ ಜಾತ್ರಾ ಕಾರ್ಯಕ್ರಮವು ಮುಕ್ತಾಯಗೊಳ್ಳುತ್ತದೆ ಎಂದು ದೇವಸ್ಥಾನದ ಪ್ರಧಾನ ಅರ್ಚಕರಾದ ಸಂಜಯ್ ಶ್ರೀನಿವಾಸರಾವ್, ರಾಜೀವ್ ಭೀಮರಾವ್ ತಿಳಿಸಿದ್ದಾರೆ.

# ಕುಂಬಳೂರು ಗ್ರಾಮ ಪಂಚಾಯ್ತಿ ಉಪಾಧ್ಯಕ್ಷರಾಗಿ ಆನಂದ್



ಮಲೇಬೆನ್ನೂರು, ಮಾ. 21- ಕುಂಬಳೂರು ಗ್ರಾಮ ಪಂಚಾಯ್ತಿ ಉಪಾಧ್ಯಕ್ಷರಾಗಿ ಕೆ.ಎಸ್. ಆನಂದ್ ಅವರು ಈಚೆಗೆ ನಡೆದ ಚುನಾವಣೆಯಲ್ಲಿ ಆಯ್ಕೆಯಾಗಿದ್ದಾರೆ.

ಉಪಾಧ್ಯಕ್ಷ ಸ್ಥಾನದ ಚುನಾವಣೆಗೆ ಸ್ಪರ್ಧಿಸಿದ್ದ ನಿಟ್ಟೂರಿನ ಶ್ರೀಮತಿ ಚಂದ್ರಮ್ಮ ಮಂಜುನಾಥ್ ಅವರು 5 ಮತಗಳನ್ನು ಪಡೆದು ಪರಾಭವಗೊಂಡರೆ, ಕೆ.ಎಸ್. ಆನಂದ್ 12 ಮತಗಳನ್ನು ಪಡೆದು ಉಪಾಧ್ಯಕ್ಷರಾಗಿ ಆಯ್ಕೆಯಾದರು.

ನಾಗೋಳ್ ಕಲ್ಲೇಶ್ ಅವರ ರಾಜೀನಾಮೆಯಿಂದಾಗಿ ಉಪಾಧ್ಯಕ್ಷ ಸ್ಥಾನ ತೆರವಾಗಿತ್ತು.

ಎಪಿಎಂಸಿ ಕಾರ್ಯದರ್ಶಿ ಶ್ರೀಮತಿ ವಿದ್ಯಾ ಅವರು ಚುನಾವಣಾಧಿಕಾರಿಯಾಗಿ ಕಾರ್ಯ ನಿರ್ವಹಿಸಿದ್ದರು. ಗ್ರಾ.ಪಂ. ಅಧ್ಯಕ್ಷೆ ಶ್ರೀಮತಿ ಉಮಾದೇವಿ ಎಂ.ಹೆಚ್. ಶಿವರಾಮಚಂದ್ರಪ್ಪ, ಪಿಡಿಓ ನರಸಿಂಹಮೂರ್ತಿ ಸೇರಿದಂತೆ ಗ್ರಾ.ಪಂ. ಸದಸ್ಯರು ಈ ವೇಳೆ ಹಾಜರಿದ್ದರು.

# ಮುಕ್ತ ವಿಶ್ವವಿದ್ಯಾನಿಲಯದ ವಿವಿಧ ಕೋರ್ಸ್‌ಗಳ ಪ್ರವೇಶಕ್ಕೆ ಅರ್ಜಿ

ದಾವಣಗೆರೆ, ಮಾ. 21 - ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ 2023-24ನೇ ಶೈಕ್ಷಣಿಕ ವರ್ಷದಲ್ಲಿ ಪ್ರಥಮ ವರ್ಷದ ಬಿ.ಎ, ಬಿ.ಕಾಂ., ಬಿ.ಎಸ್ಸಿ, ಬಿ.ಲಿಬ್, ಐ.ಎಸ್ಸ್‌ಸಿ, ಬಿ.ಸಿ.ಎ, ಬಿ.ಬಿ.ಎ, ಬಿ.ಎಸ್‌ಡಬ್ಲ್ಯು, ಎಂ.ಎ, ಎಂ,ಕಾಂ., ಎಂ.ಸಿ.ಜೆ., ಎಂ.ಬಿ.ಎ., ಎಂ.ಎಸ್ಸಿ., ಎಂ.ಸಿ.ಎ., ಎಂ.ಎಸ್.ಡಬ್ಲ್ಯು, ಮತ್ತು ಪಿಜಿ ಡಿಪ್ಲೋಮಾ ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ಪ್ರವೇಶ ಪ್ರಾರಂಭವಾಗಿರುತ್ತದೆ ಹಾಗೂ ಭೌತಿಕ ಮತ್ತು ದೂರ ಶಿಕ್ಷಣ ಎರಡು ಶೈಕ್ಷಣಿಕ ಕೋರ್ಸುಗಳನ್ನು ಏಕಕಾಲದಲ್ಲಿ ಓದಲು ಅವಕಾಶವಿರುತ್ತದೆ.

ಬಿ.ಪಿ.ಎಲ್. ಕಾರ್ಡ್ ಹೊಂದಿರುವ ಮಹಿಳಾ ವಿದ್ಯಾರ್ಥಿನಿಯರಿಗೆ, ರಕ್ಷಣಾ ಇಲಾಖೆ ಹಾಗೂ ಮಾಜಿ ಸೈನಿಕ ವಿದ್ಯಾರ್ಥಿಗಳಿಗೆ ಮತ್ತು ಆಟೋ ಕ್ಯಾಬ್ ಚಾಲಕರು ಮತ್ತು ಅವರ ಮಕ್ಕಳಿಗೆ ಬೋಧನಾ ಶುಲ್ಕದಲ್ಲಿ ರಿಯಾಯಿತಿ ನೀಡಲಾಗುವುದು. ಕೋವಿಡ್-19 ರಿಂದ ಮೃತಪಟ್ಟವರ ಮಕ್ಕಳಿಗೆ, ತೃತೀಯ ಲಿಂಗಿಗಳಿಗೆ, ದೃಷ್ಟಿಹೀನ ವಿದ್ಯಾರ್ಥಿಗಳಿಗೆ ಪೂರ್ಣ ಶುಲ್ಕ ವಿನಾಯಿತಿ ಇರುತ್ತದೆ.

ಹೆಚ್ಚಿನ ಮಾಹಿತಿಗಾಗಿ ವಿಶ್ವವಿದ್ಯಾನಿಲಯದ ಅಧಿಕೃತ ವೆಬ್ಸೈಟ್ www.ksoumysuru.ac.in ಮೂಲಕ ಪರಿಶೀಲಿಸಿವುದು ಅಥವಾ ಖುದ್ದಾಗಿ ಕ.ರಾ.ಮು.ವಿ. ಪ್ರಾದೇಶಿಕ ಕೇಂದ್ರ, ಜೆ.ಹೆಚ್. ಪಟೇಲ್ ಬಡಾವಣೆ, ಶಾಮನೂರು ಹಿಂಭಾಗ, ನಾಗನೂರು ರಸ್ತೆಯಲ್ಲಿರುವ ಕಚೇರಿಯನ್ನು ಸಂಪರ್ಕಿಸುವುದು ಎಂದು ಪ್ರಾದೇಶಿಕ ನಿರ್ದೇಶಕ ಡಾ. ವಿಜಯ್ ಪ್ರಕಾಶ್ ತಿಳಿಸಿದ್ದಾರೆ.


**ಲುಂಬಿನಿ ಇನ್‌ಸ್ಟಿಟ್ಯೂಟ್ ಆಫ್ ಪ್ಯಾರಾ ಮೆಡಿಕಲ್ ಸೈನ್ಸ್ ಕಾಲೇಜ್, ದಾವಣಗೆರೆ.**

**ಬೇಕಾಗಿದ್ದಾರೆ**

* ಆಫೀಸ್ ಕೆಲಸಕ್ಕಾಗಿ- ಯಾವುದೇ ಪದವಿ, ಕಂಪ್ಯೂಟರ್ ಜ್ಞಾನವಿರಬೇಕು.
* ಉಪನ್ಯಾಸಕರು - ಎಂ.ಎಸ್ಸಿ, ನರ್ಸಿಂಗ್, ಬಯೋ ಕೆಮಿಸ್ಟ್ರಿ, ಮೈಕ್ರೋ ಬಯೋಲಜಿ, ಸಿಬಿಝುಡ್, ಬಯೋಲಜಿ, ಕೆಮಿಸ್ಟ್ರಿ ಇತರೆ. ಕಂಪ್ಯೂಟರ್ ಜ್ಞಾನ ಹೊಂದಿರಬೇಕು.

ಅನುಭವ ಇದ್ದವರಿಗೆ ಮೊದಲ ಆದ್ಯತೆ.

**70195 86789, 08192 460622**


**ಮಾನ್ಯ ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ದಾವಣಗೆರೆ.**

ಕಮರ್ಷಿಯಲ್ ಓ.ಎಸ್.ನಂ. 09/2024

**ವಾದಿ :** ಕೆನರಾ ಬ್ಯಾಂಕ್, ವಿನೋಬನಗರ, ಶಾಖೆ, ದಾವಣಗೆರೆ ಪರವಾಗಿ ಪ್ರತಿನಿಧಿಸುವವರು ವ್ಯವಸ್ಥಾಪಕರು.

**ವಿರುದ್ಧ**

**ಪ್ರತಿವಾದಿ :** ನಂದಿನಿ ಹೆಚ್. ಕೋ ಹೆಚ್. ಚಂದ್ರಕಾಂತ್, ಕೆರಾಫ್ ಹೆಚ್. ಚಂದ್ರಕಾಂತ್, ನಂ : 288/2, 1ನೇ ಮೇನ್, 10ನೇ ಕ್ರಾಸ್, ಎಂ.ಜಿ. ಬಿಲ್ಡಿಂಗ್ ಹತ್ತಿರ, ಎಸ್.ಜೆ.ಎಂ. ನಗರ, ದಾವಣಗೆರೆ.

**ಪ್ರತಿವಾದಿಗೆ ನೀಡಲಾದ ಪ್ರಕಟಣಾ ನೋಟೀಸು**

ಮೇಲ್ಕಂಡ ಪ್ರಕರಣವನ್ನು ವಾದಿ ಪ್ರತಿವಾದಿಯರ ವಿರುದ್ಧ ಸಾಲ ವಸೂಲಾತಿಗಾಗಿ ಕೇಸನ್ನು ಹಾಕಿದ್ದು, ಸದರಿ ಪ್ರಕರಣದಲ್ಲಿ ಪ್ರತಿವಾದಿಯು ಸದರಿ ವಿಳಾಸದಲ್ಲಿ ಇದ್ದು ಕೋರ್ಟ್ ಸಮನ್ಸ್ ಮತ್ತು ನೋಂದಣಿ ಅಂಚೆ ಮೂಲಕ ಕಳುಹಿಸಿ ಸಮನ್ಸ್‌ಗಳನ್ನು ಜಾರಿಗಾಗಿ ಕಳುಹಿಸಿದ್ದು ಸದರಿ ಸಮನ್ಸ್‌ಗಳು ಪ್ರತಿವಾದಿ ಉದ್ದೇಶಪೂರ್ವಕವಾಗಿ ಸಮನ್ಸ್ ಜಾರಿ ಮಾಡಿಕೊಂಡಿರುವುದಿಲ್ಲ. ಆದ್ದರಿಂದ ಸದರಿ ಪ್ರತಿವಾದಿಗೆ ಪತ್ರಿಕಾ ಪ್ರಕಟಣೆ ಮೂಲಕ ಸಮನ್ಸ್ ಜಾರಿ ಮಾಡಲು ಘನ ನ್ಯಾಯಾಲಯ ಆದೇಶ ಮಾಡಿರುತ್ತದೆ, ಕಾರಣ ಸದರಿ ಪ್ರಕರಣವು ದಿನಾಂಕ : 24.04.2024 ರಂದು ಬೆಳಿಗ್ಗೆ 11 ಗಂಟೆಗೆ ಪ್ರತಿವಾದಿಯ ಹಾಜರಾತಿಗೆಂದು ಮುದ್ದತ್ತು ನಿಗಧಿ ಪಡಿಸಲಾಗಿರುತ್ತದೆ. ಸದರಿ ದಿನಾಂಕದಂದು ಮಾನ್ಯ ನ್ಯಾಯಾಲಯಕ್ಕೆ ಹಾಜರಾಗಿ ತಮ್ಮ ತಕರಾರು ಇದ್ದಲ್ಲಿ ಸಲ್ಲಿಸತಕ್ಕದ್ದು. ತಪ್ಪದಲ್ಲಿ ಸದರಿ ಪ್ರಕರಣವನ್ನು ತಮ್ಮ ಅನುಪಸ್ಥಿತಿಯಲ್ಲಿ ತೀರ್ಮಾನಿಸಲಾಗುವುದು ತಿಳಿಯಿರಿ.

ನ್ಯಾಯಾಲಯದ ಮೊಹರು ಹಾಗೂ ಸಹಿಯೊಂದಿಗೆ ದಿನಾಂಕ : 21.03.2024 ರಂದು ಕೊಡಲ್ಪಟ್ಟಿದೆ.

**ಶ್ರೀಮತಿ ಸ್ಮಿತಾ ನಾಗೇಶ್ ರೇವಣಕರ್**
ಅಪೀಲುದಾರರ ಪರ ವಕೀಲರು

ಮುಖ್ಯ ಆಡಳಿತಾಧಿಕಾರಿಗಳು,
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ದಾವಣಗೆರೆ.

# ಹೋರಾಟದಿಂದ ಬಂಧನದವರೆಗೆ ಅರವಿಂದ ಕೇಜ್ರಿವಾಲ್ ಪಯಣ

ನವದೆಹಲಿ, ಮಾ. 21 – ಭ್ರಷ್ಟಾಚಾರದ ವಿರುದ್ಧದ ಹೋರಾಟದಲ್ಲಿ ಮುಂಚೂಣಿಯಲ್ಲಿದ್ದು, ಅದೇ ಹೋರಾಟದಿಂದ ಮುಖ್ಯಮಂತ್ರಿಯಾಗಿದ್ದ ಅರವಿಂದ ಕೇಜ್ರಿವಾಲ್, ಈಗ ಅಕ್ರಮ ಹಣ ಪ್ರಕರಣದಲ್ಲಿ ಬಂಧಿತರಾಗಿದ್ದಾರೆ. ಮೊದಲು ಅಧಿಕಾರಿಯಾಗಿ, ಕಾರ್ಯಕರ್ತನಾಗಿ, ರಾಜಕಾರಣಿಯಾಗಿದ್ದ ಕೇಜ್ರಿವಾಲ್, ಭ್ರಷ್ಟಾಚಾರಿ ಎಂಬ ಆರೋಪ ಎದುರಿಸುವಂತಾಗಿದೆ.

ಕೇಜ್ರಿವಾಲ್ ಅವರ ಆಮ್ ಆದ್ಮಿ ಪಾರ್ಟಿ ರಾಷ್ಟ್ರದ ಚುನಾವಣಾ ರಾಜಕಾರಣದಲ್ಲಿ ದೊಡ್ಡ ಹೆಜ್ಜೆ ಇಡುವ ಕನಸಿನೊಂದಿಗೆ, ಪ್ರತಿಪಕ್ಷದ ಐ.ಎನ್.ಡಿ.ಐ.ಎ. ಒಕ್ಕೂಟ ಸೇರಿರುವಾಗಲೇ ಈ ಬೆಳವಣಿಗೆಯಾಗಿದೆ. ದೆಹಲಿ, ಹರಿಯಾಣ ಹಾಗೂ ಗುಜರಾತ್‌ಗಳಲ್ಲಿ ಆಮ್ ಆದ್ಮಿ ಪಾರ್ಟಿಯು ಕಾಂಗ್ರೆಸ್ ಜೊತೆ ಮೈತ್ರಿ ಮಾಡಿಕೊಂಡಿದೆ.

ಕೇಜ್ರಿವಾಲ್ ಅವರು ಆಮ್ ಆದ್ಮಿ ಪಾರ್ಟಿಯ ಕೇಂದ್ರ ಬಿಂದು. ಪಕ್ಷದ ಯೋಜನೆಗಳೆಲ್ಲ ಅವರನ್ನೇ ಅವಲಂಬಿಸಿವೆ. ಹೀಗಾಗಿ ಅವರ ಬಂಧನ ಪಕ್ಷದ ಮುಂದಿನ ಹೆಜ್ಜೆಗಳ ಮೇಲೆ ಪರಿಣಾಮ ಬೀರಲಿದೆ. ಪಕ್ಷದ ಹಲವು ಕೆಲ ಹಿರಿಯ ನಾಯಕರು ಈಗಾಗಲೇ ಜೈಲಿನಲ್ಲಿದ್ದಾರೆ. ಕೆಲವರು ರಾಜಕೀಯದಿಂದ ನೇಪಥ್ಯಕ್ಕೆ ಸರಿದಿದ್ದಾರೆ. ಆಮ್ ಆದ್ಮಿ ಪಾರ್ಟಿಯಲ್ಲಿ ಈಗ ಹೆಚ್ಚು ನಾಯಕರು ಉಳಿದಿಲ್ಲ.



ಕೇಜ್ರಿವಾಲ್ ನಿಕಟವರ್ತಿಗಳಾದ ಸಂಜಯ್ ಸಿಂಗ್ ಹಾಗೂ ಮನೀಶ್ ಸಿಸೋಡಿಯ ಅವರು ಅಬಕಾರಿ ನೀತಿ ಪ್ರಕರಣದಲ್ಲಿ ಜೈಲಿನಲ್ಲಿದ್ದಾರೆ. ಇನ್ನೋರ್ವ ನಿಕಟವರ್ತಿ ಸತ್ಯೇಂದ್ರ ಜೈನ್ ಅವರು ಮತ್ತೊಂದು ಅಕ್ರಮ ಹಣ ಪ್ರಕರಣದಲ್ಲಿ ಜೈಲಿನಲ್ಲಿದ್ದಾರೆ.

ಈಗ ಕೇಜ್ರಿವಾಲ್ ಸ್ಥಾನಕ್ಕೆ ಅವರ ಪತ್ನಿ ಸುನಿತಾ ಕೇಜ್ರಿವಾಲ್ ಹಾಗೂ ಸಚಿವರಾದ ಆತಿಶಿ ಹಾಗೂ ಸೌರಭ್ ಭಾರದ್ವಜ್ ಅವರ ಹೆಸರುಗಳು ಕೇಳಿ ಬರುತ್ತಿವೆ.

ಐ.ಐ.ಟಿ. ಪದವೀಧರರಾದ ಕೇಜ್ರಿವಾಲ್, 2013ರಲ್ಲಿ ಆಮ್ ಆದ್ಮಿ ಪಾರ್ಟಿ ರಚಿಸಿದ್ದರು. ಕಾಂಗ್ರೆಸ್ ಪಕ್ಷದಿಂದ ಹೊರಗಿನಿಂದ ಬೆಂಬಲ ಪಡೆದು ಅವರು ಸರ್ಕಾರ ರಚಿಸಿದ್ದರು. ಮೊದಲ ಚುನಾವಣೆಯಲ್ಲೇ ಅವರು ದೆಹಲಿಯ ಮಾಜಿ ಮುಖ್ಯಮಂತ್ರಿ ಶೀಲಾ ದೀಕ್ಷಿತ್ ಅವರನ್ನು 22 ಸಾವಿರ ಮತಗಳ ಅಂತರದಿಂದ ಪರಾಭವಗೊಳಿಸಿದ್ದರು.

ಕೇಜ್ರಿವಾಲ್ ಅವರ ಮೊದಲ ಸರ್ಕಾರ ಕೇವಲ 49 ದಿನಗಳಲ್ಲಿ ಉರುಳಿತ್ತು. ದೆಹಲಿಯಲ್ಲಿ ಗಳಿಸಿದ ಯಶಸ್ಸಿನ ಉತ್ಸಾಹದಲ್ಲಿದ್ದ ಕೇಜ್ರಿವಾಲ್, 2014ರ ಲೋಕಸಭಾ ಚುನಾವಣೆಯಲ್ಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ವಿರುದ್ಧ ವಾರಣಾಸಿಯಲ್ಲಿ ಸ್ಪರ್ಧಿಸಿದ್ದರು. ಆದರೆ, ಚುನಾವಣೆಯಲ್ಲಿ ಭಾರೀ ಮುಖಭಂಗ ಎದುರಾಗಿತ್ತು.

ಮರು ವರ್ಷ ಕೇಜ್ರಿವಾಲ್ ನೇತೃತ್ವದಲ್ಲಿ ನಡೆದ ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ಅವರ ಪಕ್ಷ 67 ಸ್ಥಾನ ಗಳಿಸಿತ್ತು. ಬಿಜೆಪಿ ಕೇವಲ ಮೂರು ಸ್ಥಾನಗಳಿಗೆ ಕುಸಿದಿದ್ದರೆ, ಕಾಂಗ್ರೆಸ್ ಒಂದು ಸ್ಥಾನ ಪಡೆಯಲೂ ಸಾಧ್ಯವಾಗಿರಲಿಲ್ಲ.

ನಂತರದ ವರ್ಷಗಳಲ್ಲಿ ಕೇಜ್ರಿವಾಲ್ ಅವರ ನೇತೃತ್ವದಲ್ಲಿ ಆಮ್ ಆದ್ಮಿ ಪಾರ್ಟಿ ವೇಗದ ಬೆಳವಣಿಗೆ ಕಂಡಿತ್ತು. ರಾಷ್ಟ್ರೀಯ ಪಕ್ಷ ಎಂಬ ಮಾನ್ಯತೆಯನ್ನೂ ಪಡೆದಿತ್ತು. ದೆಹಲಿಯಲ್ಲಷ್ಟೇ ಅಲ್ಲದೇ, ಪಂಜಾಬ್‌ನಲ್ಲೂ ಸರ್ಕಾರ ರಚಿಸಿತ್ತು. ಗುಜರಾತ್ ಹಾಗೂ ಗೋವಾಗಳಲ್ಲೂ ತನ್ನ ಛಾಪು ಮೂಡಿಸಿತ್ತು.

ಆರೋಗ್ಯ, ಶಿಕ್ಷಣ, ನೀರು ಹಾಗೂ ವಿದ್ಯುತ್ ರೀತಿಯ ವಿಷಯಗಳು ಕೇಜ್ರಿವಾಲ್ ಅವರ ರಾಜಕೀಯದ ಪ್ರಮುಖ ವಿಷಯಗಳಾಗಿದ್ದವು.

ರಾಜಕೀಯದ ಆರಂಭದಲ್ಲಿ ಯಾವ ಪಕ್ಷಗಳನ್ನು ಕೇಜ್ರಿವಾಲ್ ಟೀಕಿಸಿದ್ದರೋ, ಅದೇ ಪಕ್ಷಗಳ ಜೊತೆ ಕೈ ಜೋಡಿಸಿದ್ದರು. ಐ.ಎನ್.ಡಿ.ಐ.ಎ. ಮೈತ್ರಿಕೂಟದಲ್ಲಿ ಸೇರಿದ ಅವರು, ಮೃದು ಹಿಂದುತ್ವ ಧೋರಣೆ ಅನುಸರಿಸಲು ಹಿಂಜರಿದಿರಲಿಲ್ಲ. ದೆಹಲಿ ವಿಧಾನಸಭೆಯಲ್ಲಿ ಅವರು ಜೈ ಶ್ರೀರಾಮ್ ಘೋಷಣೆ ಮಾಡಿದ್ದರು.

ದಶಕದ ರಾಜಕೀಯದ ನಂತರ ಕೇಜ್ರಿವಾಲ್, ದೇಶದ ಉನ್ನತ ರಾಜಕಾರಣಿಗಳ ಸಾಲಿಗೆ ಸೇರ್ಪಡೆಯಾಗಿದ್ದರು. ಅವರ ರಾಜಕೀಯ ಮಹತ್ವಾಕಾಂಕ್ಷೆಗೆ ಈಗ ಅಬಕಾರಿ ಹಗರಣದ ಮಸಿ ಬಳಿದಿದೆ. ಮುಂದಿನ ರಾಜಕೀಯ ಹೆಜ್ಜೆ ಸವಾಲಿನದ್ದಾಗಿದೆ.



## ಶಾಮನೂರಿನಲ್ಲಿ ವಿಜೃಂಭಣೆಯ ಬೆಲ್ಲದ ಬಂಡಿ ಉತ್ಸವ

ದಾವಣಗೆರೆ, ಮಾ.21- ಶಾಮನೂರಿನ ಶ್ರೀ ಆಂಜನೇಯ ಸ್ವಾಮಿ ರಥೋತ್ಸವದ ಅಂಗವಾಗಿ ನಿನ್ನೆ ಬೆಲ್ಲದ ಬಂಡಿ ಉತ್ಸವ ವಿಜೃಂಭಣೆಯಿಂದ ನಡೆಯಿತು.

# ದೇಶ ಕಾಯುವ ಸೈನಿಕ, ಅನ್ನ ಕೊಡುವ ರೈತನನ್ನು ಮರೆಯಬಾರದು



ರಂಭಾಪುರಿ ಪೀಠ (ಬಾಳೆಹೊನ್ನೂರು), ಮಾ.21 - ಶ್ರಮದ ಬೆವರಿನ ಫಲ ಶಾಶ್ವತ ಮತ್ತು ಸುಖದಾಯಕ. ಶ್ರಮವಿಲ್ಲದೇ ಬಂದ ಸಂಪತ್ತು ಬಹಳ ಕಾಲ ಉಳಿಯದು. ದೇಶವನ್ನು ಕಾಯುವ ಸೈನಿಕ ಮತ್ತು ಅನ್ನ ಕೊಡುವ ರೈತನನ್ನು ಎಂದಿಗೂ ಮರೆಯಬಾರದೆಂದು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಕಳಕಳಿ ವ್ಯಕ್ತಪಡಿಸಿದರು.

ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ರಂಭಾಪುರಿ ಪೀಠದಲ್ಲಿ ಇಂದು ಜರುಗಿದ ಸಾವ ಯವ ಕೃಷಿ ಒಂದು ಚಿಂತನ ಗೋಷ್ಠಿಯ ಸಾನ್ನಿಧ್ಯ ವಹಿಸಿ ಜಗದ್ಗುರುಗಳು ಆಶೀರ್ವಚನ ನೀಡಿದರು.

ರಾಸಾಯನಿಕ ಗೊಬ್ಬರಗಳ ಬಳಕೆಯಿಂದಾಗಿ ಭೂಮಿಗಳು ಬರಡಾಗುತ್ತಿವೆ. ರಾಸಾಯನಿಕ ಗೊಬ್ಬರದಿಂದ ಬೆಳೆದ ಪದಾರ್ಥಗಳ ಸೇವನೆಯಿಂದ ಮನುಷ್ಯನ ಆರೋಗ್ಯದ ಮೇಲೆ ದುಷ್ಪರಿಣಾಮಗಳು ಉಂಟಾಗುತ್ತವೆ. ಸತ್ವಭರಿತ ಬೆಳೆಯನ್ನು ಬೆಳೆಯಬೇಕಾದರೆ ಸಾವಯವ ಕೃಷಿಯ ಅವಶ್ಯಕತೆಯಿದೆ. ಸಾವಯವ ಕೃಷಿಯಿಂದ ಬಂದ ಫಸಲುಗಳ ಬಳಕೆಯಿಂದ ಮನುಷ್ಯನ ಆರೋಗ್ಯ ಹೆಚ್ಚುವುದರಲ್ಲಿ ಯಾವುದೇ ಸಂದೇಹವಿಲ್ಲ. ಔದ್ಯೋಗಿಕ ಕ್ಷೇತ್ರಕ್ಕೆ ಕೊಡುವ ಸಹಕಾರವನ್ನು ಸಾವಯವ ಕೃಷಿ ಮಾಡುವ ರೈತನಿಗೆ ಸರ್ಕಾರಗಳು ರೈತನಿಗೆ ಕೊಟ್ಟರೆ ಅದ್ಭುತ ಸಾಧನೆಯನ್ನು ಮಾಡಲು ಸಾಧ್ಯ. ಮನುಷ್ಯ ಸ್ವೀಕರಿಸುವ ಆಹಾರ ವಸ್ತುಗಳು ಕಲಬೆರಕೆಯಿಂದ ಕಲುಷಿತಗೊಂಡಿವೆ. ಭೂಮಿ ಫಲವತ್ತಾಗಲು ಸಾವಯವ ಕೃಷಿಯನ್ನು ರೈತರು ಅಳವಡಿಸಿಕೊಂಡು ಉತ್ತಮ ಬೆಳೆ ಬೆಳೆದಾಗ ಯೋಗ್ಯ ಬೆಲೆಯನ್ನು ಸರ್ಕಾರ ದೊರಕಿಸಿಕೊಟ್ಟರೆ ರೈತರ ಬಾಳು ಉಜ್ವಲಗೊಳ್ಳಲು ಸಾಧ್ಯ. ರೈತರ ಹೆಸರಿನಲ್ಲಿ ಅದೆಷ್ಟೋ ಸಂಘಟನೆಗಳಿದ್ದರೂ ನಿಶ್ಚಿತ ಫಲ ಪಡೆಯಲು ಸಾಧ್ಯವಾಗುತ್ತಿಲ್ಲವೆಂದು ಶ್ರೀ ರಂಭಾಪುರಿ ಜಗದ್ಗುರುಗಳು ವಿಷಾದ ವ್ಯಕ್ತಪಡಿಸಿದರು.

ಸಮಾರಂಭವನ್ನು ಉದ್ಘಾಟಿಸಿದ ಕರ್ನಾಟಕ ರಾಜ್ಯ ರೈತ ಸಂಘದ ಅಧ್ಯಕ್ಷ ಹೆಚ್.ಆರ್.ಬಸವರಾಜ್ ಮಾತನಾಡಿ, ರೈತರ ಸಂಕಷ್ಟಗಳು ಬಹಳಷ್ಟಿವೆ. ಶ್ರಮದಿಂದ ದುಡಿಯುವ ರೈತರ ಪರಿಸ್ಥಿತಿ ಚಿಂತಾಜನಕವಾಗಿದೆ. ಸಕಾಲಕ್ಕೆ ಮಳೆಯಿಲ್ಲದೇ ಉತ್ತಮ ಬೆಳೆಯಿಲ್ಲದೇ ಇರುವುದು ಹಾಗೂ ಬೆಳೆದ ಬೆಳೆಗೆ ಹೆಚ್ಚಿನ ಬೆಲೆ ಸಿಗದಂತಾಗಿ ರೈತ ಸಾಲದಲ್ಲಿ ಸಿಲುಕಿ ನಲುಗುತ್ತಿದ್ದಾನೆ. ಇಂಥ ಸಂದರ್ಭದಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ವಿಶೇಷ ಗಮನ ಹರಿಸಿ ರೈತರಿಗೆ ಹೆಚ್ಚೆಚ್ಚು ಅನುಕೂಲಗಳನ್ನು ಕಲ್ಪಿಸಿಕೊಡಬೇಕೆಂದು ಆಗ್ರಹಿಸಿದರು.

ಹುಕ್ಕೇರಿ ಹಿರೇಮಠದ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಸಾವಯವ ಕೃಷಿ ಪದ್ಧತಿಯನ್ನು ರೈತರು ಅಳವಡಿಸಿಕೊಳ್ಳಬೇಕು. ಪಶು ಸಂಗೋಪನೆಯಿಂದ ಬಹಳಷ್ಟು ಪ್ರಯೋಜನ ವಿದೆ. ಕೊಟ್ಟಿಗೆ ಗೊಬ್ಬರ ಬಳಸುವುದರಿಂದ ಭೂಮಿಯ ಸತ್ವ ಸಮೃದ್ಧಿಗೊಂಡು ಉತ್ತಮ ಬೆಳೆ ಬರಲು ಸಾಧ್ಯವಾಗುತ್ತದೆ. ಕೃಷಿ ಕ್ಷೇತ್ರದಲ್ಲಿ ಹಲವಾರು ಅಭಿವೃದ್ಧಿ ಪರವಾದ ಯೋಜನೆಗಳಿವೆ. ಅವುಗಳ ಪ್ರಯೋಜನವನ್ನು ರೈತರು ಪಡೆಯುವಂತಾಗಬೇಕೆಂದರು.

> **ಭಾರತ ಹಳ್ಳಿಗಳ ದೇಶ. ಹಳ್ಳಿಗಳು ಅಭಿವೃದ್ಧಿಯಾದರೆ ದೇಶ ಅಭಿವೃದ್ಧಿಯಾಗಲು ಸಾಧ್ಯ. ನೂರಕ್ಕೆ ಎಪ್ಪತ್ತರಷ್ಟು ಜನರು ರೈತರಿದ್ದಾರೆ. ಮನುಷ್ಯನ ಉಜ್ವಲ ಭವಿಷ್ಯಕ್ಕೆ ಆಹಾರ ಆರೋಗ್ಯ ಮತ್ತು ಆಧ್ಯಾತ್ಮ ಬಹಳ ಮುಖ್ಯ.**
> **-ರಂಭಾಪುರಿ ಜಗದ್ಗುರುಗಳು**

ಕೃಷಿ ತಜ್ಞ ಚಂದ್ರಶೇಖರ ನಾರಣಾಪುರ ಮಾತನಾಡಿ, ನೈಸರ್ಗಿಕ ಕೃಷಿ ಮಾಡುವ ರೈತ ಎದೆಗುಂದಬಾರದು. ನೈಸರ್ಗಿಕ ಕೃಷಿಯಿಂದ ಮೊದಲು ಹೆಚ್ಚು ಬೆಳೆ ಬೆಳೆಯಲು ಸಾಧ್ಯವಾಗುವುದಿಲ್ಲ. ಕ್ರಮೇಣ ಭೂಮಿಯ ಫಲವತ್ತತೆ ಹೆಚ್ಚಾಗಿ ಉತ್ತಮ ಬೆಳೆಯಲು ಸಾಧ್ಯವಾಗುತ್ತದೆ. ಅಲ್ಪ ಭೂಮಿಯಲ್ಲಿ ಒಳ್ಳೆ ಫಸಲು ಬೆಳೆಯಲು ಸಾಧ್ಯವೆಂಬುದನ್ನು ಸ್ವತಃ ನಾನು ಕೃಷಿ ಮಾಡಿ ಯಶಸ್ವಿಯಾಗಿದ್ದೇನೆ. ರೈತ ಸಮುದಾಯ ಜಾಗೃತಗೊಂಡು ನೈಸರ್ಗಿಕ ಕೃಷಿಯನ್ನು ಹೆಚ್ಚು ಬೆಳೆಸಲು ಮುಂದಾಗಬೇಕೆಂದರು.

ಎಡೆಯೂರು ರೇಣುಕ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿದ್ದರು. ನೆಗಳೂರು ಸಂಸ್ಥಾನ ಹಿರೇಮಠದ ಗುರುಶಾಂತೇಶ್ವರ ಶಿವಾಚಾರ್ಯ ಸ್ವಾಮಿಗಳು ಪ್ರಾಸ್ತಾವಿಕ ನುಡಿದರು. ಮುಕ್ತಿಮಂದಿರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಉಪಸ್ಥಿತರಿದ್ದರು.

ಚಿಕ್ಕಮಗಳೂರಿನ ಕು. ತನ್ಮಯಿ ಭರತ ನಾಟ್ಯ ಪ್ರದರ್ಶಿಸಿದರು. ಜಗದ್ಗುರು ರೇಣುಕಾಚಾರ್ಯ ಶಿಕ್ಷಣ ಪ್ರತಿಷ್ಠಾನದ ಸದಸ್ಯ ಬಿ.ಎ.ಶಿವಶಂಕರ ಸ್ವಾಗತಿಸಿದರು. ಚಿಕ್ಕಮಗಳೂರು ದೇವಿ ಗುರುಕುಲದ ಡಾ|| ದಯಾನಂದ ಶಾಸ್ತ್ರಿಗಳು ಭಕ್ತಿ ಗೀತೆ ಹಾಡಿದರು. ತಾವರಕೆರೆ ಡಾ|| ಅಭಿನವ ಸಿದ್ಧಲಿಂಗ ಶಿವಾಚಾರ್ಯ ಸ್ವಾಮಿಗಳು ನಿರೂಪಿಸಿದರು.

**ಅಡ್ಡಪಲ್ಲಕ್ಕಿ ಮಹೋತ್ಸವ :** ಸಮಾರಂಭಕ್ಕೂ ಮುನ್ನ ಶ್ರೀ ಸೋಮೇಶ್ವರ ದೇವಸ್ಥಾನದಿಂದ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ದೇವಸ್ಥಾನ ದವರೆಗೆ ಶ್ರೀ ರಂಭಾಪುರಿ ಜಗದ್ಗುರುಗಳವರ ಬೆಳ್ಳಿ ಅಡ್ಡಪಲ್ಲಕ್ಕಿ ಮಹೋತ್ಸವವು ಸಡಗರ - ಸಂಭ್ರಮದಿಂದ ಜರುಗಿತು. ಸಂಜೆ ಶ್ರೀ ವೀರಭದ್ರಸ್ವಾಮಿ ಚಿಕ್ಕರಥೋತ್ಸವ ಜರುಗಿತು.

## ನಗರದ ಯುಬಿಡಿಟಿ ಕಾಲೇಜಿನಲ್ಲಿ ಇಂದು ವಿಶ್ವ ಗ್ರಾಹಕರ ದಿನಾಚರಣೆ

ಯು.ಬಿ.ಡಿ.ಟಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಇಂದು ಬೆಳಿಗ್ಗೆ 11 ಗಂಟೆಗೆ ವಿಶ್ವ ಗ್ರಾಹಕರ ದಿನಾಚರಣೆ ಏರ್ಪಡಿಸಲಾಗಿದೆ.

'ಗ್ರಾಹಕರಿಗೆ ಗುಣಮಟ್ಟದ ಹಾಗೂ ಜವಾಬ್ದಾರಿಯುತ ಕೃತಕ ಬುದ್ಧಿಮತ್ತೆ' ಎಂಬ ಘೋಷವಾಕ್ಯದಡಿ, ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಮತ್ತು ವಿವಿಧ ಇಲಾಖೆಗಳ ಸಹಯೋಗದಲ್ಲಿ ಈ ಕಾರ್ಯಕ್ರಮ ಆಯೋಜಿಸಲಾಗಿದ್ದು, ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ಉದ್ಘಾಟಿಸುವರು. ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಅಧ್ಯಕ್ಷ ಮಹಾಂತೇಶ್ ಈರಪ್ಪ ಶಿಗ್ಲಿ ಅಧ್ಯಕ್ಷತೆ ವಹಿಸುವರು.

ಜಿಲ್ಲಾ ಪಂಚಾಯತ್ ಸಿಇಓ ಸುರೇಶ್ ಬಿ.ಇಟ್ನಾಳ್, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರೆಣ್ಣವರ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸದಸ್ಯರಾದ ಸಿ.ಎಸ್. ತ್ಯಾಗರಾಜನ್, ಬಿ.ವಿ.ಗೀತಾ, ಯುಬಿಡಿಟಿ ಇಂಜಿನಿಯರಿಂಗ್ ಕಾಲೇಜಿನ ಪ್ರಾಂಶುಪಾಲ ಡಾ. ಡಿ.ಪಿ.ನಾಗರಾಜಪ್ಪ, ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ಡೀನ್ ಡಾ. ಮಂಜನಾಯ್ಕ್ ಎನ್, ಡಿಸಿಐಸಿ ಅನಿತಾ ಹೆಚ್ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಸಿ.ಎಸ್.ವಿಭಾಗದ ಪ್ರಾಧ್ಯಾಪಕ ಡಾ.ಮಹಮ್ಮದ್ ರಫೀ ಉಪನ್ಯಾಸ ನೀಡುವರು.

## ವಿಶ್ವಕರ್ಮ ಸಮಾಜದಿಂದ ಸಾಮೂಹಿಕ ಉಪನಯನ, ವಿವಾಹ ಮಹೋತ್ಸವ



ದಾವಣಗೆರೆ, ಮಾ.21- ವಿಶ್ವಕರ್ಮ ಸಮಾಜದಿಂದ ಏಪ್ರಿಲ್ 26ರಂದು ಕಾಳಿ ಕಾಂಬ ವಿಶ್ವಕರ್ಮ ಕಲ್ಯಾಣ ಮಂಟಪದಲ್ಲಿ 41ನೇ ವರ್ಷದ, ಉಪನಯನ ಮತ್ತು ಸಾಮೂಹಿಕ ವಿವಾಹ ಕಾರ್ಯಕ್ರಮ ಏರ್ಪಡಿಸಲಾಗಿದೆ. ವಿವಾಹ ಮತ್ತು ಉಪನಯನ ಆಗ ಬಯಸುವವರು ಮೊ: 9448127640, 9880342765 ಸಂಪರ್ಕಿಸಿ ಹೆಸರು ನೋಂದಾಯಿಸುವಂತೆ ಸಮಾಜದ ಅಧ್ಯಕ್ಷ ಬಸಾಪುರದ ಬಿ. ನಾಗೇಂದ್ರಚಾರ್ ತಿಳಿಸಿದ್ದಾರೆ.

## ಕರುಣಾ ಜೀವ ಕಲ್ಯಾಣ ಟ್ರಸ್ಟ್‌ನಿಂದ ಕಡು ಬಡವರಿಗೆ ಸೈಕಲ್ ವಿತರಣೆ

ದಾವಣಗೆರೆ, ಮಾ. 21- ಸಾರ್ವಜನಿಕರ ಆರೋಗ್ಯ ದೃಷ್ಟಿ, ವಾಯು ಮಾಲಿನ್ಯ ನಿಯಂತ್ರಣ ಮತ್ತು ಬಡವರ ಸಣ್ಣ ಆರ್ಥಿಕತೆ ಉಳಿತಾಯಕ್ಕಾಗಿ ಕಡು ಬಡವರಿಗೆ ಸೈಕಲ್ ಸವಾರಿ ಮಾಡಲು ಪ್ರೋತ್ಸಾಹಿಸಲಾಗುತ್ತಿದೆ. ಕೂಲಿ ಕಾರ್ಮಿಕರು, ಬಡ ವಿದ್ಯಾರ್ಥಿ, ವಿದ್ಯಾರ್ಥಿನಿಯರು, ಪತ್ರಿಕಾ ವಿತರಕರಿಗೆ ರೂ. 7000 ಬೆಲೆ ಬಾಳುವ ಹರ್‌ಕ್ಯುಲಸ್ ಸೈಕಲ್ ಅನ್ನು ಕೇವಲ ರೂ.4500 ಕ್ಕೆ ನೀಡಲಾಗುತ್ತಿದೆ ಎಂದು ಕರುಣಾ ಜೀವ ಕಲ್ಯಾಣ ಟ್ರಸ್ಟ್ ತಿಳಿಸಿದೆ.

ಬಡವರು ಇದರ ಸದುಪಯೋಗ ಪಡೆದುಕೊಳ್ಳಬಹುದು. ವಿವರಕ್ಕೆ ಶ್ರೀಮತಿ ಮಂಜುಳಾ ಬಸವಲಿಂಗಪ್ಪ (7483 809312) ಅವರನ್ನು ಸಂಪರ್ಕಿಸಬಹುದಾಗಿದೆ.

## ಮಲೇಬೆನ್ನೂರಿನಲ್ಲಿ ಇಂದು ಅರಿವು

ಪುರಸಭೆ ವತಿಯಿಂದ ಹರಿಹರ ತಾಲ್ಲೂಕು ಕಾನೂನು ಸೇವಾ ಸಮಿತಿ ಹಾಗೂ ತಾಲ್ಲೂಕು ಆಡಳಿತದ ಆಶ್ರಯದಲ್ಲಿ ಬೀದಿ ಬದಿ ವ್ಯಾಪಾರಿಗಳಿಗೆ ಮತ್ತು ಆಹಾರ ಉತ್ಪಾದನಾ ತಯಾರಿಕೆ ಹಾಗೂ ಮಾರಾಟಗಾರರಿಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಇಂದು ಬೆಳಿಗ್ಗೆ 10.30ಕ್ಕೆ ಬಸವೇಶ್ವರ ದೇವಸ್ಥಾನ ಸಭಾ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಉದ್ಘಾಟನೆ : ಶ್ರೀಮತಿ ಶಾರದಾದೇವಿ ಸಿ.ಹಟ್ಟಿ, ಅಧ್ಯಕ್ಷತೆ : ಶ್ರೀಮತಿ ದುರ್ಗಾಶ್ರೀ, ಅತಿಥಿಗಳು : ಮಹಾದೇವ ಕಾನಟ್ಟಿ, ಶ್ರೀಮತಿ ಜ್ಯೋತಿ ಅಶೋಕ್ ಪತ್ತಾರ್, ಶ್ರೀಮತಿ ವೀಣಾ ಕೋಳೇಕರ್, ಬಿ.ಆನಂದ್ ಕುಮಾರ್, ಗುರುಬಸವ ರಾಜ್, ಸಂಪನ್ಮೂಲ ವ್ಯಕ್ತಿಗಳು : ಡಾ. ಜೆ.ಎಸ್.ನಾಗರಾಜ್, ಸಿಪಿಐ ಸುರೇಶ್ ಸಗರಿ, ಟಿಹೆಚ್‌ಓ ಡಾ. ಅಬ್ದುಲ್ ಖಾದರ್, ನಿರ್ವಹಣೆ : ಎ.ಸುರೇಶ್, ಆರ್.ರವಿ.

## ನಾಗಮ್ಮ ಕೇಶವಮೂರ್ತಿ ನಿಧನಕ್ಕೆ ರೋಟರಿ ಕ್ಲಬ್ ಸಂತಾಪ

ದಾವಣಗೆರೆ, ಮಾ. 21- ಮಾಜಿ ಸಚಿವರಾದ ಶ್ರೀಮತಿ ನಾಗಮ್ಮ ಕೇಶವಮೂರ್ತಿಯವರ ನಿಧನಕ್ಕೆ ರೋಟರಿ ಬಾಲಭವನದಲ್ಲಿ ರೋಟರಿ ಕ್ಲಬ್ ಅಧ್ಯಕ್ಷ ಮುರುಘರಾಜೇಂದ್ರ ಜೆ. ಚಿಗಟೇರಿ ಸಮ್ಮುಖದಲ್ಲಿ ನನ್ನೆ ಶ್ರದ್ಧಾಂಜಲಿ ಸಭೆ ನಡೆಸಲಾಯಿತು. ನಾಗಮ್ಮ ಕೇಶವಮೂರ್ತಿಯವರು ದಾವಣಗೆರೆ ಇನ್ನರ್‌ವ್ಹೀಲ್ ಕ್ಲಬ್‌ನ ಸಂಸ್ಥಾಪಕಿ ಅಧ್ಯಕ್ಷರಾಗಿದ್ದರು. ಮೂರು ದಶಕಗಳಿಗೂ ಹೆಚ್ಚು ಕಾಲ ಇನ್ನರ್‌ವ್ಹೀಲ್ ಸಂಸ್ಥೆಯಲ್ಲಿ ತೊಡಗಿಸಿಕೊಂಡು ಎಲ್ಲರಿಗೂ ಮಾರ್ಗದರ್ಶಕರಾಗಿದ್ದರು. ರೋಟರಿ ಸಂಸ್ಥೆಯ ಪಾಲ ಹ್ಯಾರೀಸ್ ಪೆಲೋ ಮುತ್ತ ಅಂತರರಾಷ್ಟ್ರೀಯ ಇನ್ನರ್ ವ್ಹೀಲ್ ಪ್ರಶಸ್ತಿಯಾದ ಮಾರ್ಗರೆಟ್ ಗೋಲ್ಡಿಂಗ್ ಪಾರಿತೋಷಕ ಲಭಿಸಿದ್ದು, ಅವರ ಅಮೂಲ್ಯ ಸೇವೆಯನ್ನು ಗುರುತಿಸಿ ಈ ಪ್ರಶಸ್ತಿ ನೀಡಲಾಗಿತ್ತು. ಸಂತಾಪ ಸೂಚಕ ಸಭೆಯಲ್ಲಿ ಎಸ್.ಕೆ. ವೀರಣ್ಣ, ಬೆಳಗಾವಿ ಬಸವರಾಜ್, ಎ.ವಿ. ರಮೇಶ್, ಎನ್.ಕೆ. ಕೊಟ್ರೇಶ್, ಎಂ. ಎಸ್. ರಾಮಚಂದ್ರಪ್ಪ ಭಾಗವಹಿಸಿದ್ದರು.

# ದೇಶದ ಸುರಕ್ಷತೆಗೆ ಮತ್ತೊಮ್ಮೆ ನರೇಂದ್ರ ಮೋದಿ ಆಯ್ಕೆ ಸೂಕ್ತ

## ಹರಿಹರದ ಕಾರ್ಯಕ್ರಮದಲ್ಲಿ ಬಿಜೆಪಿ ಬೆಂಬಲಿಸಿದ ಮಾಜಿ ಶಾಸಕ ಹೆಚ್.ಎಸ್.ಶಿವಶಂಕರ್



ಹರಿಹರ, ಮಾ. 21- ದೇಶದ ಸುರಕ್ಷತೆ ಮತ್ತು ಜನತೆಯ ಸಂರಕ್ಷಣೆಯ ಹಿತ ದೃಷ್ಟಿಯಿಂದ ಪ್ರಧಾನಿ ನರೇಂದ್ರ ಮೋದಿ ಅವರನ್ನು ಮತ್ತೊಮ್ಮೆ ಈ ದೇಶದ ಪ್ರಧಾನಿಯನ್ನಾಗಿ ಆಯ್ಕೆ ಮಾಡುವುದು ಸೂಕ್ತವಾಗಿದೆ ಎಂದು ಮಾಜಿ ಶಾಸಕ ಹೆಚ್.ಎಸ್. ಶಿವಶಂಕರ್ ಹೇಳಿದರು.

ನಗರದ ಶ್ರೀ ಹರಿಹರೇಶ್ವರ ಸ್ವಾಮಿ ಮತ್ತು ಲಕ್ಷ್ಮಿ ದೇವಸ್ಥಾನದಲ್ಲಿ ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಬೇಗನೆ ಗುಣಮುಖರಾಗುವಂತೆ ದೇವರಿಗೆ ವಿಶೇಷ ಪೂಜೆ ಸಲ್ಲಿಸಿ ಹಾಗೂ ಜೆಡಿಎಸ್ ಕಚೇರಿಯಲ್ಲಿ ವಿಘ್ನೇಶ್ವರ ಪೂಜೆಯ ನಂತರ ಪತ್ರಕರ್ತರೊಂದಿಗೆ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ನೆರೆ ರಾಷ್ಟ್ರಗಳಾದ ಪಾಕಿಸ್ತಾನ ಸೇರಿದಂತೆ ಹಲವು ದೇಶಗಳು ಭಾರತದ ಮೇಲೆ ದಬ್ಬಾಳಿಕೆ ಮಾಡುವುದಕ್ಕೆ ಮುಂದಾದ ಸಮಯ ದಲ್ಲಿ ಪ್ರಧಾನಿ ನರೇಂದ್ರ ಮೋದಿಯವರು ತೆಗೆದುಕೊಂಡ ನಿರ್ಧಾರಗಳು ದೇಶದ ಜನರು ನೆಮ್ಮದಿಯಿಂದ ಜೀವನ ಮಾಡುವಂತೆ ಮಾಡಿದೆ. ಅಂತಹ ದೂರ ದೃಷ್ಟಿಯ ನಾಯಕತ್ವದ ಅವಶ್ಯಕತೆ ದೇಶಕ್ಕೆ ಇದ್ದು ನರೇಂದ್ರ ಮೋದಿ ಮತ್ತೊಂದು ಅವಧಿಗೆ ಪ್ರಧಾನಮಂತ್ರಿಯಾಗಿ ಆಯ್ಕೆಯಾಗಬೇಕಿದೆ. ಈ ಹಿನ್ನೆಲೆಯಲ್ಲಿ ಅವರನ್ನು ಈ ಬಾರಿ ಗೆಲ್ಲಿಸುವುದಕ್ಕೆ ಬೆಂಬಲ ನೀಡುವುದಾಗಿ ಜೊತೆಗೆ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ, ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಅವರು ಬಿಜೆಪಿ ಜೊತೆಯಲ್ಲಿ ಹೊಂದಾಣಿಕೆ ಮಾಡಿಕೊಂಡು ಜೆಡಿಎಸ್ ಬೆಂಬಲ ನೀಡುತ್ತದೆ ಎಂದು ಭರವಸೆ ನೀಡಿದ್ದರಿಂದ ನಾನು ಬಿಜೆಪಿಗೆ ಬೆಂಬಲ ನೀಡುವುದಾಗಿ ಹೇಳಿದರು.

ದಾವಣಗೆರೆ ಲೋಕಸಭಾ ಚುನಾವಣೆ ಬಿಜೆಪಿ ಅಭ್ಯರ್ಥಿಗಳ ಆಯ್ಕೆಯ ವಿಚಾರದಲ್ಲಿ ಗೊಂದಲದ ವಾತಾವರಣ ಸೃಷ್ಟಿಯಾಗಿದ್ದರಿಂದ ನಮ್ಮ ಪಕ್ಷದ ಹಲವಾರು ನಾಯಕರು ಮತ್ತು ಮುಖಂಡರು ನಮಗೆ ಅಭ್ಯರ್ಥಿಗಳು ಆಗುವಂತೆ ಒತ್ತಡ ಹಾಕಿದ್ದರಿಂದ, ನಾನು ಆಕಾಂಕ್ಷೆ ಹೊಂದಿದ್ದೆ, ಆದರೆ ನಿನ್ನೆ ನಮ್ಮ ರಾಜ್ಯದ ವರಿಷ್ಠರಾದ ಹೆಚ್.ಡಿ. ಕುಮಾರಸ್ವಾಮಿ ಯವರು ಬಿಜೆಪಿ ಬೆಂಬಲಿಸುವಂತೆ ಆದೇಶವನ್ನು ನೀಡಿದ್ದರಿಂದ, ನಾವು ಬರುವ 25 ರ ನಂತರ ಬಿಜೆಪಿ ಗೆಲುವಿಗಾಗಿ ಶ್ರಮಿಸುವ ನಿರ್ಧಾರ ಮಾಡಿರುವುದಾಗಿ ಅವರು ಹೇಳಿದರು.

ಈ ಸಂದರ್ಭದಲ್ಲಿ ನಗರಸಭೆ ಸದಸ್ಯರಾದ ಎ. ವಾಮನಮೂರ್ತಿ, ಆರ್.ಸಿ. ಜಾವೇದ್, ಪಿ. ಎನ್. ವಿರೂಪಾಕ್ಷಪ್ಪ, ಬಿ. ಅಲ್ತಾಫ್, ನಗರಸಭೆ ಮಾಜಿ ಅಧ್ಯಕ್ಷ ಸುರೇಶ್, ಮುಖಂಡರಾದ ಜಿ. ನಂಜಪ್ಪ, ಅಡಿಕಿ ಕುಮಾರ್, ನಾರಾಯಣ ನಿಡಗಲ್, ನಾಗರಾಜ್ ಅಮರಾವತಿ, ಚಂದ್ರಪ್ಪ, ಲಕ್ಷ್ಮಿ ಆಚಾರ್, ಲತಾ ಕೊಟ್ರೇಶ್, ಮಮತಾ, ಸ್ಮಿತಾ, ರಾಮಮೂರ್ತಿ, ಮೋಹನ್ ಆಚಾರ್, ಮೇಸಾಕ್, ನಾಗೇಂದ್ರಪ್ಪ, ಶ್ರೀನಿವಾಸ್ ಮೆಹರ್ವಾಡೆ, ಲೋಹಿತ್, ಧನ್ಯಕುಮಾರ್ ಬೆಳವನೂರು ಇತರರು ಹಾಜರಿದ್ದರು.

## ಕಾರ್ತಿ ಚಿದಂಬರಂ ವಿರುದ್ಧ 50 ಲಕ್ಷ ರೂ. ಲಂಚ ಆರೋಪ

ನವದೆಹಲಿ, ಮಾ. 21 – ಚೀನಾ ಕಂಪನಿಯೊಂದರ ಸಿಬ್ಬಂದಿಗೆ ನೀಡಲಾದ ವೀಸಾಗಳನ್ನು ಮರು ಬಳಕೆ ಮಾಡಲು ಅನುಮತಿ ನೀಡುವ ಸಲುವಾಗಿ ಕಾಂಗ್ರೆಸ್ ಸಂಸದ ಕಾರ್ತಿ ಚಿದಂಬರಂ 50 ಲಕ್ಷ ರೂ. ಲಂಚ ಪಡೆದಿದ್ದರು ಎಂದು ಜಾರಿ ನಿರ್ದೇಶನಾಲಯ ಆರೋಪಿಸಿದೆ.

ಕಾರ್ತಿ ನಿಯಂತ್ರಣದಲ್ಲಿರುವ ಕಂಪನಿಗೆ ಈ ಹಣವನ್ನು ವಾಮ ಮಾರ್ಗದಿಂದ ಜಮಾ ಮಾಡಲಾಗಿತ್ತು ಎಂದು ಜಾರಿ ನಿರ್ದೇಶನಾಲಯ ದಾಖಲಿಸಿರುವ ಆರೋಪ ಪಟ್ಟಿಯಲ್ಲಿ ತಿಳಿಸಲಾಗಿದೆ.

## ನಗರದಲ್ಲಿ ಇಂದು ವಿಶ್ವ ಜಲ ದಿನಾಚರಣೆ

ಸರ್ವಮಂಗಳಮ್ಮ ಮಾಗನೂರು ಬಸಪ್ಪ ಕಾಲೇಜಿನಲ್ಲಿ ಇಂದು ಮಧ್ಯಾಹ್ನ 2.30ಕ್ಕೆ ವಿಶ್ವ ಜಲ ದಿನಾಚರಣೆ ಏರ್ಪಡಿಸಲಾಗಿದೆ.

ಸಹ್ಯಾದ್ರಿ ತಾಂತ್ರಿಕ ಮಹಾವಿದ್ಯಾಲಯದ ಡಾ. ಎಸ್. ಮಂಜಪ್ಪ ಉದ್ಘಾಟಿಸಲಿದ್ದು, ಟ್ರಸ್ಟಿನ ಗೌರವ ಕಾರ್ಯದರ್ಶಿ ಎಂ.ಬಿ. ಸಂಗಮೇಶ್ವರ ಗೌಡ್ರು ಅಧ್ಯಕ್ಷತೆ ವಹಿಸವರರು ಮತ್ತು ಕೆ.ಸಿದ್ದೇಶ್ 'ನೀರು ಜೀವನ ಸಂಜೀವಿನಿ' ವಿಷಯ ಕುರಿತು ಉಪ ನ್ಯಾಸ ನೀಡುವರು. ಡಾ.ಜೆ.ಬಿ. ರಾಜ್, ಡಾ. ಬಿ.ಇ. ರಂಗ ಸ್ವಾಮಿ, ಪಿ.ಎಂ. ಪ್ರೇಮಾ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್, ಜಿಲ್ಲಾ ಬಾಲ ಭವನ ಸಮಿತಿಯ ಸಂಯುಕ್ತಾಶ್ರದಲ್ಲಿ ಕಾರ್ಯಕ್ರಮ ನಡೆಯಲಿದೆ.

## ದ್ವಿತೀಯ ಪಿ.ಯು.ಸಿ. ಪರೀಕ್ಷೆ; 1028 ವಿದ್ಯಾರ್ಥಿಗಳು ಹಾಜರು

ದಾವಣಗೆರೆ,ಮಾ.21- ದ್ವಿತೀಯ ಪಿ.ಯು.ಸಿ. ವಾರ್ಷಿಕ ಪರೀಕ್ಷೆ ನಡೆಯುತ್ತಿದ್ದು, ಇಂದು ನಡೆದ ಉರ್ದು, ಸಂಸ್ಕೃತ ಪರೀಕ್ಷೆಗೆ 1028 ವಿದ್ಯಾರ್ಥಿಗಳು ಹಾಜರಾಗಿದ್ದರು ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಕರಿಸಿದ್ದಪ್ಪ ತಿಳಿಸಿದ್ದಾರೆ. ಉರ್ದು ವಿಷಯವನ್ನು 572 ವಿದ್ಯಾರ್ಥಿಗಳು ತೆಗೆದುಕೊಂಡಿದ್ದು, ಅದರಲ್ಲಿ 26 ವಿದ್ಯಾರ್ಥಿಗಳು ಗೈರಾಗಿದ್ದರು. ಸಂಸ್ಕೃತ ವಿಷಯವನ್ನು 484 ವಿದ್ಯಾರ್ಥಿಗಳು ತೆಗೆದುಕೊಂಡಿದ್ದು ಇಬ್ಬರು ವಿದ್ಯಾರ್ಥಿಗಳು ಗೈರು ಹಾಜರಾಗಿದ್ದರು ಎಂದು ಅವರು ತಿಳಿಸಿದ್ದಾರೆ.

# ಸಂಕೀರ್ಣವಾಗುತ್ತಿರುವ ಸಂಬಂಧಗಳು : ಶಾಸಕರ ವಿಷಾದ



**ಹೊನ್ನಾಳಿ ಹಿರೇಕಲ್ಮಠದ ಸಾಮೂಹಿಕ ವಿವಾಹ ಮಹೋತ್ಸವದಲ್ಲಿ ಡಿ.ಜಿ. ಶಾಂತನಗೌಡ**

ಹೊನ್ನಾಳಿ, ಮಾ. 21 - ಸಾವಿರಾರು ವರ್ಷಗಳ ಇತಿಹಾಸ ಹೊಂದಿರುವ ಹಾಗೂ ಭಕ್ತರಿಗೆ ಅನ್ನ, ಅಕ್ಷರ ಹಾಗೂ ನ್ಯಾಯದಾನಗಳಂತಹ ತ್ರಿವಿಧ ದಾಸೋಹ ನೀಡುತ್ತಾ ಬಂದಿರುವ ಹಿರೇಕಲ್ಮಠದ ಲಿಂಗೈಕ ಗುರುಗಳ ಪುಣ್ಯಾರಾಧನೆ ಪ್ರಯುಕ್ತ ನಡೆಯುವ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಸತಿ ಪತಿಗಳಾಗುತ್ತಿರುವವರು ನಿಜಕ್ಕೂ ಪುಣ್ಯವಂತರು ಎಂದು ಶಾಸಕ ಡಿ.ಜಿ. ಶಾಂತನಗೌಡ ಹೇಳಿದರು.

ಇಲ್ಲಿನ ಹಿರೇಕಲ್ಮಠದಲ್ಲಿ ಗುರುವಾರ ಆಯೋಜಿಸಲಾಗಿದ್ದ ಲಿಂಗೈಕ್ಯ ಮತ್ಯುಂಜಯ ಶಿವಾಚಾರ್ಯ ಸ್ವಾಮೀಜಿಯವರ 54ನೇ ವಾರ್ಷಿಕ ಪುಣ್ಯಾರಾಧನೆ ಹಾಗೂ ಲಿಂಗೈಕ್ಯ ಒಡೆಯರ್ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿಯವರ 9ನೇ ವಾರ್ಷಿಕ ಸಂಸ್ಮರಣೆ ಕಾರ್ಯಕ್ರಮ ಹಾಗೂ ಸಾಮೂಹಿಕ ವಿವಾಹ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕುಟುಂಬ ಎಂದರೆ ಕೇವಲ ಗಂಡ-ಹೆಂಡತಿ-ಮಕ್ಕಳು ಮಾತ್ರವಲ್ಲ ಬದಲಿಗೆ ಅಪ್ಪ, ಅಮ್ಮ ಅಣ್ಣ, ತಮ್ಮ ಅತ್ತಿಗೆ, ಮೈದುನ, ಚಿಕ್ಕಪ್ಪ, ಚಿಕ್ಕಮ್ಮ ಹೀಗೆ ಹತ್ತು ಹಲವು ಸಂಬಂಧಗಳ ವ್ಯಕ್ತಿಗಳು ಒಂದು ಸೂರಿನಡಿ ಬದುಕು ಸಾಗಿಸುವುದೇ ನಿಜವಾದ ಕುಟುಂಬ ಎನಿಸಿಕೊಳ್ಳುತ್ತದೆ. ಅದರೆ ಪ್ರಸ್ತುತ ದಿನಗಳಲ್ಲಿ ಮೈಕ್ರೋ ಕುಟುಂಬಗಳೇ ಅಂದರೆ ಕೇವಲ ಗಂಡ-ಹೆಂಡತಿ ಅವರ ಮಕ್ಕಳು ಇಷ್ಟೇ ಕುಟುಂಬ ಎನ್ನುವಂತಾಗಿದೆ ಎಂದು ಹೇಳಿದರು

ಸಂಬಂಧಗಳು ಸಂಪೂರ್ಣ ಸಂಕೀರ್ಣವಾಗುತ್ತಿದ್ದು, ವೃದ್ಧಾಶ್ರಮಗಳಲ್ಲಿ ನೋಡಿದರೆ ಇಲ್ಲಿ ಯಾವುದೇ ಒಬ್ಬ ಬಿಪಿಲ್ ಕಾರ್ಡ್ ಕುಟುಂಬದಿಂದ ಬಂದ ಹಿರಿಯರು ನೋಡ ಸಿಗುವುದಿಲ್ಲ, ಬದಲಿಗೆ ದೊಡ್ಡ ದೊಡ್ಡ ಅಧಿಕಾರಿಗಳ, ವಿದ್ಯಾಂತರ ಹಾಗೂ ಶ್ರೀಮಂತರ ಕುಟುಂಬಗಳಿಂದ ಬಂದ ಹಿರಿಯರಷ್ಟೇ ವೃದ್ಧಾಶ್ರಮಗಳಲ್ಲಿ ಕಾಣಲು ಸಿಗುತ್ತಾರೆ ಇದು ಇಂದಿನ ಸಾಮಾಜಿಕ ವ್ಯವಸ್ಥೆ ಎಂದರು.

ಮಾಜಿ ಶಾಸಕ ಎಂ.ಪಿ. ರೇಣುಕಾಚಾರ್ಯ ಮಾತನಾಡಿ, ಸುಮಾರು 123 ವರ್ಷಗಳ ಇತಿಹಾಸದಲ್ಲಿ ಬಾರದಂತಹ ಬರಗಾಲ ಈ ಬಾರಿ ಬಂದಿದೆ.

ಎಲ್ಲಾ ಹರ-ಗುರು-ಚರ ಮೂರ್ತಿಗಳ ಆಶೀರ್ವಾದದಿಂದ ಮುಂದಿನ ಬಾರಿ ಉತ್ತಮ ಮಳೆ-ಬೆಳೆಯಾಗಿ ರೈತರ ಮೊಗದಲ್ಲಿ ಮಂದಹಾಸ ಮೂಡುವಂತಾಗಲಿ ಎಂದು ಆಶಯ ವ್ಯಕ್ತಪಡಿಸಿದರು.

ಸಂಸದ ಜಿ.ಎಂ.ಸಿದ್ದೇಶ್ವರ ಅವರು ನೂತನ ವಧುವರರಿಗೆ ಶುಭ ಕೋರಿ, ಪುಣ್ಯ ಕ್ಷೇತ್ರದಲ್ಲಿ ಸತಿಪತಿಗಳಾಗಿದ್ದೀರಿ ಎಲ್ಲಾ ಗುರುಗಳ, ಹಿರಿಯ ಆಶೀರ್ವಾದದಿಂದ ಭವಿಷ್ಯದಲ್ಲಿ ಉತ್ತಮ ಜೀವನ ನಡೆಸಿ ಎಂದು ಹಾರೈಸಿದರು.

ಶ್ರೀಮಠದ ವಿದ್ಯಾಸಂಸ್ಥೆಯಲ್ಲಿ ಮುಖ್ಯ ಶಿಕ್ಷಕರಾಗಿ ಸೇವೆ ಸಲ್ಲಿಸಿ, ನಿವೃತ್ತಿ ಹೊಂದಿರುವ ಎಚ್.ಆರ್. ಬಸವರಾಪ್ಪ ಅವರಿಗೆ ಚಂದ್ರಶೇಖರ ಶಿವಾಚಾರ್ಯ ಶ್ರೀ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಮುಷ್ಟೂರು ಮಠದ ರುದ್ರಮುನಿ ಶಿವಾಚಾರ್ಯ ಸ್ವಾಮಿಜಿ ಅಧ್ಯಕ್ಷತೆ ವಹಿಸಿ ಮಾತನಾಡಿ, ಮನುಷ್ಯನಲ್ಲಿ ಧಾರ್ಮಿಕ ನಂಬಿಕೆಗಳು ಕಡಿಯಾಗುತ್ತಿದ್ದು, ಇದು ಎಲ್ಲಾ ರೀತಿಯ ದುಃಖಗಳಿಗೆ ಕಾರಣವಾಗಿದೆ ಎಂದು ಹೇಳಿದರು.

ಹಿರೇಕಲ್ಮಠದ ಡಾ. ಒಡೆಯರ್ ಚನ್ನಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು.

ಕಡೆನಂದಿಹಳ್ಳಿ ರೇವಣಸಿದ್ದ ಶಿವಾಚಾರ್ಯ ಸ್ವಾಮಿಜಿ, ರಾಂಪುರದ ಶಿವಕುಮಾರ ಹಾಲಸ್ವಾಮೀಜಿ, ಗೋವಿನಕೋವಿ ಮಠದ ವಿಶ್ವಾರಾಧ್ಯ ಮಹಾಲಿಂಗ ಹಾಲಸ್ವಾಮಿಜಿ ಸೇರಿದಂತೆ ಇತರರು ಕಾರ್ಯಕ್ರಮದ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಮುಖಂಡರಾದ ಎಚ್.ಎ. ಉಮಾಪತಿ, ಮುಂತಾದವರು ಮಾತನಾಡಿದರು. ಎಚ್.ಎ. ಗದ್ದಿಗೇಶ್, ದೀಪುಕುಮಾರ ಸೇರಿದಂತೆ ಇತರರು ಭಾಗವಹಿಸಿದ್ದರು. ಚನ್ನಯ್ಯ ಬೆನ್ನೂರುಮಠ ಸ್ವಾಗತಿಸಿದರು. ವಿಜಯಾನಂದ ಸ್ವಾಮಿ ನಿರೂಪಿಸಿದರು.

## ನಗರದ ನ್ಯಾಯಾಲಯದ ಆವರಣದಲ್ಲಿ ಇಂದು ಅಂತರರಾಷ್ಟ್ರೀಯ ಜಲ ದಿನಾಚರಣೆ

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಮಾಲಿನ್ಯ ನಿಯಂತ್ರಣ ಮಂಡಳಿ ಮತ್ತು ಜಿಲ್ಲಾ ವಕೀಲರ ಸಂಘ ಮತ್ತು ಎಸ್.ಬಿ.ಐ ಇವರ ಸಂಯುಕ್ತಾಶ್ರಯದಲ್ಲಿ ಇಂದು ಬೆಳಗ್ಗೆ 10.30 ಕ್ಕೆ ಜಿಲ್ಲಾ ನ್ಯಾಯಾಲಯ ಆವರಣದಲ್ಲಿ ಅಂತರರಾಷ್ಟ್ರೀಯ ಜಲ ದಿನಾಚರಣೆ ಮತ್ತು ಶುದ್ದ ಕುಡಿಯುವ ನೀರಿನ ಘಟಕ ಸ್ಥಾಪನಾ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ಕಾರ್ಯಕ್ರಮ ಉದ್ಘಾಟಿಸುವರು. ವಕೀಲರ ಸಂಘದ ಅಧ್ಯಕ್ಷರಾದ ಎಲ್.ಹೆಚ್.ಅರುಣ್‌ಕುಮಾರ್ ಅಧ್ಯಕ್ಷತೆ ವಹಿಸುವರು. ನ್ಯಾಯಾಧೀಶರಾದ ಜೆ.ವಿ.ವಿಜಯಾನಂದ, ದಶರಥ, ಪ್ರವೀಣ ಕುಮಾರ್ ಆರ್.ಎನ್, ಶಿವಪ್ಪ ಗಂಗಪ್ಪ ಸಲಗರೆ ಮತ್ತು ಮಹಾವೀರ ಮ.ಕರೆಣ್ಣವರ, ಮಾಲಿನ್ಯ ನಿಯಂತ್ರಣ ಮಂಡಳಿ ಪ್ರಾದೇಶಿಕ ಅಧಿಕಾರಿ ಡಾ. ಹೆಚ್. ಲಕ್ಷ್ಮಿಕಾಂತ, ಎಸ್.ಬಿ.ಐ ಪ್ರಾದೇಶಿಕ ವ್ಯವಸ್ಥಾಪಕ ಅನಿಲ್ ಬಿಹಾರಿ, ಜಿಲ್ಲಾ ವಕೀಲರ ಸಂಘದ ಉಪಾಧ್ಯಕ್ಷ ಜಿ.ಕೆ.ಬಸವರಾಜು ಗೋಪನಾಳ್, ಕಾರ್ಯದರ್ಶಿ ಬಸವರಾಜ್ ಎಸ್, ಸಹ ಕಾರ್ಯದರ್ಶಿ ಎ.ಎಸ್. ಮಂಜುನಾಥ್ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

## ಲೋಕಿಕೆರೆ ಚೆಕ್ ಪೋಸ್ಟ್‌ನಲ್ಲಿ ನಗದು ವಶ

ದಾವಣಗೆರೆ, ಮಾ. 21 - ನಗರದ ಲೋಕಿಕೆರೆ ಚೆಕ್ ಪೋಸ್ಟ್ ನಲ್ಲಿ ರೆಹಮತ್ ವುಲ್ಲಾ ಎಂಬಾತ ನಲ್ಲೂರಿನಿಂದ ದಾವಣಗೆರೆ ಕಡೆಗೆ ಕಾರಿನಲ್ಲಿ ಹೋಗುತ್ತಿರುವಾಗ ಚೆಕ್ ಪೋಸ್ಟ್‌ನಲ್ಲಿ ನಡೆಸಿದ ತಪಾಸಣೆ ವೇಳೆ ರೂ. 1,99,028 ನಗದು ವಶಪಡಿಸಿ ಕೊಳ್ಳಲಾಗಿದೆ.

## ಚೆಕ್ ಪೋಸ್ಟ್ ಪರಿಶೀಲಿಸಿದ ಜಿಲ್ಲಾಧಿಕಾರಿ



ಜಗಳೂರು, ಮಾ.21- ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ. ಎಂ.ವಿ. ವೆಂಕಟೇಶ್ ಅವರು ಜಗಳೂರು ತಾಲ್ಲೂಕಿನ ಕಾನನಕಟ್ಟೆ, ಮುಸ್ಟೂರು, ಬಿದರಿಕೆರೆ ಚೆಕ್ ಪೋಸ್ಟ್‌ಗಳನ್ನು ಇಂದು ಪರಿಶೀಲಿಸಿದರು. ಎಲ್ಲಾ ವಾಹನಗಳನ್ನು ತಪಾಸಣೆ ಮಾಡಿ ಬಿಡಬೇಕು ತಪಾಸಣೆ ಮಾಡದೇ ವಾಹನ ಹೋಗಲು ಬಿಟ್ಟಲ್ಲಿ ಹಾಗೂ ಚುನಾವಣಾ ನೀತಿ ಸಂಹಿತೆ ಉಲ್ಲಂಘನೆ ವರದಿಯಾದಲ್ಲಿ ಸಂಬಂಧಿಸಿದ ಚೆಕ್ ಪೋಸ್ಟ್ ಸಿಬ್ಬಂದಿಗಳ ಮೇಲೆ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಜಿಲ್ಲಾಧಿಕಾರಿಗಳು ಎಚ್ಚರಿಕೆ ನೀಡಿದರು. ಈ ವೇಳೆ ಸಹಾಯಕ ಚುನಾವಣಾಧಾಕಾರಿ ಸಿದ್ದರಾಮ್ ಮರಿಹಾಳ್ ಉಪಸ್ಥಿತರಿದ್ದರು.

YOGI RAM SHASHI EDUCATIONAL TRUST (R)
LALITHA INTERNATIONAL PUBLIC SCHOOL & LALITHA PRE UNIVERSITY COLLEGE
REGISTRATION OPENS FOR KG to PUC
SCIENCE (PCMB & PCMCs) | COMMERCE CA FOUNDATION: EBAS | CBSE SCHOOL PRE-PRIMARY to GRADE X
CET-NEET CRASH COURSE-2024
Starts from 19th MARCH 2024


99806 29965 / 70220 04109 / 70220 04042
LOKIKERE MAIN ROAD, DAVANAGERE - 577 005.
Email : lalitha.puc2018@gmail.com, Website : www.lalithainternational.in

# ಹೆಚ್ಡಿಕೆ ಹೃದಯ ಶಸ್ತ್ರಚಿಕಿತ್ಸೆ ಯಶಸ್ವಿ



ಬೆಂಗಳೂರು, ಮಾ. 21 - ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಅವರಿಗೆ ಚೆನ್ನೈನ ಅಪೋಲೋ ಆಸ್ಪತ್ರೆಯಲ್ಲಿ ಇಂದು ನಡೆದ ಹೃದಯ ಶಸ್ತ್ರ ಚಿಕಿತ್ಸೆ ಯಶಸ್ವಿಯಾಗಿ ಆರೋಗ್ಯದಿಂದ ಇದ್ದಾರೆ.

ಹಂಗೇರಿಯಿಂದ ಬಂದಿದ್ದ ತಜ್ಞ ವೈದ್ಯರುಗಳು ಹೃದಯ ತಜ್ಞ ಡಾ.ಸಿ.ಎನ್. ಮಂಜುನಾಥ್ ಅವರ ಮಾರ್ಗದರ್ಶನದಲ್ಲಿ ಸತತ ನಾಲ್ಕು ಗಂಟೆಗಳ ಕಾಲ ಶಸ್ತ್ರ ಚಿಕಿತ್ಸೆ ನಡೆಸಿದರು.

ಕುಮಾರಸ್ವಾಮಿ ಅವರಿಗೆ ಇದು ಮೂರನೇ ಹೃದಯ ಶಸ್ತ್ರ ಚಿಕಿತ್ಸೆಯಾಗಿದೆ. ಅವರನ್ನು ತೀವ್ರ ನಿಗಾ ಘಟಕದಲ್ಲಿ ಇರಿಸಲಾಗಿದೆ. ತಜ್ಞ ವೈದ್ಯರ ತಂಡ ಅವರ ಆರೋಗ್ಯದ ಮೇಲ್ವಿಚಾರಣೆ ನೋಡಿಕೊಳ್ಳುತ್ತಿದ್ದು, ತೀವ್ರ ನಿಗಾ ಘಟಕದಿಂದ ನಾಡಿದ್ದು, ಶನಿವಾರ ವಾರ್ಡ್‌ಗೆ ಸ್ಥಳಾಂತರ ಮಾಡಲಾಗುತ್ತದೆ.

ಆಸ್ಪತ್ರೆಯಲ್ಲಿ ಕುಮಾರಸ್ವಾಮಿ ಅವರ ಕುಟುಂಬ ವರ್ಗದವರೂ ಇದ್ದಾರೆ.

ಮಾರ್ಚ್ 24ರಂದು ಆಸ್ಪತ್ರೆಯಿಂದ ಬಿಡುಗಡೆಯಾಗಿ ಅಂದೇ ಬೆಂಗಳೂರಿಗೆ ಕುಮಾರಸ್ವಾಮಿ ಹಿಂತಿರುಗಲಿದ್ದಾರೆ.

ಕುಮಾರಸ್ವಾಮಿ ಅವರ ಯಶಸ್ವಿ ಶಸ್ತ್ರ ಚಿಕಿತ್ಸೆ ನಂತರ ಅವರ ಆರೋಗ್ಯ ಸುಧಾರಿಸುತ್ತಿದ್ದಂತೆ, ಇತ್ತ ಮಾಜಿ ಸಂಸದ ಸಿ.ಎಸ್. ಪುಟ್ಟರಾಜು ಅವರು ಹೇಳಿಕೆಯೊಂದನ್ನು ನೀಡಿ, ಕುಮಾರಸ್ವಾಮಿ ಮಂಡ್ಯದಿಂದಲೇ ಲೋಕಸಭೆಗೆ ಸ್ಪರ್ಧಿಸಲಿದ್ದಾರೆ ಎಂದು ತಿಳಿಸಿದ್ದಾರೆ.

ಕುಮಾರಣ್ಣನೇ ಬಿಜೆಪಿ-ಜೆಡಿಎಸ್ ಮೈತ್ರಿ ಅಭ್ಯರ್ಥಿ, ಇದರಲ್ಲಿ ಯಾವುದೇ ಅನುಮಾನ ಬೇಡ, ಅವರನ್ನು ಭಾರೀ ಅಂತರದಿಂದ ಗೆಲ್ಲಿಸಿ ಲೋಕಸಭೆಗೆ ಕಳುಹಿಸಿಕೊಡುತ್ತೇವೆ ಎಂದಿದ್ದಾರೆ.

# ಮಲೇಬೆನ್ನೂರು ತಲುಪಿದ ಭದ್ರಾ ನೀರು



ಮಲೇಬೆನ್ನೂರು, ಮಾ.21- ಭದ್ರಾ ಜಲಾಶಯದಿಂದ ಮಾ.19ರ ರಾತ್ರಿಯಿಂದ ಬಲದಂಡೆ ನಾಲೆಗೆ ನೀರು ಬಿಡುಗಡೆಯಾಗಿದ್ದು, ಗುರುವಾರ ಸಂಜೆ ವೇಳೆಗೆ ಮಲೇಬೆನ್ನೂರು ಭಾಗದ ಭದ್ರಾ ಕಾಲುವೆಗಳಲ್ಲಿ ನೀರು ಹರಿದು ಬಂದಿತು.

ನೀರು ಬರುವುದನ್ನೇ ಕಾಯುತ್ತಿದ್ದ ತೋಟಗಳ ರೈತರು ನಿಟ್ಟುಸಿರು ಬಿಟ್ಟರು. ಉಪಕಾಲುವೆಗಳಿಗೆ ಆಂತರಿಕ ಸರದಿ ಪ್ರಕಾರ ನೀರು ಹರಿಸುವ ಸಾಧ್ಯತೆ ಇದ್ದು, ಮುಂದಿನ 4-5 ದಿನಗಳಲ್ಲಿ ಎಲ್ಲಾ ಕಾಲುವೆಗಳಿಗೆ ನೀರು ಬರುವಂತೆ ಇಂಜಿನಿಯರ್‌ಗಳು ನೀರಿನ ನಿರ್ವಹಣೆ ಮಾಡಬೇಕೆಂದು ರೈತರು ಒತ್ತಾಯಿಸಿದ್ದಾರೆ. ಏ.3 ರವರೆಗೆ ಅಂದರೆ 14 ದಿನ ನಾಲೆಗಳಲ್ಲಿ ನೀರು ಹರಿಯಲಿದೆ.

**ಅನುಕೂಲ :** ಮಲೇಬೆನ್ನೂರಿನಲ್ಲಿ ಗ್ರಾಮದೇವತೆ ಹಬ್ಬ ಮುಗಿಯುವ ವೇಳೆಗೆ ನಾಲೆಯಲ್ಲಿ ನೀರು ಬಂದಿರುವುದರಿಂದ ಬಟ್ಟೆ ಹಾಗೂ ಪಾತ್ರೆ-ಪಡಗ ತೊಳೆಯಲು ತುಂಬಾ ಅನುಕೂಲವಾಗಲಿದೆ. ಜೊತೆಗೆ ಕುಡಿಯುವ ನೀರಿಗೂ ಸಹಕಾರಿಯಾಗಲಿದೆ.

# ಎಸ್ಸೆಸ್ಸೆಲ್ಸಿ ಪರೀಕ್ಷೆ ಸುಸೂತ್ರಗೊಳಿಸಲು ಸಿದ್ಧತೆ

## ಮಾ.25ರಿಂದ ಪರೀಕ್ಷೆ, ಪರೀಕ್ಷಾ ಕೇಂದ್ರಗಳ ಕೊಠಡಿಗಳಲ್ಲೂ ಸಿಸಿ ಕ್ಯಾಮೆರಾ

**ಕೆ.ಎನ್. ಮಲ್ಲಿಕಾರ್ಜುನ ಮೂರ್ತಿ**


ದಾವಣಗೆರೆ, ಮಾ. 21- ಇದೇ ಮಾ.25ರಿಂದ ಎಸ್.ಎಸ್.ಎಲ್.ಸಿ. ಪರೀಕ್ಷೆ ನಡೆಯಲಿದ್ದು, ಜಿಲ್ಲೆಯಲ್ಲಿ ಪರೀಕ್ಷೆಯನ್ನು ಸುಗಮವಾಗಿ ನಡೆಸಲು ಜಿಲ್ಲಾಡಳಿತ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆಯು ಈಗಾಗಲೇ ಅಗತ್ಯ ಕ್ರಮಗಳನ್ನು ಕೈಗೊಂಡಿದೆ.

ಜಿಲ್ಲೆಯ 82 ಕೇಂದ್ರಗಳಲ್ಲಿ 11131 ಹುಡುಗರು ಹಾಗೂ 11130 ಹುಡುಗಿಯರು ಸೇರಿ ಒಟ್ಟು 22,261 ವಿದ್ಯಾರ್ಥಿಗಳು ಹತ್ತನೇ ತರಗತಿ ಪರೀಕ್ಷೆ ಬರೆಯಲಿದ್ದಾರೆ.

ಜಿಲ್ಲೆಯಲ್ಲಿ 10 ಸೂಕ್ಷ್ಮ ಹಾಗೂ ಅತೀ ಸೂಕ್ಷ್ಮ ಪರೀಕ್ಷಾ ಕೇಂದ್ರಗಳಿವೆ. ಒಟ್ಟರೆ 82 ಮುಖ್ಯ ಅಧೀಕ್ಷಕರು, 16 ಉಪ ಮುಖ್ಯ ಅಧೀಕ್ಷಕರು ಹಾಗೂ 82 ಸ್ಥಾನಿಕ ಜಾಗೃತದಳ ಅಧಿಕಾರಿಗಳು ಪರೀಕ್ಷಾ ಪ್ರಕ್ರಿಕೆಯಲ್ಲಿ ಕಾರ್ಯ ನಿರ್ವಹಿಸಲಿದ್ದಾರೆ.

ಪ್ರತಿ ಪರೀಕ್ಷಾ ಕೇಂದ್ರದಲ್ಲಿ ಸಿಸಿ ಕ್ಯಾಮೆರಾ ಅಳವಡಿಸಿ, ಪರೀಕ್ಷೆಯಲ್ಲಿ ಯಾವುದೇ ಅಕ್ರಮ ನಡೆಯದಂತೆ ತಡೆಯಲು ಈ ಬಾರಿ ಕಠಿಣ ಕ್ರಮ ತೆಗೆದುಕೊಳ್ಳಲಾಗಿದೆ.

ಈ ಹಿಂದೆ ಪರೀಕ್ಷಾ ಕೇಂದ್ರಗಳ ಪ್ರವೇಶ ದ್ವಾರ, ಕಾರಿಡಾರ್ ಮೊದಲಾದ ಕಡೆ ಮಾತ್ರ ಸಿಸಿ ಕ್ಯಾಮೆರಾಗಳಿರುತ್ತಿದ್ದವು. ಆದರೆ ಈ ಬಾರಿ ಕೇಂದ್ರಗಳ ಎಲ್ಲಾ ಕೊಠಡಿಗಳಲ್ಲಿ ಸಿಸಿ ಕ್ಯಾಮೆರಾ ಮತ್ತು ವೆಬ್ ಕ್ಯಾಸ್ಟ್ ಸೌಲಭ್ಯ ಅಳವಡಿಸುವಂತೆ ಇಲಾಖೆ ಸೂಚಿಸಿರುವ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿಯೂ ಕ್ರಮ ಕೈಗೊಳ್ಳಲಾಗಿದೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಜಿ.ಕೊಟ್ರೇಶ್ ತಿಳಿಸಿದ್ದಾರೆ.



### ಕಳೆದ ವರ್ಷ ಫಲಿತಾಂಶದಲ್ಲಿ ಕುಸಿತ ಕಂಡಿದ್ದ ಜಿಲ್ಲೆ

**2021-22ರಲ್ಲಿ ಶೇ.92.55 ಫಲಿತಾಂಶದೊಂದಿಗೆ 10ನೇ ಸ್ಥಾನದಲ್ಲಿದ್ದ ಜಿಲ್ಲೆಯು 2022-23ರಲ್ಲಿ 90.12ರಷ್ಟು ಫಲಿತಾಂಶದೊಂದಿಗೆ ನಾಲ್ಕು ಸ್ಥಾನ ಕುಸಿತ ಕಂಡು, 14ನೇ ಸ್ಥಾನ ಪಡೆದಿತ್ತು. ನೆರೆಯ ಚಿತ್ರದುರ್ಗ ಜಿಲ್ಲೆ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದು, ಶೈಕ್ಷಣಿಕ ವಲಯದಲ್ಲಿ ಸಂಚಲನ ಉಂಟು ಮಾಡಿತ್ತು. ಇದೀಗ ದಾವಣಗೆರೆ ಜಿಲ್ಲೆಯಲ್ಲಿ ಫಲಿತಾಂಶ ಸುಧಾರಣೆಗೆ ಸಾರ್ವಜನಿಕ ಶಿಕ್ಷಣ ಇಲಾಖೆ ಸಾಕಷ್ಟು ಶ್ರಮ ವಹಿಸಿದ್ದು, ಪ್ರತಿಫಲ ಕಾದು ನೋಡಬೇಕಿದೆ.**

### 82 ಪರೀಕ್ಷಾ ಕೇಂದ್ರಗಳು

**ಚನ್ನಗಿರಿ ತಾಲ್ಲೂಕಿನಲ್ಲಿ 16, ದಾವಣಗೆರೆ ಉತ್ತರ 14, ದಕ್ಷಿಣ ವಲಯ 17, ಹರಿಹರ 12, ಹೊನ್ನಾಳಿ 11 ಹಾಗೂ ಜಗಳೂರು ತಾಲ್ಲೂಕಿನಲ್ಲಿ 12 ಸೇರಿ ಒಟ್ಟು 82 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ. ಇವುಗಳ ಪೈಕಿ 40 ಗ್ರಾಮೀಣ ಹಾಗೂ 42 ನಗರ ಪರೀಕ್ಷಾ ಕೇಂದ್ರಗಳಾಗಿವೆ. 22,261 ವಿದ್ಯಾರ್ಥಿಗಳು ಈ ಬಾರಿ ಪರೀಕ್ಷೆ ಬರೆಯಲಿದ್ದಾರೆ.**



**“ ಜಿಲ್ಲೆಯಲ್ಲಿ ಎಸ್ಸೆಸ್ಸೆಲ್ಸಿ ಪರೀಕ್ಷೆ ಸುಗಮವಾಗಿ ನಡೆಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ಈ ಬಾರಿ ಪರೀಕ್ಷಾ ಕೇಂದ್ರಗಳ ಕೊಠಡಿಗಳಲ್ಲಿ ಸಿಸಿ ಕ್ಯಾಮೆರಾ ಅಳವಡಿಕೆಗೆ ಕ್ರಮ ಕೈಗೊಳ್ಳಲಾಗುತ್ತಿದೆ.**

**- ಜಿ. ಕೊಟ್ರೇಶ್, ಡಿಡಿಪಿಐ**

ಪರೀಕ್ಷಾ ಫಲಿತಾಂಶ ಹೆಚ್ಚಳಕ್ಕೆ ಇಲಾಖೆಯಿಂದ ಸಾಕಷ್ಟು ಕ್ರಮಗಳನ್ನು ಕೈಗೊಳ್ಳಲಾಗಿತ್ತು. ಬೋಧನೆಯಲ್ಲಿರುವ ಸಮಸ್ಯೆಗಳನ್ನು ಬಗೆಹರಿಸಲು ಶಿಕ್ಷಕರಿಗೆ ತರಬೇತಿ ನೀಡಲಾಗಿತ್ತು. ತಾಲ್ಲೂಕು ಹಂತಗಳಲ್ಲಿ ವಿಷಯವಾರು ತರಬೇತಿ ಕಾರ್ಯಾಗಾರ ನಡೆಸಲಾಗಿದೆ. ಮೂರು ಹಂತಗಳಲ್ಲಿ ವಿವಿಧ ರೀತಿಯಲ್ಲಿ ಸರಣಿ ಪರೀಕ್ಷೆಗಳನ್ನು ವಿದ್ಯಾರ್ಥಿಗಳಿಗಾಗಿ ನಡೆಸಲಾಗಿದೆ ಎಂದು ಹೇಳಿದರು.

ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ. ಇಟ್ನಾಳ್ ಅವರ ಸಲಹೆಯಂತೆ ಮಾದರಿ ಪ್ರಶ್ನೆ ಪತ್ರಿಕೆಗಳನ್ನು ನೀಡಿ ವಿದ್ಯಾರ್ಥಿಗಳಿಗೆ ಸಿದ್ಧತೆ ಮಾಡಿಕೊಳ್ಳುವ ಬಗ್ಗೆ ತಿಳಿಸಿಕೊಡಲಾಗಿದೆ ಎಂದು ಡಿಡಿಪಿಐ ಕೊಟ್ರೇಶ್ ಹೇಳಿದರು.

ಚನ್ನಗಿರಿ ತಾಲ್ಲೂಕಿನಲ್ಲಿ ಸಂಜೆ 6 ರಿಂದ 11 ಗಂಟೆವರೆಗೆ ರಾತ್ರಿ ಶಾಲೆಗಳನ್ನು ನಡೆಸಿ ವಿದ್ಯಾರ್ಥಿಗಳಿಗೆ ಬೋಧಿಸಲಾಗಿದೆ. ದಾವಣಗೆರೆ ಉತ್ತರ ಹಾಗೂ ದಕ್ಷಿಣ ವಲಯಗಳಲ್ಲಿ ಬೆಳಿಗ್ಗೆ 6 ಗಂಟೆಯಿಂದಲೇ ವಿಶೇಷ ತರಗತಿಗಳನ್ನು ನಡೆಸಲಾಯಿತು ಎಂದರು.

ಧಾರವಾಡದ ಗ್ರಾಮ ವಿಕಾಸ ಸಂಸ್ಥೆಯವರಿಂದ ಪ್ರತಿ ತಾಲ್ಲೂಕಿನಲ್ಲಿ ಆಯ್ದ ವಿದ್ಯಾರ್ಥಿಗಳಿಗೆ ತರಬೇತಿ ಕೊಡಲಾಗಿತ್ತು. ಮಾನವ ಸಂಪನ್ಮೂಲ ವ್ಯಕ್ತಿ ನಂದೀಶ್ ವಿ.ಶೆಟ್ಟರ್ ಅವರು ಆರೂ ತಾಲ್ಲೂಕುಗಳ ಹತ್ತು ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಪರೀಕ್ಷೆಯನ್ನು ಒತ್ತಡ ರಹಿತವಾಗಿ, ಹಬ್ಬದಂತೆ ಸಂಭ್ರಮಿಸುವುದು ಹೇಗೆ? ಎಂಬುದರ ಬಗ್ಗೆ ತರಬೇತಿ ನೀಡಿದ್ದಾರೆ ಎಂದರು.

# ಕೇಂದ್ರ ಸಶಸ್ತ್ರ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಹುದ್ದೆಗಳಿಗೆ ಅರ್ಜಿ

ದಾವಣಗೆರೆ ಮಾ. 20 - ಭಾರತ ಸರ್ಕಾರದಿಂದ ದೆಹಲಿ ಪೊಲೀಸ್ ಮತ್ತು ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳ ಸಬ್‌ಇನ್ಸ್‌ಪೆಕ್ಟರ್ ವಿವಿಧ ಹಂತದ ಹುದ್ದೆಗಳ ನೇಮಕಾತಿಗಾಗಿ ಅರ್ಜಿ ಆಹ್ವಾನಿಸಲಾಗಿದ್ದು ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪದವಿ ಅಥವಾ ತತ್ಸಮಾನ ವಿದ್ಯಾರ್ಹತೆ ಪಡೆದಿರುವ ಅಭ್ಯರ್ಥಿಗಳು ಅರ್ಹರಿದ್ದಾರೆ.

ಆಸಕ್ತ ಅಭ್ಯರ್ಥಿಗಳು ವೆಬ್‌ಸೈಟ್ htt://ssc.gov.in ಮತ್ತು www.ssc.kkr.kar.nic.in ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಮಾರ್ಚ್ 28 ಕೊನೆಯ ದಿನವಾಗಿದೆ. ವಯೋಮಿತಿ ಸಾಮಾನ್ಯ ವರ್ಗದ ಅಭ್ಯರ್ಥಿಗಳು 20 ರಿಂದ 25 ವರ್ಷದೊಳಗಿರಬೇಕು. ಪ.ಜಾತಿ, ಪ.ಪಂಗಡ ಮತ್ತು ಒ.ಬಿ.ಸಿ, ಇ.ಎಸ್.ಎಂ ಇತರೆ ನಿರ್ದಿಷ್ಟ ವರ್ಗಗಳಿಗೆ ವಯೋಮಿತಿ ಸಡಿಲಿಕೆ ಇರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ – 08025502520, 0802527342 ಅಥವಾ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ದಾವಣಗೆರೆ. 08192-259446 ಸಂಖ್ಯೆಗೆ ಕರೆ ಮಾಡಬಹುದೆಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಅಧಿಕಾರಿ ಡಿ. ರವೀಂದ್ರ ತಿಳಿಸಿದ್ದಾರೆ.

# ಜಾತ್ರೆಗಳಲ್ಲಿ ಹರಡುವ ಸಾಂಕ್ರಾಮಿಕ ರೋಗಗಳ ಬಗ್ಗೆ ಜಾಗೃತಿ ಅಗತ್ಯ

ದಾವಣಗೆರೆ,ಮಾ.21- ಹೆಚ್ಚು ಜನರು ಒಂದೆಡೆ ಸೇರುವ ಜಾತ್ರೆಗಳ ಸಂದರ್ಭದಲ್ಲಿಯೇ ಸಾಂಕ್ರಾಮಿಕ ರೋಗಗಳು ಹೆಚ್ಚಿನದಾಗಿ ಕಾಣಿಸಿಕೊಳ್ಳುತ್ತವೆ. ಹಾಗಾಗಿ ಜನತೆ ಈ ಬಗ್ಗೆ ಜಾಗೃತಿ ವಹಿಸಬೇಕು ಎಂದು ಜೆಜೆಎಂಎಂಸಿ ಪ್ರಾಧ್ಯಾಪಕರು ಹಾಗೂ ಸಮುದಾಯ ಆರೋಗ್ಯ ವಿಭಾಗದ ಮುಖ್ಯಸ್ಥರೂ ಆದ ಡಾ.ಎಂ.ಎಸ್. ಅನುರೂಪ ಸಲಹೆ ನೀಡಿದರು.

ನಗರದ ಬಾಪೂಜಿ ಮಕ್ಕಳ ಆಸ್ಪತ್ರೆ ಸಭಾಂಗಣದಲ್ಲಿ ಇಂದು ಏರ್ಪಾಡಾಗಿದ್ದ ವಿವೇಕ ಪೋಷಕರ ಆರೋಗ್ಯ ವೇದಿಕೆ ಕಾರ್ಯಕ್ರಮದಲ್ಲಿ 'ಎಲ್ಲೆಲ್ಲೂ ಜಾತ್ರೆ ಸಂಭ್ರಮಾಚರಣೆ, ಹೆಚ್ಚುತ್ತಿರುವ ಸಾಂಕ್ರಾಮಿಕ ಕಾಯಿಲೆಗಳ ಬಗ್ಗೆ ಅರಿವಿರಲಿ' ಎಂಬ ವಿಚಾರವಾಗಿ ಅವರು ಮಾತನಾಡಿದರು.

ಜಾತ್ರೆಗಳಲ್ಲಿ ಅತಿಯಾದ ಜನಸಾಂದ್ರತೆಯಿಂದಾಗಿ ಕುಡಿಯುವ ನೀರು, ಸೇವಿಸುವ ಆಹಾರ ಮತ್ತು ಉಸಿರಾಡುವ ಗಾಳಿಯೂ ರೋಗಾಣುಗಳಿಂದ ಕಲುಷಿತಗೊಂಡು ರೋಗಗಳು ಹರಡಲು ಕಾರಣವಾಗುತ್ತದೆ.

ಜಠರ ಮತ್ತು ಕರುಳಿನ ಸೋಂಕುಗಳಿಂದ ಅತಿಸಾರ, ಪೋಲಿಯೋ, ಕಾಲರ, ಹೆಪಟೈಟಿಸ್, ಟೈಫಾಯ್ಡ್ ರೋಗಗಳು, ಬ್ಯಾಕ್ಟೀರಿಯಾ ವೈರಸ್‌ಗಳು ಉಂಟಾಗುತ್ತವೆ. ಇವು ಕಲುಷಿತ ನೀರು ಆಹಾರ ಮತ್ತು ನೀರಿನಿಂದ ಹರಡುತ್ತವೆ ಹಾಗಾಗಿ ಬೇಧಿ, ವಾಂತಿ ಮತ್ತು ಜ್ವರ ಲಕ್ಷಣಗಳು ಕಾಣಿಸುತ್ತವೆ.

ಜಾತ್ರೆಯಲ್ಲಿ ಸಂತೋಷ ಸಂಭ್ರಮ ಇರುತ್ತೆ ನಿಜ, ಆದರೆ, ಸೋಂಕಿತ ವ್ಯಕ್ತಿಗಳು ಕೆಮ್ಮಿದಾಗ, ಸೀನಿದಾಗ ರೋಗಾಣುಗಳು ಗಾಳಿಯ ಮೂಲಕ ಇತರ ವ್ಯಕ್ತಿಗಳ ಶ್ವಾಸಕೋಶಕ್ಕೆ ಬಹುಬೇಗ ಹರಡುತ್ತವೆ. ಆ ಸಂಭ್ರಮ ನಂತರ ಇಲ್ಲವಾಗುತ್ತದೆ. ಈ ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟಲು ಹೆಪಟೈಟಿಸ್, ಟೈಫಾಯ್ಡ್, ದಢಾರ ರೋಗಗಳ ವಿರುದ್ದದ ಲಸಿಕೆಗಳನ್ನು ಜಾತ್ರೆಗಳು ಪ್ರಾರಂಭವಾಗುವ ಮುನ್ನವೇ ಹಾಕಿಸಿಕೊಳ್ಳಬೇಕಾಗುತ್ತದೆ.

ಜಾತ್ರೆಯಲ್ಲಿ ಮಾರಲ್ಪಡುವ ಐಸ್, ಕಬ್ಬಿನಹಾಲು, ಜ್ಯೂಸ್ ಇತ್ಯಾದಿ ಕುಡಿಯಬಾರದು, ತೆರದಿಟ್ಟ ಆಹಾರ ಪದಾರ್ಥ ಸೇವಿಸಬಾರದು. ನೊಣ ಮತ್ತು ಸೊಳ್ಳೆಗಳಿಂದ ಅನೇಕ ಕಾಯಿಲೆಗಳು ಹರಡುವ ಸಾಧ್ಯತೆ ಇರುತ್ತದೆ. ಸುರಕ್ಷಿತ ಆಹಾರ ಮತ್ತು ಶುದ್ಧ ನೀರನ್ನು ಬಳಸಬೇಕು. ಮಾಂಸ ಮತ್ತು ಎಲ್ಲ ಪದಾರ್ಥಗಳನ್ನು ಸರಿಯಾಗಿ ಬೇಯಿಸಬೇಕು. ಹಸಿ ಹಣ್ಣು ಮತ್ತು ತರಕಾರಿಗಳನ್ನು ಚೆನ್ನಾಗಿ ತೊಳೆದು ಉಪಯೋಗಿಸಬೇಕು. ಆಹಾರ ಪದಾರ್ಥಗಳನ್ನು ನೊಣಗಳಿಂದ ಸಂರಕ್ಷಿಸಬೇಕು ಜಾತ್ರೆಯಲ್ಲಿ ಮಾಡುವ ಮೀನು, ಮಟನ್ ಸಾರನ್ನು 24 ಗಂಟೆಯ ನಂತರ ತಿನ್ನಬಾರದು. ಕೈಗಳನ್ನು ಸಾಬೂನು ಮತ್ತು ನೀರಿನಿಂದ ಆಗಾಗ ತೊಳೆದುಕೊಳ್ಳಬೇಕು. ಶ್ವಾಸಕೋಶ ಸೋಂಕುಗಳಿಂದ ರಕ್ಷಿಸಿಕೊಳ್ಳಲು ಮಾಸ್ಕ ಧರಿಸಬೇಕು.



### ಬಾಪೂಜಿ ಮಕ್ಕಳ ಅಸ್ಪತ್ರೆ ವಿವೇಕ ಪೋಷಕರ ವೇದಿಕೆ ಕಾರ್ಯಕ್ರಮದಲ್ಲಿ ಡಾ.ಎಂ.ಎಸ್.ಅನುರೂಪ ಸಲಹೆ

ಕೆಮ್ಮು, ಶೀತ ಇರುವ ಜನರು ಜಾತ್ರೆಗಳಿಗೆ ಹೋಗಬಾರದು ಅಲ್ಲದೇ ರೋಗನಿರೋಧಕ ಶಕ್ತಿ ಕಡಿಮೆ ಇರುವ ವ್ಯಕ್ತಿಗಳೂ ಸಹ ಜಾತ್ರೆಗಳಲ್ಲಿ ಭಾಗವಹಿಸಬಾರದು ಎಂಬ ಸಲಹೆಯನ್ನು ಡಾ.ಅನೂರೂಪ ನೀಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಬಿಸಿಎಚ್ಐ ಅಂಡ್ ಆರ್‌ಸಿ ನಿರ್ದೇಶಕ ಡಾ.ಜಿ.ಗುರುಪ್ರಸಾದ್, ಬೇಸಿಗೆಯಲ್ಲಿ ವಾಂತಿ, ಬೇಧಿ, ಡೆಂಗ್ಯೂ ಇತ್ಯಾದಿ ಸಾಂಕ್ರಾಮಿಕ ಕಾಯಿಲೆಗಳು ಜಾಸ್ತಿ ಆಗುತ್ತವೆ. ಹಾಗಾಗಿ ಶುದ್ಧ ನೀರು, ಶುದ್ಧ ಆಹಾರ, ಸ್ವಚ್ಛತೆ ಬಗ್ಗೆ ಜಾಗೃತಿ ವಹಿಸಬೇಕು ಎಂದು ತಿಳಿಸಿದರು.

ಡಾ. ಕೌಜಲಗಿ, ಡಾ.ಬಸಂತ್‌ಕುಮಾರ್, ವ್ಯವಸ್ಥಾಪಕ ಎಸ್.ಎನ್.ಗುಬ್ಬಿ, ಸಂಯೋಜಕಿ ಸಿ.ಎಂ.ಅಂಜಲಿ ಮತ್ತಿತರರು ಹಾಜರಿದ್ದರು.

# ನೀರು ಪೂರೈಸಲು ವಿಫಲವಾದಲ್ಲಿ ಹೋರಾಟ



ದಾವಣಗೆರೆ, ಮಾ.21- ಮಹಾಪಾಲಿಕೆಯ ಆಡಳಿತರೂಢ ಕಾಂಗ್ರೆಸ್ ಪಕ್ಷವು ನಗರದ ಜನರ ದಾಹ ತಣಿಸುವಲ್ಲಿ ವಿಫಲವಾಗಿದೆ ಎಂದು ವಿರೋಧ ಪಕ್ಷದ ನಾಯಕ ಪ್ರಸನ್ನ ಕುಮಾರ್ ಕಿಡಿಕಾರಿದ್ದಾರೆ.

ಕಳೆದ ಎರಡು ದಿನಗಳಿಂದ ನಗರದ 25ಕ್ಕೂ ಅಧಿಕ ವಾರ್ಡ್‌ಗಳಲ್ಲಿ ನೀರಿನ ಬರ ಹೆಚ್ಚಾಗಿದೆ. ಬೇಸಿಗೆಯಲ್ಲಿ ನೀರು ಪೂರೈಸುವ ದೃಷ್ಟಿಯಿಂದ 2ತಿಂಗಳ ಮುಂಚೆಯೇ ನೀರನ್ನು ಸಂಗ್ರಹಿಸಬೇಕಿತ್ತು ಎಂದು ದೂರಿದರು.

ಪ್ರತಿ ದಿನ ನಗರಕ್ಕೆ ಕನಿಷ್ಠ 60ಎಂಎಲ್‌ಡಿ ಪ್ರಮಾಣದ ನೀರಿನ ಅವಶ್ಯಕತೆ ಇದ್ದು, ಇಲ್ಲಿನ ರಾಜನಹಳ್ಳಿ ಕೆರೆ ಬರಿದಾಗಿದೆ. ಕುಂದವಾಡ ಕೆರೆ ಮತ್ತು ಟಿವಿ ಸ್ಟೇಷನ್ ಕೆರೆಯಲ್ಲೂ ನೀರಿನ ಮಟ್ಟ ಕಡಿಮೆಯಾಗಿದೆ ಇದಕ್ಕೆಲ್ಲ ಮುಖ್ಯ ಕಾರಣ ಆಡಳಿತ ಪಕ್ಷದ ಬೇಜವಾಬ್ದಾರಿ ಎಂದು ಟೀಕಿಸಿದರು.

ಬೇಸಿಗೆಗಾಗಿ ನೀರು ಸಂಗ್ರಹಿಸುವಂತೆ ಜನವರಿಯಲ್ಲಿ ಜಿಲ್ಲಾಡಳಿತಕ್ಕೆ ಎರಡು ಬಾರಿ ಮನವಿ ಸಲ್ಲಿಸಲಾಗಿತ್ತು. ಪಾಲಿಕೆಯ ಸಾಮಾನ್ಯ ಸಭೆಯಲ್ಲೂ ದುರ್ಗಾಂಬಿಕಾ ಜಾತ್ರೆ ಮತ್ತು ಬೇಸಿಗೆಯಲ್ಲಿ ಕುಡಿಯುವ ನೀರು ಪೂರೈಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೇಳಿಕೊಂಡರೂ ಕಾಂಗ್ರೆಸ್ ಇಲ್ಲಿನ ಜನರಿಗೆ ಬರದ ಗ್ಯಾರಂಟಿ ನೀಡಿದೆ ಎಂದು ಹೇಳಿದರು.

ಈ ಕೂಡಲೇ ಜಿಲ್ಲಾಡಳಿತ ಮತ್ತು ಜಿಲ್ಲಾ ಉಸ್ತುವಾರಿ ಸಚಿವರು, ಈ ಕುರಿತು ಸರ್ಕಾರದ ಗಮನಕ್ಕೆ ತಂದು, ಮುಂದಿನ 45 ದಿನಗಳಿಗೆ ಡ್ಯಾಮ್‌ನಿಂದ ನೀರು ಹರಿಸುವಂತೆ ಕ್ರಮ ಕೈಗೊಳ್ಳುವ ಜತೆಗೆ ನೀರಿನ ವ್ಯತ್ಯಯ ಉಂಟಾದ ವಾರ್ಡ್‌ಗಳಿಗೆ ಕುಡಿಯುವ ನೀರು ಪೂರೈಸಬೇಕು ಇಲ್ಲದಿದ್ದರೇ ಹೋರಾಟ ಮಾಡುವುದಾಗಿ ಎಚ್ಚರಿಸಿದರು.

# ರಾಜ್ಯ ನೇಕಾರ ಪ್ರಕೋಷ್ಠದ ಸದಸ್ಯರಾಗಿ ಬಸವರಾಜ್ ಲಕ್ಷ್ಮೇಶ್ವರ



ರಾಣೇಬೆನ್ನೂರು, ಮಾ.21- ಇಲ್ಲಿನ ನಗರಸಭೆ ಮಾಜಿ ಅಧ್ಯಕ್ಷ ಬಸವರಾಜ್ ಲಕ್ಷ್ಮೇಶ್ವರ ಅವರನ್ನು ಬಿಜೆಪಿಯ ರಾಜ್ಯ ನೇಕಾರ ಪ್ರಕೋಷ್ಠದ ಸದಸ್ಯರಾಗಿ ರಾಜ್ಯ ಸಂಚಾಲಕ ಬಿ.ಎಸ್.ಸೋಮಶೇಖರ್ ಅವರು ನೇಮಕ ಮಾಡಿ ಆದೇಶಿಸಿದ್ದಾರೆ.

# ತಾರೇಹಳ್ಳಿಯಲ್ಲಿ ಇಂದು ಓಕುಳಿ

ಜಗಳೂರು ತಾಲ್ಲೂಕಿನ ತಾರೇಹಳ್ಳಿ ಗ್ರಾಮದಲ್ಲಿ ಶ್ರೀ ಲಕ್ಷ್ಮಿ ರಂಗನಾಥ ಸ್ವಾಮಿ ಮಹಾರಥೋತ್ಸವದ ಪ್ರಯುಕ್ತ ಇಂದು ಓಕುಳಿ ಉತ್ಸವ ನಡೆಯಲಿದೆ.

**ಮನೆ ಕೆಲಸಕ್ಕೆ ಬೇಕಾಗಿದ್ದಾರೆ**
ಮನೆ ಕೆಲಸಕ್ಕೆ ಕುಟುಂಬ ಬೇಕಾಗಿದ್ದಾರೆ.
ವಾಸಕ್ಕೆ ಸರ್ವಿಸ್ ಕ್ವಾಟ್ರಸ್ ಕೊಡಲಾಗುವುದು.
ಸಸ್ಯಹಾರಿ. ಚಿಕ್ಕ ಕುಟುಂಬ ಇರಬೇಕು.
ಸೂಕ್ತ ಪರಿಚಯದೊಂದಿಗೆ ಸಂಪರ್ಕಿಸಿ.
9686195326
9686195329

ಪೋಷಕರಾಗುವ
ಈ ಸಮಯ ಸುಗಮವಾಗಿರಲು
ನಿಮ್ಮ ನಂಬಿಕೆ ನಮ್ಮ ಮೇಲಿರಲಿ
ನಂಜಪ್ಪ ಹಾಸ್ಪಿಟಲ್ಸ್
ಪ್ರಸೂತಿ ಮತ್ತು ಸ್ತ್ರೀರೋಗ ಚಿಕಿತ್ಸಾ
ಸೇವೆಗಳು ಈಗ ನಂಜಪ್ಪ ಆಸ್ಪತ್ರೆಯಲ್ಲಿ
ಸೇವೆಗಳು :
- ಗರ್ಭಾವಸ್ಥೆಯ ಆರೈಕೆ
- ಪ್ರಸವಪೂರ್ವ ಮತ್ತು ನಂತರದ ಆರೈಕೆ
- ನೋವು ರಹಿತ ಹೆರಿಗೆ ಸೇರಿದಂತೆ ಇತರೆ ಹೆರಿಗೆ ಸೇವೆಗಳು
- ಹೆಚ್ಚಿನ ಅಪಾಯದ ಗರ್ಭಧಾರಣೆಯ ನಿರ್ವಹಣೆ ಸೇರಿದಂತೆ ಪ್ರಸೂತಿಶಾಸ್ತ್ರ
- ಲ್ಯಾಪರೊಸ್ಕೋಪಿ ಸ್ತ್ರೀರೋಗ ಶಸ್ತ್ರಚಿಕಿತ್ಸೆ
- ಐವಿಎಫ್
ಅಪಾಯಿಂಟ್ಮೆಂಟ್ ಗಾಗಿ ಕರೆ ಮಾಡಿ
08192-260111/260222

ಮಾಗನೂರು ಬಸಪ್ಪ ರಸ್ತೆ, ತರಳಬಾಳು ಲೇಔಟ್, ದಾವಣಗೆರೆ

KA/SK/DVG-028/2024-2026. O/P @ B.V. Nagar P.O. **JANATHAVANI -** Published, Owned and Printed by M.S. Vikas, at Jayadhara Offset Printers, # 605, Hadadi Road, Davangere - 5, Published from # 605, Hadadi Road, Davangere - 5. Editor: M.S. Vikas